

ಸುದ್ದಿಗಳ ಹೊನಲು

# ಸಂಜೆ ಮುಗಿಲು

ನೇಣು ಸಾರಥ್ಯದಲ್ಲಿ...


ಸಂಪುಟ: 21, ಸಂಚಿಕೆ: 305, ಪುಟಗಳು: 8, ಸೋಮವಾರ, 12 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3







### ಸುಭಾಷಿತ

ಯೌವನದ ಅವಧಿ ಚಿಕ್ಕದು. ಅದು ದೀರ್ಘಾಯುವಲ್ಲ.ಯುವಜನರು ಸಾಟಿಯಿಲ್ಲದ ಶಕ್ತಿ ಮತ್ತು ಉತ್ಸಾಹವನ್ನು ಹೊಂದಿದ್ದಾರೆ. ಬದಲಾವಣೆ ತರುವ ಶಕ್ತಿ ಅವರಿಗಿದೆ.

। ಸ್ವಾಮಿ ವಿವೇಕಾನಂದ

### ಪಂಚಾಂಗ

(ಸೋಮವಾರ 12, ಆಗಸ್ಟ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ವರ್ಷ ಋತು,
- ಶ್ರಾವಣ ಮಾಸ, ಶುಕ್ಲ ಪಕ್ಷ,
- ವಾರ: ಸೋಮವಾರ, ತಿಥಿ: ಸಪ್ತಮಿ
- ನಕ್ಷತ್ರ: ಸ್ವಾತಿ
- ರಾಹುಕಾಲ: 7.46 ರಿಂದ 9.20
- ಗುಳಿಕಕಾಲ: 2.02 ರಿಂದ 3.36
- ಯಮಗಂಡಕಾಲ: 10.54 ರಿಂದ 12.28

## ಸಂಕ್ಷಿಪ್ತ ಸುದ್ದಿ

### ಸೇವೆ ಸ್ಥಗಿತಗೊಳಿಸಿ ಕರ್ನಾಟಕ ಜೂನಿಯರ್ ವೈದ್ಯರ ಪ್ರತಿಭಟನೆ




**ಬೆಂಗಳೂರು:** ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜಿನಲ್ಲಿ ಸ್ನಾತಕೋತ್ತರ ವೈದ್ಯೆ ವಿದ್ಯಾರ್ಥಿ ಮೇಲಿನ ಅತ್ಯಾಚಾರ, ಹತ್ಯೆ ಕೇಸ್‌ಗೆ ಎಲ್ಲೆಡೆ ಭಾರೀ ಆಕ್ರೋಶ ವ್ಯಕ್ತವಾಗಿದೆ. ಇದರ ವಿರುದ್ಧ ಫೆಡರೇಶನ್ ಆಫ್ ರೆಸಿಡೆಂಟ್ ಡಾಕ್ಟರ್ಸ್ ಅಸೋಸಿಯೇಷನ್ (ಫೋರ್ಡಾ) ಪ್ರತಿಭಟನೆಗೆ ಕರೆ ನೀಡಿದ್ದು ಇಂದಿನಿಂದ ದೇಶಾದ್ಯಂತ ವೈದ್ಯರು ಪ್ರತಿಭಟನೆಗೆ ಇಳಿದಿದ್ದಾರೆ. ಇನ್ನು ಕರ್ನಾಟಕದಲ್ಲೂ ಜೂನಿಯರ್ ವೈದ್ಯರು ಸೇವೆ ನಿಲ್ಲಿಸಿ ಪ್ರತಿಭಟನೆಗೆ ಇಳಿದಿದ್ದು ಇತ್ತ ಸೀನಿಯರ್ ವೈದ್ಯರು ಕಪ್ಪು ಪಟ್ಟಿ ಕಟ್ಟಿಕೊಂಡು ರೋಗಿಗಳ ಚಿಕಿತ್ಸೆ ಮುಂದುವರೆಸಿದ್ದಾರೆ. ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಜೂನಿಯರ್ ವೈದ್ಯರು ಪ್ರತಿಭಟನೆಗೆ ಇಳಿದಿದ್ದಾರೆ. ಪುಟ 2

### ತಮಿಳುನಾಡಿನಲ್ಲಿ ಭಾರಿ ರಸ್ತೆ ಅಪಘಾತ, ಐವರು ಕಾಲೇಜು ವಿದ್ಯಾರ್ಥಿಗಳು ಸಾವು



**ತಮಿಳುನಾಡು:** ತಮಿಳುನಾಡಿನ ತಿರುವಳ್ಳೂರು ಜಿಲ್ಲೆಯ ತಿರುತ್ತಣಿಯಲ್ಲಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ಐವರು ಕಾಲೇಜು ವಿದ್ಯಾರ್ಥಿಗಳು ಸಾವನ್ನಪ್ಪಿದ್ದು, ಇಬ್ಬರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಪೊಲೀಸರ ಪ್ರಕಾರ, ಒಟ್ಟು ಏಳು ವಿದ್ಯಾರ್ಥಿಗಳು ಚೆನ್ನೈ-ತಿರುಪತಿ ಹೆದ್ದಾರಿಯಲ್ಲಿ ಪ್ರಯಾಣಿಸುತ್ತಿದ್ದಾಗ ಟ್ರಕ್ ಒಂದು ಅವರಿದ್ದ ಕಾರಿಗೆ ಡಿಕ್ಕಿ ಹೊಡೆದಿದೆ. ರಸ್ತೆ ಅಪಘಾತದ ಸುದ್ದಿ ಹೊರಬಿದ್ದ ನಂತರ ರಕ್ಷಣಾ ತಂಡಗಳು ಮತ್ತು ಕನಗಮ್ಮಛತ್ರಂ ಪೊಲೀಸರು ಘಟನಾ ಸ್ಥಳಕ್ಕೆ ಧಾವಿಸಿದರು. ಪುಟ 2







### ಬೆಳಬೆಳಗ್ಗೆ ವರುಣನ ಆಗಮನ | ಕೆರೆಯಂತಾದ ರಸ್ತೆಗಳು, ಹಲವೆಡೆ ಟ್ರಾಫಿಕ್

# ಬೆಂಗಳೂರಿಗೆ ಮಳೆ ಅವಾಂತರ



**ಬೆಂಗಳೂರು:** ಬೆಂಗಳೂರಲ್ಲಿ ರಾತ್ರಿಯಿಡೀ ಸುರಿದ ಮಳೆ ಸರಣಿ ಅವಾಂತರಗಳನ್ನು ಸೃಷ್ಟಿಸಿದೆ. ಎಲ್ಲೆಲ್ಲೂ ನೀರು, ರಸ್ತೆಗಳು ಹೊಳೆಯಂತಾಗಿದ್ದು, ಅಂಡರ್‌ಪಾಸ್‌ಗಳು ಜಲಾವೃತಗೊಂಡಿವೆ. ವಾಹನ ಸವಾರರು ಪರದಾಡುವಂತಾಗಿದೆ. ಚಿಕ್ಕಪೇಟೆ ಮೆಟ್ರೋ ಸ್ಟೇಷನ್ ಮುಭಾಗದ ರಸ್ತೆ ಮುಳುಗಡೆಯಾಗಿದೆ. ಸುಮಾರು 2 ಅಡಿಯಷ್ಟು ನೀರು ಆವರಿಸಿದೆ.

ರಾಜಧಾನಿ ಬೆಂಗಳೂರಿನಲ್ಲಿ ನಿನ್ನೆ ರಾತ್ರಿ 2 ಗಂಟೆಗೆ ಶುರುವಾದ ಮಳೆ ಮುಂಜಾನೆವರೆಗೂ ಅಬ್ಬರಿಸಿ ಬೊಬ್ಬಿರಿದಿದೆ. ಭಾರಿ ಮಳೆಯಿಂದ ಕೆ.ಆರ್.ಮಾರ್ಕೆಟ್ ಜಲಮಯವಾಗಿದೆ.

ಫ್ಲವರ್ ಮಾರ್ಕೆಟ್ ನಲ್ಲಂತೂ ಅಕ್ಷರಶಃ ನರಕ ದರ್ಶನ ತೋರಿದೆ. ಹೂವುಗಳು ಕೆರೆಯಂತೆ ಹರಿಯುತ್ತಿದ್ದ ನೀರಿನಲ್ಲಿ ಕೊಚ್ಚಿಕೊಂಡು ಹೋಗಿವೆ. ನಸುಕಿನ ವೇಳೆಯಿಂದಲೇ ಹೂವಿನ ವ್ಯಾಪಾರಕ್ಕೆ ಬಂದಿದ್ದ ವ್ಯಾಪಾರಿಗಳು ಕಂಗಾಲಾಗಿದ್ದಾರೆ.

ಒಕಳಿಪುರಂನ ಅಂಡರ್ ಪಾಸ್ ಗೆ ನೀರು ನುಗ್ಗಿ, ವಾಹನ ಸವಾರರು ಹರಸಾಹಸ ಪಡುವ ಸ್ಥಿತಿ ನಿರ್ಮಾಣವಾಗಿತ್ತು. ನೀರು ನಿಂತದ್ದ ರಸ್ತೆಯಲ್ಲಿಯೇ ಆ ಯಂಬುಲೆನ್ಸ್ ಸಿಲುಕಿಕೊಂಡಿತ್ತು. ಪೇಷಂಟ್ ಇಲ್ಲದಿರೋದ್ರಿಂದ, ನೀರಿನ ಪ್ರಮಾಣ ಕಡಿಮೆ ಆದ್ಮೇಲೆ ಆ ಯಂಬುಲೆನ್ಸ್ ತೆರಳಿತು.

ಚಿಕ್ಕಪೇಟೆ ಮೆಟ್ರೋ ಸ್ಟೇಷನ್ ಮುಭಾಗದ ರಸ್ತೆ ಮುಳುಗಡೆಯಾಗಿದೆ. ಸುಮಾರು 2 ಅಡಿಯಷ್ಟು ನೀರು ಆವರಿಸಿತ್ತು. ಗುಂಡಿಗಳು ಯಾವುದೋ, ರಸ್ತೆಯಾವುದೇ ಒಂದು ಕಾಣದ ಪರಿಸ್ಥಿತಿ ನಿರ್ಮಾಣವಾಗಿತ್ತು. ವಾಹನ ಸವಾರರು ಭಯದಲ್ಲಿಯೇ ಸಂಚಾರ ಮಾಡುತ್ತಿದ್ದ ದೃಶ್ಯ ಕಂಡುಬಂತು.

ರಾತ್ರೋರಾತ್ರಿ ಬೆಂಗಳೂರಲ್ಲಿ ದಿಢೀರ್ ಮಳೆ ಸುರಿದಿದ್ದು, ಮನೆಯಿಂದ ಹೊರಬಂದವರು ನಲುಗಿ ಹೋಗಿದ್ದಾರೆ. ಮೆಜೆಸ್ಟಿಕ್, ರಾಜಾಜಿನಗರ, ಮಲ್ಲೇಶ್ವರಂ, ಯಶವಂತಪುರ, ಶಾಂತಿನಗರ, ವಿಧಾನಸೌಧ, ಶಿವಾಜಿನಗರ, ಕಾರ್ಪೊರೇಷನ್ ಸರ್ಕಲ್, ಟೌನ್ ಹಾಲ್, ಜಯನಗರ ಸೇರಿ ಹಲವೆಡೆ ಅವಾಂತರಗಳನ್ನು ಸೃಷ್ಟಿಸಿದೆ.

ಸಿಲ್ಕ್ ಬೋರ್ಡ್ ಜಂಕ್ಷನ್‌ನಲ್ಲಿ ರಸ್ತೆ ಮೇಲೆ ನೀರು ನಿಂತಿದ್ದು ಸುಮಾರು 1 ಕಿ.ಲೋ ಮೀಟರ್ ಟ್ರಾಫಿಕ್ ಜಾಮ್ ಆಗಿತ್ತು. ಹೊಸರು ರಸ್ತೆಯಲ್ಲಿ ಭಾರಿ ಟ್ರಾಫಿಕ್ ಜಾಮ್ ಆಗಿದ್ದು ಸವಾರರು ಪರದಾಡುತ್ತಿದ್ದಾರೆ. ಪುಟ 2

### ಕೊಚ್ಚಿಹೋದ ತುಂಗಭದ್ರಾ ಡ್ಯಾಂ ಕ್ರಸ್ಟ್ ಗೇಟ್

## ನದಿ ಪಾತ್ರದ ಗ್ರಾಮಗಳಲ್ಲಿ ಕಟ್ಟೆಚ್ಚರ ವಹಿಸಲು ಸೂಚನೆ



**ಕೊಪ್ಪಳ:** ಕೊಪ್ಪಳ ಜಿಲ್ಲೆ ಮುನಿರಾಬಾದ್ ಬಳಿ ಇರೋ ತುಂಗಭದ್ರಾ ಜಲಾಶಯದ 19ನೇ ಕ್ರಸ್ಟ್ ಗೇಟ್ ಕೊಚ್ಚಿ ಹೋಗಿದೆ. ಇದರಿಂದ ನೀರು ಪೋಲಾಗುತ್ತಿದೆ. ಇದರ ನಡುವೆ ಇಂದು ಕೂಡ ಜಲಾಶಯದಿಂದ ನದಿಗೆ 1.5 ಲಕ್ಷ ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗುತ್ತಿದ್ದು ನದಿಪಾತ್ರದ ಜನರು ಎಚ್ಚರಿಕೆಯಿಂದ ಇರುವಂತೆ ಸೂಚನೆ ನೀಡಲಾಗಿದೆ. ಕ್ರಸ್ಟ್ ಗೇಟ್ ರಿಪೇರಿ ಮಾಡಲು ಡ್ಯಾನಲ್ಲಿನ ನೀರನ್ನು ಹಂತಹಂತವಾಗಿ ಖಾಲಿ ಮಾಡಲು ಸಿಬ್ಬಂದಿ ಮುಂದಾಗಿದ್ದಾರೆ.

ಡ್ಯಾಂ ನೀರನ್ನು ನದಿಗೆ ಹರಿಸಲಾಗುತ್ತಿದೆ. ಹೀಗಾಗಿ ನದಿ ಪಾತ್ರದ ಜನ ಸುರಕ್ಷಿತವಾಗಿರುವಂತೆ ಜಿಲ್ಲಾಡಳಿತ ಡಂಗುರ ಸಾರಿ ಎಚ್ಚರಿಕೆ ನೀಡಿದೆ. ಹಾಗೂ ಯಾವುದೇ ಕಾರಣಕ್ಕೂ ನದಿಗೆ ಇಳಿಯದಂತೆ ಟಿಬಿ ಬೋರ್ಡ್ ಜಿಲ್ಲಾಡಳಿತ ಸೂಚನೆ ನೀಡಿದೆ. ನದಿ ಸಮೀಪಕ್ಕೆ ಮಕ್ಕಳನ್ನು, ಜಾನುವಾರುಗಳು ಹೋಗದಂತೆ ಎಚ್ಚರವಹಿಸಿ. ಟಿಬಿ ಡ್ಯಾಮ್ ನಿಂದ ಅಪಾರ ಪ್ರಮಾಣದ ನೀರು ಬಿಡುಗಡೆ ಮಾಡಲಾಗಿದೆ. ಯಾರೂ ಕೂಡ ನದಿ ಪಾತ್ರಕ್ಕೆ ಹೋಗದಂತೆ ಟಿಬಿ ಡ್ಯಾಮ್ ಕೆಳಭಾಗದ ಕೊಪ್ಪಳ ತಾಲೂಕು, ಗಂಗಾವತಿ ತಾಲೂಕು, ಕಾರಟಗಿ ತಾಲೂಕಿನ ಗ್ರಾಮಗಳಲ್ಲಿ ಡಂಗುರ ಸಾರಿ ಗ್ರಾಮಸ್ಥರಿಗೆ ಸೂಚನೆ ನೀಡಲಾಗಿದೆ. ನಿನ್ನೆಯಿಂದ ಈವರಗೆ 13 ಟಿಎಂಸಿ ನೀರು ಡ್ಯಾಂ ನಿಂದ ಖಾಲಿ ಮಾಡಲಾಗಿದೆ. ಪುಟ 2

### ತುಂಗಭದ್ರಾ ಡ್ಯಾಂ ವಾರ್ಷಿಕ ನಿರ್ವಹಣಾ ಗುತ್ತಿಗೆಗೆ ಎಷ್ಟು ಕೋಟಿ ಹಣ ಸಂದಾಯವಾಗಿದೆ?



**ಕೊಪ್ಪಳ:** ತುಂಗಭದ್ರಾ ಡ್ಯಾಂನ ವಾರ್ಷಿಕ ನಿರ್ವಹಣಾ ಗುತ್ತಿಗೆದಾರರು ಯಾರು? ಅವರಿಗೆ ಎಷ್ಟು ಕೋಟಿ ಹಣ ಸಂದಾಯ ಆಗಿದೆ? ಅಂತ ಬಹಿರಂಗ ಪಡಿಸಬೇಕು ಎಂದು ಗಂಗಾವತಿ ಶಾಸಕ ಜನಾರ್ದನ ರೆಡ್ಡಿ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

ತುಂಗಭದ್ರಾ ಜಲಾಶಯದಲ್ಲಿ ಕಳಚಿಕೊಂಡ 19ನೇ ಕ್ರಸ್ಟ್‌ಗೇಟ್ ವೀಕ್ಷಣೆ ಮಾಡಿದ ಶಾಸಕ ಜನಾರ್ದನ ರೆಡ್ಡಿ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ್ದಾರೆ. ತುಂಗಭದ್ರಾ ಜಲಾಶಯದ ನಿರ್ವಹಣೆಗೆ ಯಾರಿಗೆ ಕೊಟ್ಟಿದ್ದಾರೆ? ಇದಕ್ಕೆ ಎಲ್ಲಾ ಸರ್ಕಾರವೇ ಹೊಣೆ. ಡಿಕೆಶಿ ಅಚಾನಕ್ ಆಗಿದೆ ಅಂತ ಹೇಳ್ತಾರೆ, ಪುಟ 2

### ಅಟ್ಟಾಡಿಸಿಕೊಂಡು ಹೋಗಿ ಮಾರಕಾಸ್ತ್ರಗಳಿಂದ

## ಕೊಚ್ಚಿ ರೌಡಿ ಶೀಟರ್‌ನ ಕೊಲೆ





**ಮಂಗಳೂರು:** ನಟೋರಿಯಸ್ ರೌಡಿ ಶೀಟರ್ ಉಳ್ಳಾಲದ ಕಡಪ್ಪಾರ ಸಮೀರ್‌ನನ್ನು ಅಟ್ಟಾಡಿಸಿ ಕೊಲೆ ಮಾಡಲಾಗಿದ್ದು, ದುಷ್ಕರ್ಮಿಗಳ ಅಟ್ಟಹಾಸಕ್ಕೆ ಮಂಗಳೂರು ಬೆಚ್ಚಿಬಿದ್ದಿದೆ. ಟಾರ್ಗೆಟ್ ಇಲ್ಯಾಸ್ ಕೊಲೆ ಪ್ರಕರಣ ಸೇರಿದಂತೆ ವಿವಿಧ ಪ್ರಕರಣಗಳಲ್ಲಿ ಆರೋಪಿಯಾಗಿದ್ದ ಸಮೀರ್‌ನನ್ನು ದುಷ್ಕರ್ಮಿಗಳ ತಂಡವೊಂದು ಅಟ್ಟಾಡಿಸಿಕೊಂಡು ತಲವಾರಿನಿಂದ ಕಡಿದು ಹತ್ಯೆ ಮಾಡಿದೆ. ಈ ಘಟನೆ ಉಳ್ಳಾಲ ಪೊಲೀಸ್ ಠಾಣಾ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿ 66ರ ಕಲ್ಲಾಪು ಎಂಬಲ್ಲಿ ಭಾನುವಾರ ರಾತ್ರಿ ನಡೆದಿದೆ.

ಸಮೀರ್ ಕಾರಿನಲ್ಲಿ ತಾಯಿ ಮತ್ತು ಕುಟುಂಬದ ಸದಸ್ಯರೊಂದಿಗೆ ಕಲ್ಲಾಪುವಿನ ರೆಸ್ಟೋರೆಂಟ್‌ಗೆ ಊಟಕ್ಕೆಂದು ಆಗಮಿಸಿದ್ದ ವೇಳೆ ತಂಡ ದಾಳಿ ನಡೆಸಿದೆ. ಪುಟ 2

### ಚನ್ನಪಟ್ಟಣ ಉಪಚುನಾವಣೆ

## ಟಿಕೆಟ್ ಗೊಂದಲಕ್ಕೆ ಇಂದು ಬಿಜೆಪಿ ತೆರೆ?

**ರಾಮನಗರ:** ಚನ್ನಪಟ್ಟಣ ಉಪಚುನಾವಣೆಯ ಟಿಕೆಟ್ ಗೊಂದಲಕ್ಕೆ ಇಂದು ಬಿಜೆಪಿ ಹೈಕಮಾಂಡ್ ತೆರೆ ಎಳೆಯುವ ಸಾಧ್ಯತೆಯಿದೆ.



ದೆಹಲಿಯಲ್ಲಿ ಚನ್ನಪಟ್ಟಣ ಉಪಚುನಾವಣೆ ಮೈತ್ರಿ ಅಭ್ಯರ್ಥಿ ಆಯ್ಕೆ ಸಂಬಂಧ ಇಂದು ಸಭೆ ನಡೆಯಲಿದೆ. ಅಧ್ಯಕ್ಷ ಜೆ.ಪಿ.ನಡ್ಡಾ ನೇತೃತ್ವದಲ್ಲಿ ನಡೆಯುವ ಸಭೆ ಮಾಜಿ ಸಚಿವ ಸಿಪಿ ಯೋಗೇಶ್ವರ್ ಅವರಿಗೆ ಬಿಜೆಪಿ ಹೈಕಮಾಂಡ್ ಬುಲಾವ್ ನೀಡಿದೆ.

ಉಪಚುನಾವಣೆಯಲ್ಲಿ ಟಿಕೆಟ್ ಸಿಗದಿದ್ದರೆ ಸ್ವತಂತ್ರ ಸ್ಪರ್ಧೆ ಬಗ್ಗೆ ಅಭಿಪ್ರಾಯ ಸಂಗ್ರಹಿಸಲು ಸಮಾವೇಶ ನಡೆಸಲು ಸಿಪಿವೈ ಮುಂದಾಗಿದ್ದರು. ಪುಟ 2

### ಸಿದ್ದೇಶ್ವರನಾಥ ಮಂದಿರದಲ್ಲಿ ಕಾಲ್ತುಳಿತ

## 7 ಭಕ್ತರ ಸಾವು



**ಬಿಹಾರ:** ಬಿಹಾರದ ಜೆಹಾನಾಬಾದ್‌ನಲ್ಲಿ ಶ್ರಾವಣದ ನಾಲ್ಕನೇ ಸೋಮವಾರದಂದು ಸಿದ್ದೇಶ್ವರನಾಥ ದೇವಾಲಯಕ್ಕೆ ಪೂಜೆ ಸಲ್ಲಿಸಲು ಹೋಗಿದ್ದ ಭಕ್ತಾದಿಗಳು ಕಾಲ್ತುಳಿದಿಂದ ಸಾವನ್ನಪ್ಪಿದ್ದಾರೆ. ಮೂವರು ಮಹಿಳೆಯರು ಸೇರಿ 7 ಮಂದಿ ಮೃತಪಟ್ಟಿದ್ದಾರೆ. ಏಳು ಜನರ ಸಾವನ್ನು ಆಡಳಿತ ದೃಢಪಡಿಸಿದೆ. ಅಲ್ಲದೆ ಹಲವರಿಗೆ ಗಾಯಗಳಾಗಿವೆ. ಸಾವನ ನಾಲ್ಕನೇ ಸೋಮವಾರದ ನಿಮಿತ್ತ ಬಾಬಾ ಸಿದ್ದೇಶ್ವರನಾಥ ದೇವಸ್ಥಾನದಲ್ಲಿ ಇಂದು ಬೆಳಗ್ಗೆ ಅಪಾರ ಸಂಖ್ಯೆಯ ಭಕ್ತರು ಜಮಾಯಿಸಿದ ಸಂದರ್ಭದಲ್ಲಿ ಈ ಘಟನೆ ಸಂಭವಿಸಿದೆ. ಪುಟ 2

### ಚೆನ್ನಾಗಿ ಆಟವಾಡಿಲ್ಲ ಎಂದು ಶಾಲೆಯ ಫುಟ್ಬಾಲ್ ಆಟಗಾರರಿಗೆ ಕಪಾಳಮೋಕ್ಷ

## ಥಳಿಸಿದ ಶಿಕ್ಷಕ

**ಸೇಲಂ:** ಮಕ್ಕಳು ಆಟದಲ್ಲಿ ಒಂದೊಮ್ಮೆ ಸೋತರೆ ಅವರು ಕುಗ್ಗಲು ಬಿಡದೆ ಧೈರ್ಯ ತುಂಬಿ, ಮುಂದಿನ ದಿನಗಳಲ್ಲಿ ಚೆನ್ನಾಗಿ ಆಟವಾಡಿ ಎಂದು ಹೇಳಬೇಕಿದ್ದ ಶಿಕ್ಷಕರೇ ಮಕ್ಕಳಿಗೆ ಮನಬಂದಂತೆ ಥಳಿಸಿದರೆ ಅವರು ಎಲ್ಲಿಗೆ ಹೋಗಬೇಕು. ತಮಿಳುನಾಡಿನ ಸೇಲಂ ಜಿಲ್ಲೆಯ ಖಾಸಗಿ ಶಾಲೆಯೊಂದರ ದೈಹಿಕ ಶಿಕ್ಷಣ ಶಿಕ್ಷಕರೊಬ್ಬರು ವಿದ್ಯಾರ್ಥಿಗಳ ಮೇಲೆ ಹಲ್ಲೆ ನಡೆಸುತ್ತಿರುವ ವಿಡಿಯೋ ವೈರಲ್ ಆಗಿದೆ. ಅಣ್ಣಾಮಲೈ ಎಂದು ಗುರುತಿಸಲಾದ ಶಿಕ್ಷಕ, ಹಲವಾರು ಫುಟ್ ಬಾಲ್ ಆಟಗಾರರ ಪ್ರದರ್ಶನದಿಂದ ಅತೃಪ್ತರಾಗಿ ಕಪಾಳಮೋಕ್ಷ ಮಾಡಿ ಹಲ್ಲೆ ನಡೆಸಿದ್ದಾರೆ. ಒದೆಯುವುದು ಮತ್ತು ಅವರ ಕೂದಲನ್ನು ಎಳೆಯುವುದು ಕ್ಯಾಮೆರಾದಲ್ಲಿ ಸೆರೆಯಾಗಿದೆ. ಪುಟ 2



### ಶಿಕ್ಷಣ ಇಲಾಖೆ ವಿರುದ್ಧ ಸಮರ ಸಾರಿದ ಶಿಕ್ಷಕರು

**ಬೆಂಗಳೂರು:** ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಶಿಕ್ಷಣ ಇಲಾಖೆ ವಿರುದ್ಧ ಶಿಕ್ಷಕರು ಸಮರ ಸಾರಿದ್ದಾರೆ. ಇಂದು ನಗರದ ಫ್ರೀಡಂ ಪಾರ್ಕ್‌ನಲ್ಲಿ ಕರ್ನಾಟಕ ಪ್ರಾಥಮಿಕ ಶಾಲಾ ಶಿಕ್ಷಕರಿಂದ ಬೃಹತ್ ಪ್ರತಿಭಟನೆ ನಡೆಸಲು ನಿರ್ಧರಿಸಿದ್ದು, ರಾಜ್ಯದ ವಿವಿಧೆಡೆಯಿಂದ ಸುಮಾರು 1.30 ಲಕ್ಷ ಶಿಕ್ಷಕರು ಪ್ರತಿಭಟನೆಯಲ್ಲಿ ಭಾಗಿಯಾಗಲಿದ್ದಾರೆ.

ಪ್ರತಿಭಟನೆ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ಸುಮಾರು 48 ಸಾವಿರ ಶಾಲೆಗಳು ನಾಳೆ ಬಂದ್ ಆಗಲಿವೆ. ಶಾಲೆಗಳಿಗೆ ಸಾಮೂಹಿಕ ಗೈರು ಹಾಕಿ ಪ್ರತಿಭಟನೆಯಲ್ಲಿ ಭಾಗಿಯಾಗಲು ಶಿಕ್ಷಕರು ನಿರ್ಧಾರ ಮಾಡಿದ್ದಾರೆ. ಶಿಕ್ಷಕರು ಅನೇಕ ಬಾರಿ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಇಲಾಖೆ ಮೊರೆ ಹೋಗಿದ್ದರು. ಸಚಿವರ ಭೇಟಿಯಿಂದಲೂ ನಿರಾಸೆ ಉಂಟಾಗಿದ್ದರಿಂದ ಬೀದಿಗಿಳಿಯಲು ನಿರ್ಧರಿಸಿದ್ದಾರೆ.

ರಾಜ್ಯದ ಮೂಲೆ ಮೂಲೆಗಳಿಂದ ಶಿಕ್ಷಕರು ಭಾಗಿಯಾಗುವ ಸಾಧ್ಯತೆ ಇದೆ. ಇತ್ತ ನಾಳೆ ಶಾಲೆ ಬಂದ್ ಮಾಡದಂತೆ ಇಲಾಖೆಯಿಂದ ಆದೇಶ ಹೊರಡಿಸಿದೆ. ಆದರೆ, ಇಲಾಖೆಯ ಆದೇಶಕ್ಕೂ ಕ್ಯಾರೆ ಎನ್ನದೇ 1.30 ಲಕ್ಷ ಶಿಕ್ಷಕರಿಂದ ಪ್ರತಿಭಟನ ನಡೆಸಲು ಮುಂದಾಗಿದ್ದಾರೆ. ಈ ಬಗ್ಗೆ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕೆ. ನಾಗೇಶ್ ಮಾಹಿತಿ ನೀಡಿದ್ದಾರೆ.




ಸರ್ಕಾರ 2017ರ ವೃಂದ ಮತ್ತು ನೇಮಕಾತಿ ನಿಯಮಗಳು 2016ಕ್ಕಿಂತ ಮುಂಚೆ ನೇಮಕಾತಿ ಹೊಂದಿದ ಶಿಕ್ಷಕರಿಗೆ ಅನ್ವಯವಾಗುವುದಿಲ್ಲ ಎಂದು ಪುಟ 2

# ಧಾರವಾಡದ ಅಂಜುಮನ್ ಅಧ್ಯಕ್ಷನ ಮೇಲೆ ಹಲ್ಲೆಗೆ ಸ್ಕೆಚ್

**ಧಾರವಾಡ:** ಇಲ್ಲಿನ ಅಂಜುಮನ್ ಸಂಸ್ಥೆ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಇಸ್ಮಾಯಿಲ್ ತಮಟಗಾರ ಅವರ ಮೇಲೆ ಹಲ್ಲೆಗೆ ಯತ್ನ ನಡೆದಿದೆ.



10ಕ್ಕೂ ಹೆಚ್ಚು ಜನ ಅಪರಿಚಿತರು ತಮಟಗಾರ ಅವರ ಮನೆ ಮೇಲೆ ದಾಳಿ ನಡೆಸಿದ್ದಾರೆ. ಈ ವೇಳೆ ಯುವಕರು ತಮಟಗಾರ ಅವರ ಮನೆಯವರೊಂದಿಗೆ ಅಸಭ್ಯವಾಗಿ ವರ್ತಿಸಿದ್ದಾರೆ ಎಂದು ಆರೋಪಿಸಲಾಗಿದೆ.

ತಮಟಗಾರ ಅವರು ಮನೆಯಲ್ಲಿರದೆ, ಬೆಂಗಳೂರಿನಲ್ಲಿ ಇದ್ದಿದ್ದರಿಂದ ದೊಡ್ಡ ಅನಾಹುತ ತಪ್ಪಿದೆ.

ಇಸ್ಮಾಯಿಲ್ ಅವರ ಮೇಲೆ ಲಂಗೋಟಿ ಜಮಾದಾರ್ ಗಲ್ಲಿ, ಅಂಜುಮನ್ ಹಾಸ್ಟೆಲ್ ಬಳಿ ಹಲ್ಲೆ ನಡೆಸಲು ಈ ಯುವಕರು ಗುಂಪು ತಯಾರಾಗಿತ್ತು. ಇಸ್ಮಾಯಿಲ್ ಅವರ ಊರಲ್ಲಿ ಇಲ್ಲದೇ ಹೋಗಿದ್ದರಿಂದ ಆತಂಕಗೊಂಡಿರುವ ಅವರ ಮನೆಯವರು ಧಾರವಾಡದ ಶಹರ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ತಮಟಗಾರ ಅವರ ಕುಟುಂಬ ತಮಗೆ ಜೀವ ಭಯವಿದೆ. ರಕ್ಷಣೆ ನೀಡಬೇಕು ಎಂದು ಹಿಂದೆಯೇ ಪೊಲೀಸ್ ಆಯುಕ್ತರಿಗೆ ಮನವಿ ಸಲ್ಲಿಸಿದ್ದರು.

# ಸರಣಿ ಅಪಘಾತಕ್ಕೆ ಮೂವರು ಬಲಿ





**ಬೆಂಗಳೂರು:** ತುಮಕೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಸರಣಿ ಅಪಘಾತ ಸಂಭವಿಸಿದ್ದು, ಮೂವರು ಬಲಿಯಾಗಿದ್ದಾರೆ.

ನೆಲಮಂಗಲ ತಾಲೂಕಿನ ಕುಲುವನಹಳ್ಳಿ ಬಳಿ ಅಪಘಾತವಾಗಿದ್ದು, ಸ್ಥಳದಲ್ಲೇ ಮೂವರು ದಾರುಣ ಸಾವನ್ನಪ್ಪಿದ್ದಾರೆ. ನಾಲ್ವರಿಗೆ ಗಾಯಗಳಾಗಿದ್ದು, ಆಸ್ಪತ್ರೆಗೆ ರವಾನಿಸಲಾಗಿದೆ.

ಲಾರಿ, ಟೆಂಪೋ, ಕಾಂಕ್ರಿಟ್ ಮಿಕ್ಸರ್ ವಾಹನ ನಡುವೆ ಅಪಘಾತ ಸಂಭವಿಸಿದೆ. ಕಾಂಕ್ರಿಟ್ ಕೆಲಸ ಮಾಡುವ ಮೂವರು ಕೂಲಿ ಕಾರ್ಮಿಕರು ಸಾವಿಗೀಡಾಗಿದ್ದಾರೆ. ಪರಿಣಾಮವಾಗಿ ತುಮಕೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಟ್ರಾಫಿಕ್ ಜಾಮ್ ಉಂಟಾಗಿದೆ. ನೆಲಮಂಗಲ ಸಂಚಾರಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ತೆರವು ಕಾರ್ಯ ನಡೆಸುತ್ತಿದ್ದಾರೆ.

## ಕೆಆರ್‌ಎಸ್ ಡ್ಯಾಂನಲ್ಲೂ ಸ್ಟಾಫ್ ಲಾಕ್ ಗೇಟ್ ಇಲ್ಲ

# ಈಗಲೇ ಎಚ್ಚೆತ್ತುಕೊಳ್ಳೋದು ಒಳ್ಳೆಯದು: ಹೆಚ್‌ಡಿಕೆ

**ಮಂಡ್ಯ:** ಕೆಆರ್‌ಎಸ್ ಡ್ಯಾಂನಲ್ಲಿ ಸ್ಟಾಫ್ ಲಾಕ್ ಗೇಟ್ ಇಲ್ಲ. ಕೆಆರ್‌ಎಸ್ ಡ್ಯಾಂ ಕಟ್ಟುವಾಗ ಸ್ಟಾಫ್ ಇಲ್ಲದ ಕಾರಣ ಹಾಕಿಲ್ಲ. ಈಗ ತುಂಗಭದ್ರಾ ಡ್ಯಾಂ ಪರಿಸ್ಥಿತಿ ಗಮನಿಸಿದ್ರೆ, ಎಚ್ಚೆತ್ತುಕೊಳ್ಳುವುದು ಒಳ್ಳೆಯದು. ದೂರ ದೃಷ್ಟಿಯಿಂದ ಕೆಆರ್‌ಎಸ್‌ಗೆ ಸ್ಟಾಫ್ ಲಾಕ್ ಹಾಕಬೇಕು ಎಂದು ಕೇಂದ್ರ ಸಚಿವ ಹಾಗೂ ಮಂಡ್ಯದ ಸಂಸದ ಹೆಚ್.ಡಿ ಕುಮಾರಸ್ವಾಮಿ ಎಚ್ಚರಿಸಿದ್ದಾರೆ.

ತುಂಗಭದ್ರಾ ಡ್ಯಾಂ ಕ್ರಸ್ಟ್ ಗೇಟ್ 19ರ ಚೈನ್ ಲಿಂಕ್ ತುಂಡಾದ ವಿಚಾರ ಕುರಿತು ಮಂಡ್ಯದ ಪಾಂಡವಪುರದ ಸೀತಾಪುರದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ್ದಾರೆ.

**ದೊಡ್ಡ ಅನಾಹುತ:** ತುಂಗಭದ್ರಾ ಜಲಾಶಯದಲ್ಲಿ ದೊಡ್ಡ ಅನಾಹುತವಾಗಿದೆ. 19 ಕ್ರಸ್ಟ್ ಗೇಟ್ ಓಪನ್ ಆಗಿದೆ. ಇದೊಂದೇ 30 ಸಾವಿರ ಕ್ಯೂಸೆಕ್




ನೀರು ಹೋಗ್ತಾ ಇದೆ. ಈ ಅನಾಹುತದಿಂದ ಜಲಾಶಯದ 60 ಟಿಎಂಸಿ ನೀರು ಖಾಲಿಯಾಗುತ್ತೆ.

ಇದು ರೈತರ ಬದುಕಿನ ಆಶಾಭಾವನೆಗೆ ಧಕ್ಕೆ ತಂದಿದೆ. 70 ವರ್ಷಗಳ ಹಿಂದೆ ಈ ಜಲಾಶಯ ಕಟ್ಟಿದ್ದಾರೆ. ಹಿಂದೆಯೂ ಅಲ್ಲಿ ಅನೇಕ ಸಮಸ್ಯೆಗಳು ಬೆಳಕಿಗೆ ಬಂದಿದ್ದವು. ನಾರಾಯಣಪುರ, ಆಲಮಟ್ಟಿ ಡ್ಯಾಂನಲ್ಲಿ ಸ್ಟಾಫ್ ಲಾಕ್ ಗೇಟ್ ಅಳವಡಿಸಲಾಗಿದೆ. ತುಂಗಭದ್ರಾ ಡ್ಯಾಂನಲ್ಲಿ ಸ್ಟಾಫ್ ಗೇಟ್ ಅಳವಡಿಕೆ ಮಾಡಿಲ್ಲದ ಕಾರಣ ನೀರು ನಿಲ್ಲಿಸಲು ಸಾಧ್ಯವಾಗಿಲ್ಲ ಎಂದು ಹೆಚ್‌ಡಿಕೆ ಹೇಳಿದ್ದಾರೆ.

ಇದರಿಂದ ರೈತರ ವಿಚಾರದಲ್ಲಿ ಚೆಲ್ಲಾಟವಾಡಿದಂತೆ ಆಗಿದೆ. ಟಿಬಿ ಡ್ಯಾಂ ಬೋರ್ಡ್ ತಾಂತ್ರಿಕ ವಿಚಾರದಲ್ಲಿ ಕಾಟಚಾರದ ವರದಿ ಕೊಟ್ಟಿದೆ. ಅದಕ್ಕಾಗಿ ಇಂತಹ ಪರಿಸ್ಥಿತಿ ಬಂದಿದೆ. ಇದನ್ನು ಸರಿ ಪಡಿಸಿಕೊಳ್ಳಬೇಕಾಗಿದೆ. ಅಲ್ಲದೇ ಕೆಆರ್‌ಎಸ್ ಡ್ಯಾಂ ವಿಚಾರದಲ್ಲಿ ಈಗಲೇ ಎಚ್ಚೆತ್ತುಕೊಳ್ಳೋದು ಒಳ್ಳೆಯದು ಎಂದು ಎಚ್ಚರಿಸಿದ್ದಾರೆ.

ತುಂಗಭದ್ರಾ ಜಲಾಶಯದ ಸಮಸ್ಯೆ ಸರ್ಕಾರದ ನಿರ್ಲಕ್ಷ್ಯ ಎನ್ನಲು ಆಗಲ್ಲ. ಡ್ಯಾಂಗೆ ಟೆಕ್ನಿಕಲ್ ಕಮಿಟಿ ಇರುತ್ತೆ. ಆ ಕಮಿಟಿ ಪ್ರತಿವರ್ಷ ಸಮಸ್ಯೆಗಳನ್ನ ಪರಿಶೀಲನೆ ಮಾಡುತ್ತೆ. ಆಗ ಕಾಟಚಾರಕ್ಕೆ ಪರಿಶೀಲನೆ ಮಾಡಿದ್ದರೇ ಈ ರೀತಿಯ ಅನಾಹುತಗಳು ಆಗುತ್ತವೆ. ಇದನ್ನು ದುರಸ್ಥಿತಿ ಮಾಡೋದು ಸರ್ಕಾರಕ್ಕೆ ಇದು ಕ್ಲಿಷ್ಟಕರ ಪರಿಸ್ಥಿತಿ. ಟೆಕ್ನಿಕಲ್‌ನಲ್ಲಿ ಪರಿಣಿತಿ ಇರುವವರ ಜೊತೆ ಚರ್ಚೆ ಮಾಡಿ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ.

# ಕಾವೇರಿ ಮಾತೆಗೆ ಪೂಜೆ ಸಲ್ಲಿಸಿ ಭತ್ತ ನಾಟಿ ಮಾಡಿದ ಹೆಚ್‌ಡಿಕೆ



**ಮಂಡ್ಯ:** ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿಯವರು ಪಾಂಡವಪುರದ ಅರಳಕುಪ್ಪೆ ಗ್ರಾಮದಲ್ಲಿ ಕಾವೇರಿ ಮಾತೆಗೆ ಪೂಜೆ ಸಲ್ಲಿಸಿ, ರೈತರೊಬ್ಬರ ಜಮೀನಿನಲ್ಲಿ ಭತ್ತ ನಾಟಿ ಮಾಡಿದ್ದಾರೆ.

ಭತ್ತ ನಾಟಿ ಮಾಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಆರ್‌ಎಸ್ ಡ್ಯಾಂ ಭರ್ತಿಯಾಗಿದೆ. ಹೀಗಾಗಿ ಅರಳಕುಪ್ಪೆ ಗ್ರಾಮಕ್ಕೆ ಬಂದು ಭತ್ತ ನಾಟಿ ಮಾಡುವಂತೆ ರೈತರು ಮನವಿ ಮಾಡಿದ್ದರು. ರೈತ ಮಹಿಳೆಯರ ಜೊತೆಗೂಡಿ ಲಕ್ಷ್ಮಣ್ ಎಂಬವರ ಗದ್ದೆಯಲ್ಲಿ ಭತ್ತದ ನಾಟಿ ಮಾಡಿದ್ದೇನೆ. ಮುಖ್ಯಮಂತ್ರಿಯಾಗಿದ್ದಾಗ ಮೊದಲ ಬಾರಿಗೆ ನಾಟಿ ಮಾಡಿದ್ದೆ. ಈಗ ಕೇಂದ್ರದ ಮಂತ್ರಿ ಆಗಿದ್ದೇನೆ. ರೈತರಿಗೆ ಆತ್ಮಸ್ಥೈರ್ಯ ತುಂಬಲು ಈ ರೀತಿ ಕೆಲಸ ಮಾಡಬೇಕು ಎಂದು ಹೇಳಿದ್ದಾರೆ.

ಭೂಮಿ ತಾಯಿ ಮಕ್ಕಳಾದ ನಮ್ಮೆಲ್ಲರಿಗೂ ಭೂಮಿಯೇ ಸರ್ವಸ್ವ. ಬೇಸಾಯವೇ ಬದುಕು. ಭತ್ತದ ನಾಟಿ ನನ್ನ ಮನೆಯ ಕಾರ್ಯಕ್ರಮವೇ ಆಗಿತ್ತು. ರೈತಾಪಿ ಜನರೊಂದಿಗೆ ಇಂತಹ ಸಾರ್ಥಕ, ಅನನ್ಯ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದು ನನ್ನಲ್ಲಿ ಧನ್ಯತೆಯ ಭಾವ ಉಂಟು ಮಾಡಿದೆ ಎಂದಿದ್ದಾರೆ. ಬಳಿಕ ಗದ್ದೆಯಲ್ಲಿಯೇ ಅವರು ಮುದ್ದೆ ಊಟ ಸವಿದಿದ್ದಾರೆ. ಈ ವೇಳೆ ನಿಖಿಲ್ ಕುಮಾರಸ್ವಾಮಿ ಹಾಗೂ ಜೆಡಿಎಸ್ ನಾಯಕರು ಹೆಚ್‌ಡಿಕೆ ಅವರಿಗೆ ಸಾಥ್ ನೀಡಿದರು. ಈ ಹಿಂದೆ 2018ರಲ್ಲೂ ಕಾವೇರಿ ಮಾತೆಗೆ ಪೂಜೆ ಮಾಡಿ ಅವರು ಭತ್ತ ನಾಟಿ ಮಾಡಿದ್ದರು.

# ಇನ್ಮುಂದೆ ವಿಪಕ್ಷಗಳ ಯಾವ ನಾಯಕರ ಮೇಲೂ ಕರುಣೆ ತೋರಲ್ಲ: ಸಿಎಂ ಕೆಂಡ

**ಮೈಸೂರು:** ನಾನು ಈಗ ಮೊದಲಿನ ಸಿದ್ದರಾಮಯ್ಯ ಅಲ್ಲ, ನಾನು ಬದಲಾಗುತ್ತೇನೆ. ಇನ್ಮುಂದೆ ವಿಪಕ್ಷಗಳ ಯಾವ ನಾಯಕರ ಮೇಲೂ ಕರುಣೆ ತೋರುವುದಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಕೆಂಡಾಮಂಡಲವಾಗಿದ್ದಾರೆ.

ಮೈಸೂರಿನಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಎಲ್ಲರ ಬಗ್ಗೆ ಹೋಗ್ಲಿ ಬಿಡು, ಹೋಗ್ಲಿ ಬಿಡು ಅಂತ ನಾನು ಅಂತಿದ್ದೆ. ಅದೇ ನನಗೆ ಈಗ ಮುಳ್ಳಾಗ್ತಿದೆ. ವಿಪಕ್ಷಗಳ ಎಲ್ಲಾ ನಾಯಕರ ಹಳೇ ಕಥೆ ಓಪನ್ ಮಾಡ್ತೀನಿ. ದ್ವೇಷದ



ರಾಜಕಾರಣ ಅಂದರೂ ಪರವಾಗಿಲ್ಲ. ನಾನು ಇನ್ಮುಂದೆ ಡೋಂಟ್ ಕೇರ್ ಎಂದು ವಿಪಕ್ಷಗಳ ವಿರುದ್ಧ ಹರಿಹಾಯ್ದರು.

ತಪ್ಪೇ ಮಾಡದ ನನ್ನ ಮೇಲೆ ಬೀದಿ ಬೀದಿ ಸುತ್ತಿಕೊಂಡು ಸುಳ್ಳು ಹಬ್ಬಿಸಿ ನನ್ನ ಹೆಸರು ಕೆಡಿಸುತ್ತಿದ್ದಾರೆ. ಈ ವಿಚಾರದಲ್ಲಿ ನಾನಿನ್ನು ತಾಳ್ಮೆಯಾಗಿರಲ್ಲ. ಯಾರೇ ಬಂದು ಏನೇ ಒತ್ತಡ ಹೇರಿದರೂ ನಾನು ಇನ್ಮೇಲೆ ವಿಪಕ್ಷಗಳ ವಿಚಾರದಲ್ಲಿ ತಾಳ್ಮೆಯಾಗಿರುವುದಿಲ್ಲ ಎಂದು ಕಿಡಿಕಾರಿದ್ದಾರೆ.

# ಮಹಿಳೆಯರ ವಾಶ್‌ರೂಂನಲ್ಲಿ ಮೊಬೈಲ್ ಕ್ಯಾಮೆರಾ ಇಟ್ಟಿದ್ದ ಕಾಮುಕ ಅರೆಸ್ಟ್!

**ಬೆಂಗಳೂರು:** ಕಾಫಿ ಶಾಪ್‌ನ ವಾಶ್ ರೂಂನಲ್ಲಿ ಮೊಬೈಲ್ ಕ್ಯಾಮೆರಾ ಆನ್ ಮಾಡಿ ಇಟ್ಟಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿರುವ ಘಟನೆ ಬೆಂಗಳೂರಲ್ಲಿ ನಡೆದಿದೆ.



ಬಂಧಿತ ಆರೋಪಿಯನ್ನು ಶಿವಮೊಗ್ಗ ಮೂಲದ ಮನೋಜ್ (23) ಎಂದು ಗುರುತಿಸಲಾಗಿದೆ. ಆರೋಪಿ ಕಾಫಿ ಶಾಪ್‌ನಲ್ಲೇ ಕಾಫಿ ಮೇಕರ್ ಆಗಿದ್ದ. ಪ್ರಕರಣ ಸಂಬಂಧ ಕ್ಷಮೆ ಕೇಳಿಸಿ ಆತನನ್ನು ವಜಾ ಮಾಡಲಾಗಿತ್ತು.

ಬಿಇಎಲ್ ರಸ್ತೆಯಲ್ಲಿರೋ ಥರ್ಡ್ ವೇವ್ ಕೆಫೆಯ ವಾಶ್ ರೂಂನ ಕಸದ ಡಬ್ಬದಲ್ಲಿ ಸಣ್ಣನೆಯ ರಂಧ್ರ ಮಾಡಿ ಆರೋಪಿ ಮೊಬೈಲ್ ಇಟ್ಟಿದ್ದ. ಫ್ಲೈಟ್ ಮೋಡ್‌ನಲ್ಲಿಟ್ಟು ರೆಕಾರ್ಡಿಂಗ್ ಆನ್ ಮಾಡಿಟ್ಟಿದ್ದ. ಮಹಿಳೆಯೊಬ್ಬರು ವಾಶ್ ರೂಂಗೆ ಹೋದಾಗ ಮೊಬೈಲ್ ಇರುವುದು ಪತ್ತೆಯಾಗಿತ್ತು. ತಕ್ಷಣವೇ ಮಹಿಳೆ ಪೊಲೀಸರಿಗೆ ಮಾಹಿತಿ ನೀಡಿದ್ದರು. ಪ್ರಕರಣ ಸಂಬಂಧ ಪೊಲೀಸರು ಆರೋಪಿಯನ್ನು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ.

# ಬೀದರ್ ಪೊಲೀಸರ ಭರ್ಜರಿ ಕಾರ್ಯಾಚರಣೆ 12 ಲಕ್ಷ ರೂ. ಮೌಲ್ಯದ ವಸ್ತುಗಳು ಜಪ್ತಿ

**ಬೀದರ್:** ನಗರದ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿ ಕಳ್ಳತನವಾಗಿದ್ದ 12 ಲಕ್ಷ ರೂ. ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ.



ಭಾಲ್ಕಿ, ಮೇಹಕರ್ ಮತ್ತು ಹುಮ್ನಾಬಾದ್ ಪೊಲೀಸ್ ಠಾಣೆಗಳಲ್ಲಿ ಕಳ್ಳತನದ ವಿವಿಧ ಪ್ರಕರಣಗಳು ದಾಖಲಾಗಿದ್ದವು. ಪ್ರಕರಣದ ಬೆನ್ನು ಹತ್ತಿದ ಪೊಲೀಸರು 11 ಕಳ್ಳತನದ ಪ್ರಕರಣಗಳನ್ನು ಭೇದಿಸಿ ಬಂಗಾರ, ಬೆಳ್ಳಿ, ದ್ವಿಚಕ್ರ ವಾಹನ ಹಾಗೂ ಎಮ್ಮೆ ಸೇರಿದಂತೆ 12 ಲಕ್ಷ ರೂ. ಮೌಲ್ಯದ ವಸ್ತುಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಮಂದಿರ ಕಳ್ಳತನ ಪ್ರಕರಣದಲ್ಲಿ 11 ಗ್ರಾಂ ಬೆಳ್ಳಿ ಮತ್ತು 1 ಗ್ರಾಂ ಚಿನ್ನಾಭರಣ ಹಾಗೂ ತೆಲಂಗಾಣದಲ್ಲಿ ಕಳ್ಳತನವಾಗಿದ್ದ 10 ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಲಾಗಿದೆ. ಎಮ್ಮೆ ಕಳ್ಳತನ ಪ್ರಕರಣ ಭೇದಿಸಿದ ಮೇಹಕರ್ ಠಾಣೆಯ ಪೊಲೀಸರು ಸುಮಾರು 7 ಲಕ್ಷ ರೂ. ಬೆಲೆಬಾಳುವ ಎಮ್ಮೆ ವಶಕ್ಕೆ ಪಡೆದುಕೊಂಡಿದ್ದಾರೆ. ಘಟನೆಗೆ ಸಂಬಂಧಿಸಿದಂತೆ 5 ಜನ ಆರೋಪಿಗಳನ್ನು ಬಂಧಿಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

# ಬೆಂಗಳೂರಿಗೆ ಮಳೆ ಅವಾಂತರ

ದಾಸನಪುರ APMC ತರಕಾರಿ ಮಾರ್ಕೆಟ್‌ಗೆ ಮಳೆ ನೀರು ನುಗ್ಗಿದೆ. ಎಂಪಿಎಂಸಿ ತರಕಾರಿ ಮಾರ್ಕೆಟ್ ಜಲಾವೃತಗೊಂಡಿದ್ದು ವ್ಯಾಪಾರ ವಹಿವಾಟು ನಡೆಸಲಾಗದೆ ರೈತರು ಕಂಗಾಲಾಗಿದ್ದಾರೆ. ಮಳೆಯ ನೀರಿನಿಂದ ಎಪಿಎಂಸಿ ತರಕಾರಿ ಮಾರ್ಕೆಟ್ ನಲ್ಲಿ ಅವ್ಯವಸ್ಥೆ.

## ಕಟ್ಟೆಚ್ಚರ ವಹಿಸಲು ಸೂಚನೆ

**ಡ್ಯಾಂ ಸುತ್ತಮುತ್ತ ಜನ ಸಂಚಾರ ನಿಷೇಧ:** ಇನ್ನು ತುಂಗಭದ್ರಾ ಡ್ಯಾಂ ಸುತ್ತಮುತ್ತಲಿನ ಪ್ರದೇಶಕ್ಕೆ ಜನ ಸಂಚಾರ ನಿಷೇಧ ಮಾಡಲಾಗಿದೆ. ಡಿಸಿಎಂ ಡಿಕೆ ಶಿವಕುಮಾರ್ ಅವರ ಸೂಚನೆಯಂತೆ ವಿಜಯನಗರ ಜಿಲ್ಲಾಧಿಕಾರಿ ಎಂಎಸ್ ದಿವಾಕರ ಆದೇಶ ಹೊರಡಿಸಿದ್ದಾರೆ. ತುಂಗಭದ್ರಾ, ಸೇತುವೆ ನೋಡಲು ಅಪಾರ ಪ್ರಮಾಣದ ಪ್ರವಾಸಿಗರು ಜನ ಬರುತ್ತಾರೆ. ಸೇತುವೆ ಮೇಲೆ ನಿಂತು ಹುಚ್ಚಾಟ ಮೆರೆಯುತ್ತಾರೆ. ಲಕ್ಷಕ್ಕೂ ಅಧಿಕ ಕ್ಯೂಸೆಕ್ ನೀರು ಹೊರ ಬಿಡುವ ಹಿನ್ನಲೆ ಡ್ಯಾಂ ಸುತ್ತಮುತ್ತ ಜನ ಸಂಚಾರ ನಿಷೇಧ ಹೇರಲಾಗಿದೆ.

ಅಲ್ಲದೆ ನಾಳೆ ಸಿಎಂ ಸಿದ್ದರಾಮಯ್ಯನವರು ಸಚಿವ ಜಮೀರ್ ಅಹ್ಮದ್ ಜೊತೆ ಬಾಗಿನ ಅರ್ಪಿಸಬೇಕಿತ್ತು. ಬಾಗಿನ ಅರ್ಪಣೆ ಕಾರ್ಯಕ್ರಮಕ್ಕೂ ಮುನ್ನವೇ ಕ್ರಸ್ಟ್ ಗೇಟ್ ಕೊಚ್ಚಿ ಹೋಗಿ ಮಹಾ ಅವಘಡ ಸಂಭವಿಸಿದೆ. ಹೀಗಾಗಿ ಬಾಗಿನ ಅರ್ಪಣೆ ಕಾರ್ಯಕ್ರಮ ರದ್ದು ಮಾಡಲಾಗಿದೆ. ಜಲಾಶಯದಿಂದ ಇದೀಗ 50-60 ಟಿಎಂಸಿ ನೀರು ರಿಲೀಸ್ ಮಾಡಲೇಬೇಕಿದೆ. ಇಲ್ಲದಿದ್ದರೆ ಗೇಟ್ ದುರಸ್ತಿ ಕಾರ್ಯ ಸಾಧ್ಯನೇ ಇಲ್ಲ. ಒಂದು ವೇಳೆ ಒಂದೇ ಗೇಟ್ ನಿಂದ ನೀರು ಹೊರಗೆ ಬಂದ್ರೆ ಇನ್ನುಳಿದ ಗೇಟ್ ಗಳಿಗೂ ಹಾನಿಯಾಗುತ್ತೆ. ಗೇಟ್ ಪ್ರೆಸರ್ ತಪ್ಪಿಸಲು 28 ಗೇಟ್ ಗಳ ಮೂಲಕ ನೀರು ರಿಲೀಸ್ ಮಾಡಲಾಗಿದೆ.

**ಅಧಿಕಾರಿಗಳ ಬೇಜವಾಬ್ದಾರಿಯಿಂದ ಚೈನ್ ಕಟ್; ರೈತರ ಆಕ್ರೋಶ:** ತುಂಗಭದ್ರಾ ಜಲಾಶಯದ ಮೇಲ್ಭಾಗದಲ್ಲಿ ಹಲವಡೆ ಬಿರುಕುಗಳು ಉಂಟಾಗಿವೆ. ಕ್ರಸ್ಟ್ ಗೇಟ್ ಗಳಿರೋ ಜಾಗದಲ್ಲಿ ಹಲವಡೆ ಸಣ್ಣ ಸಣ್ಣ ಬಿರುಕುಗಳಿವೆ. ಆದ್ರೂ ಅವುಗಳನ್ನು ದುರಸ್ತಿ ಮಾಡಲಾಗಿಲ್ಲ. ಬೇಸಿಗೆಯಲ್ಲಿ ಡ್ಯಾಂ ದುರಸ್ತಿ ಕೆಲಸ ಮಾಡಿದ್ದೇವೆ ಅಂತ ಡ್ಯಾಂ ಸಿಬ್ಬಂದಿ ಹೇಳ್ತಿದ್ದಾರೆ. ಹಾಗಾದರೆ ಬಿರುಕುಗಳು ಹೇಗೆ ಉಳಿದುಕೊಂಡವು ಸಿಬ್ಬಂದಿ ನಿರ್ಲಕ್ಷ್ಯದಿಂದಲೇ ಗೇಟ್ ಕಿತ್ತುಹೋಗಿದೆ ಎಂದು ರೈತರು ಆರೋಪಿಸಿದ್ದಾರೆ.

**ಟಿಬಿ ಜಲಾಶಯಕ್ಕೆ ಇಂದು ವಿಜಯೇಂದ್ರ ಭೇಟಿ:** ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಕೊಚ್ಚಿಹೋಗಿದ್ದು ವಿಪಕ್ಷಗಳೂ ಕಿಡಿಕಾರುತ್ತಿವೆ. ಟಿಬಿ ಜಲಾಶಯಕ್ಕೆ ಇಂದು ಮಧ್ಯಾಹ್ನ ಬಿ.ವೈ. ವಿಜಯೇಂದ್ರ ಭೇಟಿ ನೀಡಲಿದ್ದಾರೆ. ಮಾಜಿ ಸಿಎಂ ಬೊಮ್ಮಾಯಿ ವಿಪಕ್ಷ ನಾಯಕ ಅಶೋಕ್ ಕೂಡ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ.

ನಿನ್ನೆ ಡಿಸಿಎಂ ಡಿಕೆ. ಶಿವಕುಮಾರ್, ಬಳ್ಳಾರಿ ಸಂಸದ ತುಕಾರಾಂ, ಸಚಿವ ಶಿವರಾಜ್ ತಂಗಡಗಿ ಭೇಟಿ ನೀಡಿ ಮಾಹಿತಿ ಪಡೆದಿದ್ದು, ರಾತ್ರೋ ರಾತ್ರಿ, ವಿಜಯನಗರ ಕ್ಷೇತ್ರದ ಶಾಸಕ ಊಖ ಗವಿಯಪ್ಪ, ಕೊಪ್ಪಳ ಶಾಸಕ ರಾಘವೇಂದ್ರ ಹಿಟ್ನಾಳ್ ಮತ್ತು ಎರಡು ಜಿಲ್ಲೆಗಳ ಅಧಿಕಾರಿಗಳು ಭೇಟಿ ನೀಡಿದ್ರು.

## ರೌಡಿ ಶೀಟರ್‌ನ ಕೊಲೆ

ಸಮೀರ್‌ನನ್ನು ಹಿಂಬಾಲಿಸಿಕೊಂಡು ಬಂದಿದ್ದ ತಂಡ ತಲವಾರಿನಿಂದ ಹಲ್ಲೆ ನಡೆಸಿದೆ. ಕೂಡಲೇ ತಪ್ಪಿಸಿಕೊಳ್ಳಲು ಸಮೀರ್ ಸ್ಥಳದಿಂದ ಓಡಿದ್ದಾನೆ. ಇಷ್ಟಕ್ಕೆ ಸುಮ್ಮನಾಗದ ಐವರಿದ್ದ ತಂಡ ಆತನನ್ನು ಅಟ್ಟಾಡಿಸಿಕೊಂಡು ಹೋಗಿ ತಲವಾರಿನಿಂದ ಕಡಿದು ಹತ್ಯೆ ಮಾಡಿದೆ. ಸದ್ಯ ಹತ್ಯೆ ನಡೆಸಿ ಪರಾರಿಯಾದ ಗುಂಪಿಗಾಗಿ ಪೊಲೀಸರು ಹುಡುಕಾಟ ನಡೆಸುತ್ತಿದ್ದಾರೆ.

ಇತ್ತೀಚೆಗೆ ಮಂಗಳೂರು ಕಾರಾಗೃಹದಲ್ಲಿ ಸಮೀರ್ ಮೇಲೆ ಸಹ ಕೈದಿಗಳಿಂದ ದಾಳಿ ನಡೆದಿತ್ತು. ವಾರದ ಹಿಂದೆ ಜಾಮೀನಿನ ಮೇಲೆ ಜೈಲಿನಿಂದ ಆತ ಹೊರ ಬಂದಿದ್ದ. ಪೂರ್ವ ದ್ವೇಷದ

## ಮೊದಲನೇ ಪುಟದಿಂದ...

ಹಿನ್ನೆಲೆಯಲ್ಲಿ ಕೊಲೆ ನಡೆದಿರುವ ಶಂಕೆ ವ್ಯಕ್ತವಾಗಿದೆ. 2018ರಲ್ಲಿ ರೌಡಿಶೀಟರ್ ಟಾರ್ಗೆಟ್ ಇಲ್ಯಾಸ್‌ನನ್ನು ಜೆಪ್ಪುವಿನ ಫ್ಲ್ಯಾಟ್ ಒಂದರಲ್ಲಿ ಇದೀಗ ಕೊಲೆಯಾದ ಶಮೀರ್, ದಾವುದ್, ರಿಯಾಝ್, ಅಬ್ದುಲ್ ಖಾದರ್, ಉಮ್ಮರ್ ನವಾಫ್, ಮೊಹಮ್ಮದ್ ನಝೀರ್, ನೌಷಾದ್, ಅಝ್ಗರ್ ಆಲಿ ಮತ್ತಿತರರು ಸೇರಿ ಹತ್ಯೆ ನಡೆಸಿದ್ದರು.

## ಇಂದು ಬಿಜೆಪಿ ತೆರೆ?

ಸಿಪಿವೈ ಬಂಡಾಯಕ್ಕೂ ಮುನ್ನ ಎಚ್ಚೆತ್ತ ಬಿಜೆಪಿ ಹೈಕಮಾಂಡ್ ದೆಹಲಿಗೆ ಬರುವಂತೆ ಸೂಚನೆ ನೀಡಿದೆ.

ಸಿಪಿವೈಗೆ ಟಿಕೆಟ್ ನೀಡಿ ಡಿಸಿಎಂ ಡಿಕೆ ಶಿವಕುಮಾರ್ ಠಕ್ಕರ್ ಕೊಡಲು ಬಿಜೆಪಿ ಹೈಕಮಾಂಡ್ ತಂತ್ರಗಾರಿಕೆ ನಡೆಸಿದೆ ಎನ್ನಲಾಗಿದೆ. ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಅವರು ಕೆಲ ಷರತ್ತುಗಳ ಮೇಲೆ ಸಿಪಿವೈಗೆ ಟಿಕೆಟ್ ಸಿಗುವ ಸಾಧ್ಯತೆಯಿದೆ. ಉಪಚುನಾವಣೆಯಲ್ಲಿ ಸಿಪಿವೈ, ವಿಧಾನಸಭಾ ಚುನಾವಣೆಯಲ್ಲಿ ನಿಖಿಲ್‌ಗೆ ಅವಕಾಶ ಸಿಗಬಹುದು ಎನ್ನಲಾಗುತ್ತಿದೆ.

## ಸಂದಾಯವಾಗಿದೆ?

ಇದನ್ನ ಒಪ್ಪುವ ಪ್ರಶ್ನೆಯೇ ಬರಲ್ಲ ಅಂತ ಹೇಳಿದ್ದಾರೆ.

**ಸಿಬಿಐ ತನಿಖೆ ಆಗಲಿ:** ತುಂಗಭದ್ರಾ ಡ್ಯಾಂ ವಿಚಾರದಲ್ಲಿ ನಾನು ಯಾರ ಮೇಲೂ ವೈಯಕ್ತಿಕ ಆರೋಪ ಮಾಡಲ್ಲ. ಆದ್ರೆ ಈ ಬೇಜವಾಬ್ದಾರಿ ಹಾಗೂ ನಿರ್ಲಕ್ಷ್ಯತನದ ವಿರುದ್ಧ ಸಿಬಿಐ ತನಿಖೆಯಾಗಬೇಕು. ಡ್ಯಾಂನ ವಾರ್ಷಿಕ ನಿರ್ವಹಣಾ ಗುತ್ತಿಗೆದಾರರು ಯಾರು? ಅವರಿಗೆ ಎಷ್ಟು ಕೋಟಿ ಹಣ ಸಂದಾಯ ಆಗಿದೆ? ಅಂತ ಸರ್ಕಾರ ಬಹಿರಂಗ ಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಅಲ್ಲದೇ ಗೇಟ್ ಅನ್ನು ನೀವು ಸರಿ ಮಾಡದಿದ್ದರೇ ಯಾರಾದ್ರೂ ಒಬ್ಬರು ಸರಿಪಡಿಸ್ತಾರೆ. ಆದ್ರೆ ಇದು ನಮ್ಮ ಭಾಗದ ರೈತರಿಗೆ ಆದ ದೊಡ್ಡ ಅನ್ಯಾಯ. ಸರ್ಕಾರ ಇದರ ಸಂಪೂರ್ಣ ಜವಾಬ್ದಾರಿ ಹೊರಬೇಕು, ನಿರ್ಲಕ್ಷತನ ತೋರಿದವರ ವಿರುದ್ಧ ಕ್ರಮ ಆಗಬೇಕು ಒತ್ತಾಯಿಸಿದ್ದಾರೆ.

ಬೇಸಿಗೆ ಕಾಲದಲ್ಲಿ ಡ್ಯಾಂ ಗೇಟ್ ಪರಿಶೀಲಿಸಿ, ನಿರ್ವಹಣೆ ಮಾಡಬೇಕು. ಸರ್ಕಾರ ಯಾವ ಕೆಲಸವನ್ನೂ ಮಾಡಿಲ್ಲ. ಹಳೇ ಡ್ಯಾಂಗಳ ನಿರ್ವಹಣೆಗೆ ಕೇಂದ್ರ ಸರ್ಕಾರ ತಂಡ ರಚನೆ ಮಾಡಿದೆ. ಅದನ್ನ ಇವರು ಸಂಪರ್ಕ ಮಾಡಿದ್ದಾರಾ? ಇದೆಲ್ಲವೂ ಮುಖ್ಯವಾಗುತ್ತೆ. ಇದಕ್ಕಾಗಿ ಸರ್ಕಾರ ಸಾಕಷ್ಟು ಹಣ ಖರ್ಚು ಮಾಡುತ್ತೆ? ಕರ್ನಾಟಕ ಕಾಂಗ್ರೆಸ್ ಸರ್ಕಾರ ಇದ್ಯಾವುದೇ ನಿಯಮಗಳನ್ನ ಅನುಸರಿಸುತ್ತಿಲ್ಲ ಎಂದು ಆಕ್ಷೇಪಿಸಿದ್ದಾರೆ.

**ವಿಶ್ವದಲ್ಲಿರುವ ಎಲ್ಲಾ ಟೆಕ್ನಾಲಜಿ ಬಳಸಿ:** ಸರಿಯಾಗಿ ನಿರ್ವಹಣೆ ಮಾಡಿದ್ದರೇ ಈ ಘಟನೆ ನಡೆಯುತ್ತಿರಲಿಲ್ಲ. ಇದರಲ್ಲಿ ಸರ್ಕಾರದ ನಿರ್ಲಕ್ಷ್ಯ ಎದ್ದು ಕಾಣುತ್ತೆ. ಇದು ಮೂರು ರಾಜ್ಯಕ್ಕೆ ಸಂಬಂಧಿಸಿದ ವಿಚಾರವಾದ್ರೂ ಡ್ಯಾಂ ನಮ್ಮ ಸುಪರ್ದಿಯಲ್ಲಿದೆ. ನಾನು ಯಾವುದೇ ರಾಜಕೀಯ ಉದ್ದೇಶದಿಂದ ಮಾತನಾಡುತ್ತಿಲ್ಲ. ವಿಶ್ವದಲ್ಲಿ ಇರುವ ಎಲ್ಲಾ ರೀತಿಯ ಟೆಕ್ನಾಲಜಿ ಬಳಸಿ ಇದನ್ನ ಕೂಡಲೇ ನಿರ್ವಹಣೆ ಮಾಡಿ ಡ್ಯಾಂ ಉಳಿಸುವ ಕೆಲಸ ಮಾಡಬೇಕು. ಡಿಕೆಶಿ ಹೇಳಿದಂತೆ ಅಚಾನಕ್ ಆಗಿ ಕಟ್ ಆಗಿದೆ ಅಂದ್ರೆ, ಸಣ್ಣ ಮಕ್ಕಳು ಕೂಡಾ ನಗ್ತಾರೆ. ಈ ವೈಫಲ್ಯಕ್ಕೆ ಸಂಪೂರ್ಣ ಜವಾಬ್ದಾರಿ ಸರ್ಕಾರವೇ ತಗೋಬೇಕು. ಇದು ಡಿಬಿ ಡ್ಯಾಂ ಬೋರ್ಡ್ ಹಾಗೂ ಸರ್ಕಾರ ಎರಡರ ವೈಫಲ್ಯವೂ ಇದೆ ಎಂದು ವಾಗ್ದಾಳಿ ನಡೆಸಿದ್ದಾರೆ.

## ಸಮರ ಸಾರಿದ ಶಿಕ್ಷಕರು

ಕಾರ್ಯಾದೇಶ ಹೊರಡಿಸಿ, ಮೂಲತಃ 1 ರಿಂದ 7, 8ಕ್ಕೆ ನೇಮಕ ಹೊಂದಿದ ಶಿಕ್ಷಕರನ್ನು ಪಿಎಸ್‌ಟಿ ಎಂದು ಪದನಾಮ ಮಾಡಿ 1 ರಿಂದ 5 ಕ್ಕೆ ಹಿಂಬಡ್ತಿ ನೀಡಿದೆ. ಇದರಿಂದ ಸುಮಾರು 1.20 ಲಕ್ಷ ಶಿಕ್ಷಕರಿಗೆ ಅನ್ಯಾಯವಾಗಲಿದೆ. ಹಾಗಾಗಿ ಕೂಡಲೇ ಈ ಆದೇಶವನ್ನು ಹಿಂದಕ್ಕೆ ಪಡೆಯಬೇಕು. 2016ಕ್ಕಿಂತ ಮುಂಚೆ ನೇಮಕ ಹೊಂದಿದ ಶಿಕ್ಷಕರನ್ನು ಎನ್‌ಸಿಟಿ ಈ ನಿಯಮಾವಳಿ ಪ್ರಕಾರ ಪದವಿ ವಿದ್ಯಾರ್ಹತೆ ಹೊಂದಿದ ಎಲ್ಲ ಸೇವಾನಿರತ ಶಿಕ್ಷಕರನ್ನು ಜಿಪಿಟಿ ಶಿಕ್ಷಕರೆಂದು ಸೇವಾ ಜೇಷ್ಠತೆಯೊಂದಿಗೆ ಪುನರ್ ಪದನಾಮಕರಣ ಮಾಡಬೇಕು ಎಂಬುದು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಬೇಡಿಕೆಯಾಗಿದೆ.

ಈ ಮೊದಲಿನ ಪ್ರೌಢಶಾಲಾ ಬಡ್ತಿ ನಿಯಮಾವಳಿಯಂತೆ 2016ರ ಮುಂಚೆ ನೇಮಕಾತಿ ಹೊಂದಿದ ಹಾಗೂ ಬಿ.ಇಡಿ ಪದವಿ ಪಡೆದ ಪ್ರಾಥಮಿಕ ಶಾಲಾ ಶಿಕ್ಷಕರು ಖಾಲಿಯಾಗುವವರೆಗೂ ಪ್ರೌಢಶಾಲೆಗೆ ಬಡ್ತಿ ನೀಡಬೇಕು, ತದನಂತರದಲ್ಲಿ ಹೊಸದಾಗಿ ನೇಮಕಗೊಂಡ ಜಿಪಿಟಿ ಶಿಕ್ಷಕರನ್ನು ಪರಿಗಣಿಸಬೇಕು, ಈ ಮುಂಚಿನ ನಿಯಮಾವಳಿಯಂತೆ ಮುಖ್ಯ ಶಿಕ್ಷಕರ ಹುದ್ದೆಗೆ ವಿದ್ಯಾರ್ಹತೆಯನ್ನು ಪರಿಗಣಿಸದೇ ಅಖಂಡ ಸೇವಾಹಿರಿತನದ ಆಧಾರದ ಮೇಲೆ ಬಡ್ತಿ ನೀಡಬೇಕು ಎಂದು ಶಿಕ್ಷಕರು ಒತ್ತಾಯಿಸಿದ್ದಾರೆ.

## ಥಳಿಸಿದ ಶಿಕ್ಷಕ

ವಿಡಿಯೋ ಪ್ರಸಾರವಾದ ನಂತರ ಸಂಗಗಿರಿ ಜಿಲ್ಲಾ ಶಿಕ್ಷಣಾಧಿಕಾರಿ ತನಿಖೆ ಆರಂಭಿಸಿದ್ದು, ಅಣ್ಣಾಮಲೈ ಅವರನ್ನು ಅಮಾನತುಗೊಳಿಸಲಾಗಿದೆ. ಘಟನೆಯ ಕುರಿತು ಹೆಚ್ಚಿನ ವಿಚಾರಣೆ ನಡೆಯುತ್ತಿದೆ. ಈ ವರ್ಷದ ಆರಂಭದಲ್ಲಿ ಮಾರ್ಚ್‌ನಲ್ಲಿ ಸಂಭವಿಸಿದ ಇದೇ ರೀತಿಯ ಘಟನೆಯಲ್ಲಿ, ಕಾಲೇಜು ಹಾಸ್ಟೆಲ್‌ನಲ್ಲಿ 21 ವರ್ಷದ ಪದವಿ ವಿದ್ಯಾರ್ಥಿಯನ್ನು ಕೊಂದ ಆರೋಪದ ಮೇಲೆ ತೆಲಂಗಾಣದ ಸರ್ಕಾರಿ ಕಾಲೇಜಿನ ಏಳು ವಿದ್ಯಾರ್ಥಿಗಳನ್ನು ಬಂಧಿಸಲಾಗಿತ್ತು.

ವೆಂಕಟ್ ಎಂದು ಗುರುತಿಸಲಾಗಿದ್ದು, ಬಾಲಕನನ್ನು ಆರೋಪಿಗಳು ಮತ್ತು ಅವರ ಎಲ್ಲಾ ಸಹಪಾಠಿಗಳು ಹೊಡೆದು ಕತ್ತು ಹಿಸುಕಿ ಕೊಂದಿದ್ದಾರೆ ಎಂದು ವರದಿಯಾಗಿದೆ. ಆರೋಪಿಗಳಲ್ಲಿ ಅಪ್ರಾಪ್ತರೂ ಸೇರಿದ್ದಾರೆ. ತೆಲಂಗಾಣದ ನಿಜಾಮಾಬಾದ್‌ನಲ್ಲಿ ಈ ಘಟನೆ ನಡೆದಿದೆ.

## 7 ಭಕ್ತರ ಸಾವು

ತುಂಬಾ ಜನರು ಇದ್ದ ಕಾರಣ ನೂಕುನುಗ್ಗಲು ಏರ್ಪಟ್ಟಿತ್ತು, ಘಟನೆಯ ಬಗ್ಗೆ ಮಾಹಿತಿ ಪಡೆದ ತಕ್ಷಣ, ಪೊಲೀಸ್-ಆಡಳಿತ ತಂಡವು ಸ್ಥಳಕ್ಕೆ ಧಾವಿಸಿದ್ದು, ತಕ್ಷಣವೇ ಪರಿಹಾರ ಕಾರ್ಯವನ್ನು ಪ್ರಾರಂಭಿಸಿತು. ಶ್ರಾವಣ ಮಾಸದ ಸೋಮವಾರದಂದು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ದೇವಸ್ಥಾನಕ್ಕೆ ಆಗಮಿಸುತ್ತಾರೆ.

ರಾಬರ್ ಬೆಟ್ಟ ಹತ್ತುವಾಗ ಮೆಟ್ಟಿಲುಗಳ ಮೇಲೆ ಹಠಾತ್ ಕಾಲ್ತುಳಿತ ಸಂಭವಿಸಿದೆ ಎಂದು ಹೇಳಲಾಗುತ್ತಿದೆ. ಜನರು ಒಬ್ಬರನ್ನೊಬ್ಬರು ತುಳಿದುಕೊಳ್ಳುತ್ತಾ ಅಲ್ಲಿ ಇಲ್ಲಿ ಓಡತೊಡಗಿದರು. ಪೊಲೀಸರು ಪರಿಸ್ಥಿತಿ ನಿಯಂತ್ರಿಸುವಷ್ಟರಲ್ಲಿ ಏಳು ಮಂದಿ ಸಾವನ್ನಪ್ಪಿದ್ದರು. ಸೋಮವಾರ ಬೆಳಗ್ಗೆ ಸೂರ್ಯೋದಯದ ವೇಳೆ ಈ ಅವಘಡ ಸಂಭವಿಸಿದೆ. ಅಪಘಾತದಲ್ಲಿ 10ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

ಬರಾಬರ್ ಬಳಿ ಅಪಘಾತ ಸಂಭವಿಸಿದೆ ಎಂದು ಜೆಡಿಯು ಜಿಲ್ಲಾಧ್ಯಕ್ಷರು ತಿಳಿಸಿದ್ದಾರೆ. ಏಳು ಮಂದಿ ಸಾವನ್ನಪ್ಪಿದ್ದಾರೆ. ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಜೆಹಾನಾಬಾದ್‌ನ ಬರಾಬರ್‌ನಲ್ಲಿರುವ ಸಿದ್ದೇಶ್ವರ ಧಾಮದಲ್ಲಿ ಸೋಮವಾರ ಜನಸಂದಣಿ ಗಣನೀಯವಾಗಿ ಹೆಚ್ಚಿತ್ತು. ಇದ್ದಕ್ಕಿದ್ದಂತೆ ಕಾಲ್ತುಳಿತ ಉಂಟಾಯಿತು ಎಂದರು.

## ಪ್ರತಿಭಟನೆ

ಇದರಿಂದ ಆಸ್ಪತ್ರೆಗಳಲ್ಲಿ ತುರ್ತು ಸೇವೆಯಲ್ಲಿ ಕೊಂಚ ವ್ಯತ್ಯಯವಾಗಿದೆ. ಸದ್ಯ ಸೀನಿಯರ್ ವೈದ್ಯರು ಕಪ್ಪು ಪಟ್ಟಿ ಧರಿಸಿ ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿದ್ದು ಆಸ್ಪತ್ರೆಗೆ ಹಾಜರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಪ್ರತಿ ದಿನ ಆಸ್ಪತ್ರೆಗೆ ಸಾವಿರಾರು ರೋಗಿಗಳು ಚಿಕಿತ್ಸೆಗೆ ಬರುತ್ತಾರೆ. ಎಲ್ಲಾ ವೈದ್ಯರು ಪ್ರತಿಭಟನೆಗೆ ಇಳಿಯುವುದರಿಂದ ರೋಗಿಗಳಿಗೆ ಸಮಸ್ಯೆ ಆಗುವ ಸಾಧ್ಯತೆ ಹೆಚ್ಚಿರುತ್ತೆ. ಹೀಗಾಗಿ ವೈದ್ಯರು ಸದ್ಯ ಪ್ರತಿಭಟನೆ ಬಗ್ಗೆ ಸಭೆ ನಡೆಸಿ ಚರ್ಚಿಸಿ ಪ್ರತಿಭಟನೆ ಕೈಗೊಳ್ಳಲಿದ್ದಾರೆ.

ಇನ್ನು ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಭಾರತೀಯ ವೈದ್ಯಕೀಯ ಸಂಘದ) ಕರ್ನಾಟಕ ಘಟಕದ ಅಧ್ಯಕ್ಷರಾದ ಡಾ. ಶ್ರೀನಿವಾಸ್ ಎಸ್ ., ಅವರು ಮಾತನಾಡಿದ್ದಾರೆ. ಕೊಲ್ಕತ್ತಾದಲ್ಲಿ ನಡೆದ ಘಟನೆ ತುಂಬಾ ದುಃಖ ತಂದಿದೆ. ಘಟನೆಗೆ ನಮ್ಮ ಖಂಡನೆ ಇದೆ. ಈಗಾಗಲೇ ಜೂನಿಯರ್ ಡಾಕ್ಟರ್ಸ್ ಪ್ರತಿಭಟನೆ ನಡೆಸುತ್ತಿದ್ದಾರೆ. ಸೀನಿಯರ್ ಡಾಕ್ಟರ್ ಕೂಡ ಪ್ರತಿಭಟನೆಗೆ ತಿಳಿದರೆ ರೋಗಿಗಳ ಚಿಕಿತ್ಸೆಗೆ ಸಮಸ್ಯೆ ಆಗುತ್ತೆ, ಹೀಗಾಗಿ ನಾವು ಸಭೆ ನಡೆಸಿ ಎರಡು-ಮೂರು ದಿನಗಳಲ್ಲಿ ಈ ಬಗ್ಗೆ ನಿರ್ಧಾರ ಮಾಡುತ್ತೇವೆ. ರಾಜ್ಯದಲ್ಲಿ ಡೆಂಗ್ಯೂ ಸೇರಿದಂತೆ ನಾನಾ ರೋಗ ಸಮಸ್ಯೆಗಳು ತಾಂಡವವಾಡುತ್ತಿದೆ. ಇದೆಲ್ಲವನ್ನೂ ನೋಡಿಕೊಂಡು ತೀರ್ಮಾನ ಮಾಡಲಾಗುತ್ತೆ ಎಂದರು.

**ಏನಿದು ಪ್ರಕರಣ:** ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜಿನಲ್ಲಿಯೇ ಸ್ನಾತಕೋತ್ತರ ವೈದ್ಯೆ ಮೇಲೆ ಅತ್ಯಾಚಾರ ನಡೆಸಿ ಹತ್ಯೆ ಮಾಡಲಾಗಿದೆ. ಪ್ರಾಥಮಿಕ ಶವಪರೀಕ್ಷೆಯಲ್ಲಿ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ನಡೆದಿರುವುದು ದೃಢಪಟ್ಟಿದೆ. ಸ್ನಾತಕೋತ್ತರ ದ್ವಿತೀಯ ವರ್ಷದಲ್ಲಿ ವ್ಯಾಸಂಗ ಮಾಡುತ್ತಿದ್ದ ಕಿರಿಯ ವೈದ್ಯೆ ರಾತ್ರಿ ಪಾಳಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರು. ಬೆಳಗ್ಗೆ ಆಸ್ಪತ್ರೆಯ ಸೆಮಿನಾರ್ ಹಾಲ್‌ನಲ್ಲಿ ಆಕೆಯ ಅರೆಬೆತ್ತಲೆ ಶವ ಪತ್ತೆಯಾಗಿತ್ತು.

ಶವಪರೀಕ್ಷೆಯಲ್ಲಿ ಆಕೆಯ ಕೈಕಾಲು, ಬಾಯಿ ಮತ್ತು ಕಣ್ಣುಗಳಿಂದ ರಕ್ತಸ್ರಾವವಾಗಿದೆ ಎಂದು ತಿಳಿದುಬಂದಿದೆ. ದೇಹದ ಹಲವೆಡೆ ಗಾಯಗಳೂ ಕಂಡುಬಂದಿವೆ. ಕೊಲೆಯಾದ ಸ್ಥಳದಲ್ಲಿ ಪತ್ತೆಯಾದ ಬ್ಲೂಟೂತ್ ಆಧಾರದ ಮೇಲೆ ಪೊಲೀಸರು ಈಗಾಗಲೇ ಓರ್ವನನ್ನು ಬಂಧಿಸಿದ್ದಾರೆ.

## ಸಾವು

ಅಪಘಾತದಲ್ಲಿ ವಾಹನವು ಸಂಪೂರ್ಣವಾಗಿ ನಜ್ಜುಗುಜ್ಜಾಗಿದ್ದರಿಂದ ದೇಹಗಳನ್ನು ಹೊರತೆಗೆಯುವುದು ಸವಾಲಿನ ಕೆಲಸವಾಗಿತ್ತು.

ಗಾಯಗೊಂಡ ಇಬ್ಬರನ್ನು ತಕ್ಷಣ ತಿರುವಳ್ಳೂರು ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ಕರೆದೊಯ್ಯಲಾಯಿತು. ಅಪಘಾತದಿಂದಾಗಿ ಹೆದ್ದಾರಿಯಲ್ಲಿ ಎರಡು ಗಂಟೆಗಳ ಕಾಲ ಸಂಚಾರ ಸ್ಥಗಿತಗೊಂಡಿತ್ತು. ಕನಗಮ್ಮಛತ್ರಂ ಪೊಲೀಸರು ಟ್ರಕ್ ಚಾಲಕನನ್ನು ಬಂಧಿಸಿದ್ದಾರೆ. ಅಪಘಾತಕ್ಕೀಡಾದ ಐವರು ವಿದ್ಯಾರ್ಥಿಗಳು ಓಂಗೋಲ್ ಮೂಲದವರಾಗಿದ್ದು, ಚೆನ್ನೈನ ಖಾಸಗಿ ಕಾಲೇಜಿನಲ್ಲಿ ಓದುತ್ತಿದ್ದಾರೆ ಎಂದು ಗುರುತಿಸಲಾಗಿದೆ. ಹೆಚ್ಚಿನ ತನಿಖೆ ನಡೆಯುತ್ತಿದೆ.

ಚೆನ್ನೈನ ಖಾಸಗಿ ವಿಶ್ವವಿದ್ಯಾಲಯದ ಏಳು ವಿದ್ಯಾರ್ಥಿಗಳು ಮತ್ತು ಚಾಲಕ ಸೇರಿದಂತೆ ಎಂಟು ಮಂದಿ ಕಾರಿನಲ್ಲಿ ಪ್ರಯಾಣಿಸುತ್ತಿದ್ದಾಗ ಅಪಘಾತ ಸಂಭವಿಸಿದೆ. ತಿರುವಣ್ಣಾಮಲೈ ಮತ್ತು ಆಂಧ್ರಪ್ರದೇಶದ ದೇವಸ್ಥಾನಗಳಿಗೆ ಭೇಟಿ ನೀಡಿ ಚೆನ್ನೈಗೆ ಹಿಂತಿರುಗುತ್ತಿದ್ದಾಗ ವಾಹನ ನಿಯಂತ್ರಣ ತಪ್ಪಿ ಲಾರಿಗೆ ಡಿಕ್ಕಿ ಹೊಡೆದಿದೆ. ಐವರು ವಿದ್ಯಾರ್ಥಿಗಳು ತಕ್ಷಣ ಸಾವನ್ನಪ್ಪಿದ್ದು, ಚಾಲಕ ಸೇರಿದಂತೆ ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಮೃತರನ್ನು ಆಂಧ್ರಪ್ರದೇಶ ಮೂಲದ ಕುರ್ದನ್ (21), ಯುಕೇಶ್, ನಿತೀಶ್, ನಿತೀಶ್ ವರ್ಮಾ ಮತ್ತು ರಾಮ್‌ಕೋಮನ್ ಎಂದು ಗುರುತಿಸಲಾಗಿದೆ. ಗಾಯಗೊಂಡ ವಿದ್ಯಾರ್ಥಿಗಳಾದ ಚೈತನ್ಯ (21) ಮತ್ತು ವಿಷ್ಣು (21) ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಮೃತರನ್ನು ಚೆನ್ನೈನ ಎಸ್‌ಆರ್‌ಎಂ ಕಾಲೇಜಿನಲ್ಲಿ ಸಿಎಸ್‌ಸಿ ಡೇಟಾ ಸೈನ್ಸ್ ಮೂರನೇ ವರ್ಷದಲ್ಲಿ ಓದುತ್ತಿದ್ದರು.

ಅಪಘಾತದ ತನಿಖೆ ಮುಂದುವರಿದಿದೆ ಎಂದು ಕೆಕೆ ಛತ್ರಂ ಪೊಲೀಸರು ಖಚಿತಪಡಿಸಿದ್ದಾರೆ. ಅಪಘಾತದ ಕಾರಣ ಇನ್ನೂ ಪರಿಶೀಲನೆಯಲ್ಲಿದೆ, ಪ್ರಾಥಮಿಕ ಸಂಶೋಧನೆಗಳು ಲಾರಿಗೆ ಡಿಕ್ಕಿ ಹೊಡೆಯುವ ಮೊದಲು ವಾಹನದ ನಿಯಂತ್ರಣ ಕಳೆದುಕೊಂಡ ಹಿನ್ನೆಲೆಯಲ್ಲಿ ಈ ಅಪಘಾತ ಸಂಭವಿಸಿದೆ.

# ಯುವಕರಿಗೆ ಸ್ಫೂರ್ತಿ ನೀಡುವ ಮಹಾನ್ ವ್ಯಕ್ತಿಗಳ ನುಡಿ ಮುತ್ತುಗಳಿವು

**ಬೆಂಗಳೂರು:** ಇಂದಿನ ಯುವಕರೇ ನಮ್ಮ ದೇಶದ ಮುಂದಿನ ನಾಯಕರು. ಯುವಕರು ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಜ್ಞಾನವನ್ನು ಹೊಂದಿದ್ದು, ಅವರಿಗೆ ಅವಕಾಶಗಳನ್ನು ಕಲ್ಪಿಸಿಕೊಡಬೇಕು. ಯುವಕರ ಕೆಲಸಗಳಿಗೆ ಬೆಂಬಲ ವನ್ನು ನೀಡಿದರೆ ದೇಶವು ಪ್ರಗತಿಯತ್ತ ಸಾಗಲು ಸಾಧ್ಯ. ಹೀಗಾಗಿ ಯುವಸಮುದಾಯವನ್ನು ಪ್ರೋತ್ಸಾಹಿಸಲು ಹಾಗೂ ದೇಶವು ಸುಸ್ಥಿರ ಅಭಿವೃದ್ಧಿಯತ್ತ ಸಾಗಲು ಯುವಕರ ಪಾತ್ರ ಎಷ್ಟು ಮುಖ್ಯ ಎಂದು ತಿಳಿಸಲು ಪ್ರತಿ ವರ್ಷ ಆಗಸ್ಟ್ 12 ರಂದು ಅಂತಾರಾಷ್ಟ್ರೀಯ ಯುವದಿನವನ್ನು ಆಚರಿಸಲಾಗುತ್ತದೆ.



**ಅಂತಾರಾಷ್ಟ್ರೀಯ ಯುವ ದಿನದ ಇತಿಹಾಸ:** 1999, ಡಿಸೆಂಬರ್ 17 ರಂದು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಆಗಸ್ಟ್ 12ರಂದು ಅಂತಾರಾಷ್ಟ್ರೀಯ ಯುವದಿನವನ್ನು ಆಚರಿಸಲು ನಿರ್ಧಾರವನ್ನು ತೆಗೆದುಕೊಂಡಿತು. 1998ರಲ್ಲಿ ನಡೆದ ವಿಶ್ವ ಸಮ್ಮೇಳನದಲ್ಲಿ ನೀಡಿದ ಸಲಹೆಗಳನ್ನು ಅನುಸರಿಸಿ ಈ ದಿನವನ್ನು ಆಚರಿಸಲು ಮುಂದಾಯಿತು. ಆ ಬಳಿಕ 2000 ರಿಂದ ಪ್ರತಿ ವರ್ಷ ಆಗಸ್ಟ್ 12 ರಂದು ವಿಶ್ವ ಯುವ ದಿನವನ್ನು ಆಚರಿಸುತ್ತಾ ಬರಲಾಗುತ್ತಿದೆ.

**ಯುವಸಮುದಾಯಕ್ಕೆ ಸ್ಫೂರ್ತಿದಾಯಕ ನುಡಿಮುತ್ತುಗಳು:**

- ನೀವು ಎಷ್ಟು ಬುದ್ಧಿವಂತರಿದ್ದೀರಿ, ಎಷ್ಟು ಚೆನ್ನಾಗಿದ್ದೀರಿ ಅಥವಾ ಎಷ್ಟು ಚೆನ್ನಾಗಿ ಸಂಪರ್ಕಗಳನ್ನು ಹೊಂದಿದ್ದೀರಿ ಎಂಬುದು ಲೆಕ್ಕಕ್ಕೆ ಬರುವುದಿಲ್ಲ. ಪರಿಶ್ರಮ ಹಾಗೂ ಧೈರ್ಯವಿದ್ದರು ಮಾತ್ರ ಯಶಸ್ವಿ ವ್ಯಕ್ತಿಗಳಾಗಬಹುದು ಸುಧಾ ಮೂರ್ತಿ.
- ಏಳಿ ಎದ್ದೇಳಿ ಗುರಿ ಮುಟ್ಟುವ ತನಕ ನಿಲ್ಲದಿರಿ ಸ್ವಾಮಿ ವಿವೇಕಾನಂದ.
- ಉದ್ಯೋಗ ಅರಸುವವರಾಗುವುದು ಬಿಟ್ಟು ಉದ್ಯೋಗ ಸೃಷ್ಟಿಕರ್ತರಾಗುವಂತೆ ಯುವಜನರನ್ನು ಅಣಿಗೊಳಿಸಬೇಕು- ಎಪಿಜೆ ಅಬ್ದುಲ್ ಕಲಾಂ.
- ಯುವಕನಾಗಿದ್ದಾಗ ನೋವು ತರುವ ಮತ್ತು ವರ್ಷಗಳ ಬಳಿಕ ಮಾಗಿದಾಗ ರುಚಿ ಕೊಡುವ ಏಕಾಂತದಲ್ಲಿ ನಾನು ಬದುಕುತ್ತೇನೆ ಆಲ್ಬರ್ಟ್ ಐನ್‌ಸ್ಟೀನ್.
- ಯೌವನದ ಅವಧಿ ಚಿಕ್ಕದು. ಅದು ದೀರ್ಘಾಯುವಲ್ಲ.ಯುವಜನರು ಸಾಟಿಯಿಲ್ಲದ ಶಕ್ತಿ ಮತ್ತು ಉತ್ಸಾಹವನ್ನು ಹೊಂದಿದ್ದಾರೆ. ಬದಲಾವಣೆ ತರುವ ಶಕ್ತಿ ಅವರಿಗಿದೆ ಸ್ವಾಮಿ ವಿವೇಕಾನಂದ.
- ಯುವ ಶಕ್ತಿಯು ಇಡೀ ವಿಶ್ವಕ್ಕೆ ಸಾಮಾನ್ಯ ಸಂಪತ್ತು. ಯುವ ಜನರು ನಮ್ಮ ಇತಿಹಾಸ, ನಮ್ಮ ವಾಸ್ತವ ಮತ್ತು ನಮ್ಮ ಭವಿಷ್ಯದ ಕನ್ನಡಿ, ಯುವ ಜನರ ಶಕ್ತಿ, ವಿಚಾರ, ಉತ್ಸಾಹ ಮತ್ತು ಧೈರ್ಯಕ್ಕೆ ನಮ್ಮ ಸಮಾಜದ ಬೇರೆ ಯಾವ ವರ್ಗವೂ ಸಾಟಿ ಅಲ್ಲ- ಕೈಲಾಶ್ ಸತ್ಯಾರ್ಥಿ.

# ದೇಗುಲದ ಹೊರಗೋಡೆಗಿಂತ ಎತ್ತರದಲ್ಲಿ ಖಾಸಗಿ ಕಟ್ಟಡ ತೆರವಿಗೆ ಸೂಚನೆ

**ಬೇಲೂರು:** ಇಲ್ಲಿನ ಶ್ರೀಚನ್ನಕೇಶವಸ್ವಾಮಿ ದೇಗುಲದ ಸುತ್ತಲಿನಲ್ಲಿ ದೇಗುಲದ ಹೊರಗೋಡೆಗಿಂತ ಎತ್ತರಕ್ಕಿರುವ ಖಾಸಗಿ ಕಟ್ಟಡಗಳ ಮೇಲ್ಚಾವಣಿಗಳ ತೆರವುಗೊಳಿಸಲು ಹಾಗೂ ದೇಗುಲದ ರಾಜಗೋಪುರದ ಈಗಿರುವ ಬಣ್ಣ ಬದಲಾವಣೆ ಮಾಡಲು ಯುನೆಸ್ಕೋ ತಂಡದ ಪ್ರಮುಖರು ಸೂಚಿಸಿದ್ದಾರೆ.

ಇಂದು ದೇಗುಲಕ್ಕೆ ಆಗಮಿಸಿದ ಯುನೆಸ್ಕೋದ ನಿರ್ದೇಶಕ ಡಾ.ಲೆಜಾರೆ ಲೆಲೊಂಡೊ ಅಸೊಮೊ, ಉಪ ನಿರ್ದೇಶಕಿ ಡಾ.ಜ್ಯೋತಿಅಗ್ರಹಾರ್, ದೇಗುಲ ವೀಕ್ಷಣೆ ನಂತರ ಅಧಿಕಾರಿಗಳಿಗೆ ಕೆಲವೊಂದು ಮಾಹಿತಿ ನೀಡಿ, ದೇಗುಲ ವಿಶ್ವ ಪ್ರಸಿದ್ಧಿ ಪಡೆದಿದೆ. ಯುನೆಸ್ಕೋ ಪಟ್ಟಿಗೆ ಸೇರ್ಪಡೆಗೊಂಡಿದೆ. ದೇಗುಲದ ಸೌಂದರ್ಯಕ್ಕೆ ದಕ್ಕೆ ಬರಬಾರದು, ಅದರಂತೆ ದೇಗುಲದ ಸುತ್ತಲಿನಲ್ಲಿ ದೇಗುಲ ಹೊರಗೋಡೆಗಿಂತ ಎತ್ತರಕ್ಕಿರುವ ಮೇಲ್ಚಾವಣಿಗಳನ್ನು ತೆರವುಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಶ್ರೀಚನ್ನಕೇಶವಸ್ವಾಮಿ ದೇಗುಲವನ್ನು ಸರಕಾರ, ಸ್ಥಳೀಯ ಆಡಳಿತ, ದೇಗುಲ ಸಮಿತಿ ಒಟ್ಟಿಗೆ ಸೇರಿ ಉತ್ತಮ ನಿರ್ವಹಣೆ ಮಾಡುತ್ತಿದ್ದಾರೆ. ದೇಗುಲ ಬೇಲೂರಿಗೆ, ಭಾರತಕ್ಕೆ ಮಾತ್ರ ಸೀಮಿತವಾಗದೆ ಪ್ರಪಂಚದ ಆಸ್ತಿಯಾಗಿದೆ. ದೇಗುಲ ನೋಡಿ ಹೆಮ್ಮೆಯಾಗಿದೆ. ಇದೊಂದು ಯೋಗ್ಯವಾದಂತ ಸ್ಥಳ. 2023 ರಲ್ಲಿ ಸೌದಿ ಅರೇಬಿಯಾದಲ್ಲಿ



ನಡೆದ ಯುನೆಸ್ಕೋ ಸಮ್ಮೇಳನದಲ್ಲಿ ಈ ದೇಗುಲವನ್ನು ವಿಶ್ವಪಾರಂಪರಿಕ ಪಟ್ಟಿಗೆ ಸೇರ್ಪಡೆಗೊಳಿಸಿದ್ದೇವೆ ಎಂದರು.

ಯುನೆಸ್ಕೋ ಉಪ ನಿರ್ದೇಶಕಿ ಡಾ.ಜ್ಯೋತಿ ಅಗ್ರಹಾರ್ ಅವರು, ಕಳೆದ ತಿಂಗಳು ನಡೆದ ವಿಶ್ವಪಾರಂಪರಿಕ ಪ್ರತಿನಿಧಿಗಳ ಸಮ್ಮೇಳ ನಡೆಯಿತು. ಸಮ್ಮೇಳನಕ್ಕೆ ಆಗಮಿಸಿದ್ದ ಯುನೆಸ್ಕೋ ತಂಡ ನಿರ್ದೇಶಕರೂ ಸೇರಿದಂತೆ ತಂಡದ ಸದಸ್ಯರು ದೇಗುಲಕ್ಕೆ ಆಗಮಿಸಿದ್ದೇವೆ. ಭಾರತದಲ್ಲಿ ಧಾರ್ಮಿಕ ದೇಗುಲ ಎಲ್ಲಿದೆಯೊ ಅಲ್ಲಿ ಪ್ರವೇಶ ಶುಲ್ಕ ಇರುವುದಿಲ್ಲ ಎಂದು ಪ್ರಶ್ನೆಯೊಂದಕ್ಕೆ ಸ್ಪಷ್ಟಪಡಿಸಿದ ಡಾ.ಜ್ಯೋತಿ ಅಗ್ರಹಾರ್, ದೇಗುಲಕ್ಕೆ ಆಗಮಿಸುವ ಪ್ರವಾಸಿಗರ ಸಂಖ್ಯೆ ಎಣಿಕೆಗೆ ಪ್ರವೇಶ ಧ್ವಾರದಲ್ಲಿ ಕೌಂಟಿಂಗ್ ಮಿಷಿನ್ ಅಳವಡಿಸಲು ಸೂಚಿಸಿದರು.

ಇದೆ ವೇಳೆ ದೇಗುಲ ಸಮಿತಿಯ ರವೀಂದ್ರ ಅವರು, ದೇಗುಲದ ಸುತ್ತ 100 ಮೀಟರ್ ವ್ಯಾಪ್ತಿಯಲ್ಲಿ ಹೊಸದಾಗಿ ಕಟ್ಟಡ ನಿರ್ಮಿಸಿಕೊಳ್ಳಲು, ಬ್ಯಾಂಕ್ ಸಾಲ ಇತ್ಯಾದಿಗೆ ತೊಂದರೆಯಾಗುತ್ತಿದೆ. ನಮ್ಮ ಆಸ್ತಿಯನ್ನು ವಶಪಡಿಸಿಕೊಂಡು ಪರಿಹಾರ ಕೊಟ್ಟರೆ ಒಳ್ಳೆಯದಾಗುತ್ತದೆ. ಈಗಿನ ವ್ಯವಸ್ಥೆಯಲ್ಲಿ ನಮ್ಮ ಸ್ಥಿತಿ 'ಹಾವು ಸಾಯಬಾರದು ಕೋಲು ಮುರಿಬಾರದು' ಎಂಬಂತಾಗಿದೆ ಎಂದು ಅಳಲು ತೋಡಿಕೊಂಡರು. ಆಸ್ತಿ ವಶಪಡಿಸಿಕೊಳ್ಳುವುದು ಬಿಡುವುದು ಇದರ ತೀರ್ಮಾನ ಲೋಕಸಭೆಯಲ್ಲಿ ತೀರ್ಮಾನಿಸಬೇಕಿದೆ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದರು. ಇದೆ ವೇಳೆ ಪ್ರಸಿದ್ಧ ವಿಷ್ಣುಸಮುದ್ರಕೆರೆಗೆ ಸೇರಿದ ಕಲ್ಯಾಣಿಯನ್ನು ವೀಕ್ಷಿಸಿ, ದೇಗುಲಕ್ಕೆ ಹತ್ತಿರ ಇರುವುದರಿಂದ ಪ್ರವಾಸಿಗರ ಆಕರ್ಷಿಸಲು ವಿದ್ಯುತ್ ಅಲಂಕಾರ, ಅವಘಡ ಸಂಭವಿಸದಂತೆ ಮುಂಜಾಗ್ರತೆ ಕ್ರಮ ಸೇರಿದಂತೆ ಕೆಲವೊಂದು ಅಭಿವೃದ್ಧಿ ಕಾರ್ಯ ಕೈಗೊಳ್ಳುವಂತೆ ಸಲಹೆ ನೀಡಿದರು. ಈ ಸಂದರ್ಭ ಯುನೆಸ್ಕೋದ ಉಪ ನಿರ್ದೇಶಕಿ ಡಾ.ಜ್ಯೋತಿ ಅಗ್ರಹಾರ್ ಹಾಗೂ ಕೇಂದ್ರ ಪುರಾತತ್ವ ಇಲಾಖೆ ಅಧೀಕ್ಷಕ ಬಿಪಿನ್‌ಚಂದ್ರ, ಪುರಾತತ್ವ ಇಲಾಖೆ ಸಹಾಯಕ ಗೌತಮ್, ತಹಸೀಲ್ದಾರ್ ಎಂ.ಮಮತಾ, ದೇಗುಲ ಸಮಿತಿಯ ಅಧ್ಯಕ್ಷ ಡಾ.ನಾರಾಯಣಸ್ವಾಮಿ, ಸದಸ್ಯರಾದ ರವೀಂದ್ರ, ವಿಜಯಲಕ್ಷ್ಮೀ, ಪ್ರವಾಸೋಧ್ಯಮ ಇಲಾಖೆಯ ಹರೀಶ್, ದೇಗುಲ ಇಒ ಯೋಗೇಶ್, ಪುರಸಭಾ ಆರೋಗ್ಯಾಧಿಕಾರಿ ಲೋಹಿತ್ ಇದ್ದರು.

# ರಾಜ್ಯದ ನೀರಾವರಿ ಯೋಜನೆ ಸ್ಥಳದಲ್ಲಿ ಐದು ಕೋಟಿ ರೂಪಾಯಿ ಠೇವಣಿ



**ಬೇಲೂರು:** ರಾಜ್ಯದಲ್ಲಿ ಎಲ್ಲೆಲ್ಲಿ ನೀರಾವರಿ ಯೋಜನೆ ಇದೆಯೋ ಅಲ್ಲಿಗೆ ಸರಕಾರ 5 ಕೋಟಿ ರೂ. ಠೇವಣಿ ಇಟ್ಟರೆ, ಅಲ್ಲಿನ ಕೆಲಸಗಳನ್ನು ಸುಗಮವಾಗಿ ಮಾಡಲು ಸಾಧ್ಯವಾಗುತ್ತದೆ ಎಂದು ಪುಷ್ಪಗಿರಿ ಮಹಾಸಂಸ್ಥಾನದ ಶ್ರೀ ಸೋಮಶೇಖರಸ್ವಾಮೀಜಿ ಹೇಳಿದರು.

ಏತ ನೀರಾವರಿ ಯೋಜನೆ ಮೂಲಕ ಮಾದಿಹಳ್ಳಿ-ಹಳೇಬೀಡು ಹೋಬಳಿ ಕೆರೆಗಳನ್ನು ತುಂಬಿಸಲು ತಾಲೂಕಿನ ಹಾಲ್ತೊರೆ ಗ್ರಾಮದಲ್ಲಿರುವ ಮೋಟಾರ್ ಪಂಪ್‌ಸೆಟ್‌ಗೆ ಚಾಲನೆ ನೀಡಿ ಮಾತನಾಡಿ, ಹಣ ಠೇವಣಿ ಇಡುವ ವಿಚಾರದಲ್ಲಿ ಸಂಬಂಧಪಟ್ಟ ಇಲಾಖೆ ಸಚಿವರು ಗಮನ ಹರಿಸಬೇಕು. ಶಾಸಕ ಎಚ್.ಕೆ.ಸುರೇಶ್, ತಮ್ಮ ಹೆಸರು ತಾಲೂಕಿನಲ್ಲಿ ಶಾಶ್ವತವಾಗಿ ಉಳಿಯ ಬೇಕೆಂದರೆ ನೀರಾವರಿ ಯೋಜನೆಯ ಕೆಲಸಗಳನ್ನು ಸಂಪೂರ್ಣವಾಗಿ ಮಾಡಿಸಬೇಕು. ಇವರು ಶಾಸಕರಾದ ಮೇಲೆ ಉತ್ತಮ ಮಳೆಯಾಗಿದೆ. ಕೆರೆಗಳು ತುಂಬಿ ಒಳ್ಳೆ ಬೆಳೆಯಾಗಿದೆ. ಹಳೇಬೀಡು ಕೆರೆ ತುಂಬುವ ಸಾಧ್ಯತೆ ಇದೆ ಎಂದು ಸಂತಸ ವ್ಯಕ್ತಪಡಿಸಿದರು.

ಅಧಿಕಾರಿಗಳು ಮೋಟಾರ್ ಪಂಪ್ ಅನ್ನು ನಿಲ್ಲಸದೆ ನಿರಂತರವಾಗಿ ನೀರು ಹರಿಸಬೇಕು. ಎತ್ತಿನ ಹೊಳೆ ಯೋಜನೆಯಿಂದ ಚಿಕ್ಕಬಳ್ಳಾಪುರ-ಕೋಲಾರಕ್ಕೆ ನೀರು ಹೋಗುತ್ತದೆಯೋ ಇಲ್ಲವೋ ಗೊತ್ತಿಲ್ಲ. ಆದರೆ ಈ ಯೋಜನೆಯಿಂದ ತಾಲೂಕಿನಲ್ಲಿರುವ ಆ ಬಾಗದ ಕೆರೆಗಳನ್ನು ತುಂಬಿಸಲು ಅಲ್ಲಲ್ಲಿ ಪಾಯಿಂಟ್‌ಗಳನ್ನು ಮಾಡಿಸಲು ಶಾಸಕರು ಮುಂದಾಗಬೇಕೆಂದರು.

ಶಾಸಕ ಎಚ್.ಕೆ.ಸುರೇಶ್ ಮಾತನಾಡಿ, ವರುಣನ ಆಶೀರ್ವಾದದಿಂದ ತಾಲೂಕಿನಾದ್ಯಂತ ಉತ್ತಮ ಮಳೆಯಾಗಿ ಕೆರೆ ಕಟ್ಟೆಗಳು ತುಂಬಿವೆ. ಈಗಾಗಲೇ ಸಾಕಷ್ಟು ಕೆರೆಗಳಿಗೆ ಬಾಗಿನ ಅಪಿಸಿದ್ದೇವೆ. ಜತೆಗೆ ಏತ ನೀರಾವರಿ ಯೋಜನೆ ಮೂಲಕ ಹಳೇಬೀಡು-ಮಾದಿಹಳ್ಳಿ ಹೋಬಳಿಯ 26 ಕೆರೆಗಳನ್ನು ತುಂಬಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ರಣಘಟ್ಟ ಯೋಜನೆ ಕಾಮಗಾರಿ ಸ್ವಲ್ಪ ನೆನೆಗುದಿಗೆ ಬಿದ್ದಿದೆ. ಅದಕ್ಕೆ ಅನುದಾನ ತಂದು ಕೆಲಸ ಮಾಡಿಸಲಾಗುವುದು. ಹೆಬ್ಬಾಳು ಏತ ನೀರಾವರಿ ಯೋಜನೆ ಬಗ್ಗೆ ಈಗಾಗಲೇ ಸರ್ಕಾರದ ಗಮನಕ್ಕೆ ತಂದಿದ್ದು, ಶೀಘ್ರವಾಗಿ ಯೋಜನೆ ಮಂಜೂರಿಗೆ ಕ್ರಮ ಕೈಗೊಂಡು ರೈತರಿಗೆ ನೀರು ಕೊಡುವುದಕ್ಕೆ ಕ್ರಮ ವಹಿಸಲಾಗುವುದು ಎಂದರು.

ಯಗಚಿ ನೀರಾವರಿ ಯೋಜನಾ ವಿಭಾಗದ ಇಇ ಪುನೀತ್, ಎಇ ಪ್ರವೀಣ್, ನವೀನ್, ವೀರಶೈವ ಲಿಂಗಾಯಿತ ಮಹಾಸಭಾ ಅಧ್ಯಕ್ಷ ಬಸವರಾಜು, ಬಿಜೆಪಿ ಜಲ್ಲಾ ಉಪಾಧ್ಯಕ್ಷ ಹಗರೆ ಡಿಸಾಂತ್ ಕುಮಾರ್, ತಾಪಂ ಮಾಜಿ ಸದಸ್ಯ ವಿಜಯ್ ಕುಮಾರ್, ಗ್ರಾಪಂ ಅಧ್ಯಕ್ಷ ಸಂಜು, ರೈತ ಮುಖಂಡರಾದ ವಿಜಯ್ ಕುಮಾರ್, ಕುಮಾರ್, ನಾಗಚಂದ್ರ, ಛಲವಾದಿ ಪುಟ್ಟರಾಜು, ಕೆರೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಹರೀಶ್ ಸೇರಿದಂತೆ ಇತರರಿದ್ದರು,

# 'ಪಾರಂಪರಿಕ ದಿನ' ಆಚರಣೆ

**ಹುಳಿಯಾರು:** ಹುಳಿಯಾರು-ಕೆಂಕೆರೆ ಬಿ.ಎಂ.ಎಸ್. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 'ಪಾರಂಪರಿಕ ದಿನ'ವನ್ನು ಆಚರಿಸಲಾಯಿತು.

ಎಲ್ಲಾ ಅಧ್ಯಾಪಕ ವೃಂದದವರು ಮತ್ತು ವಿದ್ಯಾರ್ಥಿಗಳು ಬಿಳಿ ಅಂಗಿ, ಬಿಳಿ ಪಂಚೆ ಹಾಗೂ ಬಿಳಿ ಶಲ್ಯವನ್ನು ಧರಿಸಿ ಬಂದಿದ್ದರೆ, ಅಧ್ಯಾಪಕಿಯರು ಮತ್ತು ವಿದ್ಯಾರ್ಥಿನಿಯರು ಬಣ್ಣ ಬಣ್ಣದ ರೇಷ್ಮೆ ಸೀರೆಯೊಂದಿಗೆ ಕಂಗೊಳಿಸುತ್ತಿದ್ದರು.

ಕೊಳಗದಲ್ಲಿ ತುಂಬಿದ ರಾಗಿ, ತೆಂಗಿನಗೊನೆ, ಅಡಿಕೆಗೊನೆ, ಬಾಳೆಗೊನೆ ಹಾಗೂ ಕೃಷಿ ಉಪಕರಣಗಳನ್ನು ಒಳಗೊಂಡಂತೆ ಪಾರಂಪರಿಕ ಶೈಲಿಯಲ್ಲಿ ರಾಶಿಪೂಜೆ ಮಾಡುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು.

ಈ ಸಂದರ್ಭದಲ್ಲಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಪಾಂಶುಪಾಲ ಪ್ರೊ. ವೀರಣ್ಣ ಎಸ್.ಸಿ. ಅವರು ನಮ್ಮ ವಿದ್ಯಾರ್ಥಿಗಳು ಪಾರಂಪರಿಕ ಉಡುಗೆಗಳಲ್ಲಿ ಕಂಗೊಳಿಸುತ್ತಿದ್ದು, ಕೇವಲ ಉಡುಗೆಯಲ್ಲಷ್ಟೇ ಅಲ್ಲದೆ ನೈತಿಕತೆ ಹಾಗೂ ಮೌಲ್ಯದ ಆಧಾರದ ಮೇಲೆಯೂ ನಮ್ಮ ಸಂಸ್ಕೃತಿ ಆಚಾರ ವಿಚಾರಗಳನ್ನು ಮುಂದುವರಿಸಿಕೊಂಡುಹೋಗುವ ಹೊಣೆಗಾರಿಕೆ ನಿಮ್ಮ ಮೇಲಿದೆ ಎಂದು ಹೇಳಿದರು.

ಕಾರ್ಯಕ್ರಮದ ಸಂಚಾಲಕರಾದ ಡಾ. ಮೋಹನ್ ಕುಮಾರ್ ಮಿರ್ಲೆ ಮಾತನಾಡಿ ಅಡಿಗರ ಕವನದ ಸಾಲಿನಂತೆ 'ಇರುವುದೆಲ್ಲವ ಬಿಟ್ಟು ಇರದುದರೆಡೆಗೆ ತುಡಿವುದೆ ಜೀವನ?' ಎಂಬ ಪ್ರಶ್ನೆಯನ್ನು ಇಂದು ನಾವು ಕೇಳಿಕೊಳ್ಳಬೇಕಿದೆ. ಪಾಶ್ಚಾತ್ಯ ಸಂಸ್ಕೃತಿಯ ಅನುಕರಣೆ ಮಿತಿಮೀರುತ್ತಿದ್ದು, ಆ ಬಗ್ಗೆ ಎಚ್ಚರ ವಹಿಸಬೇಕಿದೆ. ಧನಾತ್ಮಕ ಆಚರಣೆಗಳನ್ನಷ್ಟೇ ಉಳಿಸಿಕೊಂಡು ಮುಂದುವರಿಯಬೇಕಿದೆ ಎಂದು ಅಭಿಪ್ರಾಯಪಟ್ಟರು.



ದೈಹಿಕ ಶಿಕ್ಷಣ ನಿರ್ದೇಶಕರಾದ ಪ್ರೊ. ಯೋಗೀಶ್ ಬಿ. ಅವರು ಮಾತನಾಡಿ ಪಾರಂಪರಿಕ ಉಡುಗೆಯಲ್ಲಿ ನಮ್ಮ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಬಹಳ ಸುಂದರವಾಗಿ ಕಾಣುತ್ತಿದ್ದು, ಇದನ್ನೇ ಮುಂದುವರಿಸಿದರೆ ಬ್ಯೂಟಿ ಪಾರ್ಲರ್ ಗಳಿಗೆ ಹಣ ತೆರುವುದು ತಪ್ಪುತ್ತದೆ ಎಂದು ಅಭಿಪ್ರಾಯಪಟ್ಟರು.

ರಾಜ್ಯಶಾಸ್ತ್ರ ವಿಭಾಗದ ಅಧ್ಯಾಪಕರಾದ ತಿಪ್ಪೇಸ್ವಾಮಿ ಅವರು ಮಾತನಾಡಿ ಸ್ನೇಹ, ಪ್ರೀತಿ, ಸೌಹಾರ್ದತೆ ಕೂಡ ನಮ್ಮ ಪರಂಪರೆಯೇ ಆಗಿದ್ದು, ವಿದ್ಯಾರ್ಥಿಗಳು ಅದನ್ನು ಮುಂದುವರಿಸಿಕೊಂಡು ಹೋಗಬೇಕೆಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ವಿಷಯವಾರು ಮತ್ತು ಪತ್ರಿಕೆವಾರು ಅಧಿಕ ಅಂಕ ಪಡೆದು ಮೊದಲ ಎರಡು ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು. ಕಾರ್ಯಕ್ರಮದ ನಡುನಡುವೆ ವಿದ್ಯಾರ್ಥಿಗಳು ಜನಪದ ಗೀತೆ, ಭಾವಗೀತೆ ಮತ್ತು ಕನ್ನಡ ಗೀತೆಗಳನ್ನು ಹಾಡಿದರು. ವೇದಿಕೆ ಕಾರ್ಯಕ್ರಮದ ನಂತರವೂ ವಿದ್ಯಾರ್ಥಿಗಳು ಪಾರಂಪರಿಕ ಶೈಲಿಯ ಹಾಡು-ನೃತ್ಯಗಳನ್ನು ಪ್ರದರ್ಶಿಸಿದರು. ಅಲ್ಲದೆ ವಿದ್ಯಾರ್ಥಿಗಳು ತಮ್ಮ ತರಗತಿ ಕೋಣೆಗಳನ್ನು ಮತ್ತು ಗೋಡೆಪತ್ರಿಕೆಗಳನ್ನೂ ಪಾರಂಪರಿಕ ಶೈಲಿಯಲ್ಲಿ ಅಲಂಕರಿಸಿದ್ದು, ಈ ಸ್ಪರ್ಧೆಯಲ್ಲಿ ಅಂತಿಮ ಬಿ.ಎ. ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದರೆ, ಅಂತಿಮ ಬಿ.ಕಾಂ. ವಿದ್ಯಾರ್ಥಿಗಳು ದ್ವಿತೀಯ ಮತ್ತು ಪ್ರಥಮ ಬಿ.ಕಾಂ. ವಿದ್ಯಾರ್ಥಿಗಳು ತೃತೀಯ ಸ್ಥಾನವನ್ನು ಪಡೆದವು.

ಕಾರ್ಯಕ್ರಮದಲ್ಲಿ ಬಿ.ಕಾಂ. ವಿದ್ಯಾರ್ಥಿನಿಯರಾದ ಪಲ್ಲವಿ ಎಸ್.ಕೆ. ಮತ್ತು ಮೌನಶ್ರೀ ವಿ. ಪ್ರಾರ್ಥಿಸಿದರು. ಲಾವಣ್ಯ ಕೆ.ಆರ್., ತೃತೀಯ ಬಿ.ಎ. ಸ್ವಾಗತಿಸಿದರು. ಪುಷ್ಪ ಕೆ.ಯು., ತೃತೀಯ ಬಿ.ಕಾಂ. ವಂದಿಸಿದರು. ಐ.ಕ್ಯೂ.ಎ.ಸಿ. ಸಂಚಾಲಕರಾದ ಪ್ರೊ. ಮಂಜುನಾಥ ಕೆ.ಎಸ್.ಇದ್ದರು.

## ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಾಧನೆಗೈದವರಿಂದ ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಚಾಮರಾಜನಗರ:** ವಿಕಲಚೇತನರ ಹಾಗೂ ಹಿರಿಯ ನಾಗರೀಕ ಸಬಲೀಕರಣ ಇಲಾಖೆ ವತಿಯಿಂದ 2024-25ನೇ ಸಾಲಿನಲ್ಲಿ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮ ಸಾಧನೆಗೈದ ವ್ಯಕ್ತಿಗಳು ಸಂಸ್ಥೆಗಳಿಂದ ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಪ್ರಸಕ್ತ ಸಾಲಿನ ವಿಶ್ವ ಹಿರಿಯ ನಾಗರೀಕ ದಿನಾಚರಣೆಯನ್ನು ರಾಜ್ಯ ಮಟ್ಟದಲ್ಲಿ ಆಚರಿಸುವ ಸಂದರ್ಭದಲ್ಲಿ ಸಾಂಸ್ಥಿಕ, ಕಾನೂನು, ಶಿಕ್ಷಣ, ಕ್ರೀಡಾ, ಸಾಹಿತ್ಯ, ಕಲಾ ಹಾಗೂ ಹಿರಿಯ ನಾಗರೀಕ ಕ್ಷೇತ್ರದಲ್ಲಿ ಹಾಗೂ ಸಮಾಜ ಸೇವೆಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ 06 ವೈಯಕ್ತಿಕ ಪ್ರಶಸ್ತಿಗಳನ್ನು ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿರುವ 01 ಸಂಸ್ಥೆಗೆ ಪ್ರಶಸ್ತಿ ನೀಡಲಾಗುತ್ತದೆ.

ಆಸಕ್ತ ಹಿರಿಯ ನಾಗರಿಕರಿಂದ ಹಾಗೂ ಸಂಸ್ಥೆಗಳಿಂದ ದ್ವಿಪ್ರತಿಯಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ನಮೂನೆಯನ್ನು ಜಿಲ್ಲಾಡಳಿತ ಭವನದ ಕೊಠಡಿ ಸಂ-25ರಲ್ಲಿನ ವಿಕಲಚೇತನರ ಹಾಗೂ ಹಿರಿಯ ನಾಗರೀಕ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ರವರಿಂದ ಪಡೆದು ಪೂರ್ಣ ವಿವರಗಳನ್ನು ಕನ್ನಡದಲ್ಲಿ ಭರ್ತಿ ಮಾಡಿ ಪೂರಕ ದಾಖಲೆಗಳೊಂದಿಗೆ ಆಗಸ್ಟ್ 26 ರೊಳಗೆ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ-08226-223688, 224688 ಅನ್ನು ಸಂಪರ್ಕಿಸಬಹುದೆಂದು ಪ್ರಕಟಣೆ ತಿಳಿಸಿದೆ.

## ತರಬೇತಿಗೆ ಅರ್ಜಿ ಆಹ್ವಾನ

**ಬೆಂಗಳೂರು:** ಕರ್ನಾಟಕ ಮಾಧ್ಯಮ ಅಕಾಡೆಮಿ, ಹಲವು ವರ್ಷಗಳಿಂದ ಮಾಧ್ಯಮ ಕ್ಷೇತ್ರದ ಬೆಳವಣಿಗೆಗೆ ತನ್ನದೇ ಆದ ಕೊಡುಗೆ ನೀಡುತ್ತಾ ಬಂದಿದ್ದು, ಹತ್ತು ಹಲವು ಕಾರ್ಯಕ್ರಮಗಳ ಮೂಲಕ ಪತ್ರಕರ್ತರ ಕೌಶಲ್ಯಾಭಿವೃದ್ಧಿಗೆ ಶ್ರಮಿಸುತ್ತಿದೆ. ಸರ್ಕಾರದಿಂದ ಪುನಾರಚಿತಗೊಂಡಿರುವ ಸಮಿತಿ ಹೊಸ ಹೊಸ ಕಾರ್ಯಕ್ರಮಗಳ ಮೂಲಕ ಅಕಾಡೆಮಿಗೆ ಹೊಸ ರೂಪ ನೀಡುವ ನಿಟ್ಟಿನಲ್ಲಿ ಹೆಜ್ಜೆಯನ್ನಿಟ್ಟಿದೆ. ಆ ದಿಸೆಯಲ್ಲಿ ಮಾಧ್ಯಮ ಕಚೇರಿಗಳ ಸಹಕಾರವನ್ನು ಪಡೆದು ಪತ್ರಕರ್ತರ ಕೌಶಲ್ಯಾಭಿವೃದ್ಧಿಗೆ ತರಬೇತಿ ಹಮ್ಮಿಕೊಳ್ಳುವುದು ಅಕಾಡೆಮಿಯ ಹೊಸ ಯೋಜನೆಯಾಗಿದೆ. ಪತ್ರಿಕೋದ್ಯಮ ವಿಷಯದಲ್ಲಿ ಸ್ನಾತಕೋತ್ತರ/ಪದವಿ ಮುಗಿಸಿ ಹೊರ ಬರುವ ವಿದ್ಯಾರ್ಥಿಗಳಿಗೆ ಮಾಧ್ಯಮ ಕಚೇರಿಯ ಎಲ್ಲಾ ವಿಭಾಗಗಳಲ್ಲಿ ತರಬೇತಿಯನ್ನು ಕೊಡಿಸುವ ಮೂಲಕ, ತರಬೇತಿ ಹೊಂದಿದ ವಿದ್ಯಾರ್ಥಿಗಳು ಪತ್ರಕರ್ತರಾಗುವಂತೆ ಸಿದ್ಧಪಡಿಸುವುದು ಅಕಾಡೆಮಿಯ ಉದ್ದೇಶವಾಗಿದೆ.ಪ್ರಸಕ್ತ ಸಾಲಿನಲ್ಲಿ 5 ಮಂದಿ ಮಹಿಳಾ ವಿದ್ಯಾರ್ಥಿಗಳಿಗೆ ಪ್ರಮುಖ ದಿನಪತ್ರಿಕೆಗಳಲ್ಲಿ 2 ತಿಂಗಳ ಕಾಲ ತರಬೇತಿ ಪಡೆಯಲು ಮಾಸಿಕ ತಲಾ 20,000/- ರೂ ಗಳನ್ನು ಶಿಶ್ಯವೇತನ ನೀಡಲಾಗುವುದು. ಕರ್ನಾಟಕದ ಯಾವುದೇ ವಿಶ್ವವಿದ್ಯಾಲಯಗಳಲ್ಲಿ ಪತ್ರಿಕೋದ್ಯಮ ವಿಷಯದಲ್ಲಿ ಸ್ನಾತಕೋತ್ತರ/ಪದವಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿರುವ ವಿದ್ಯಾರ್ಥಿಗಳಿಗೆ ಆದ್ಯತೆ ನೀಡಲಾಗಿದೆ. ಮಹಿಳಾ ವಿದ್ಯಾರ್ಥಿಗಳಿಗೆ ಆಗಸ್ಟ್ 26 ರೊಳಗೆ ತಮ್ಮ ಸ್ವವಿದರ, ದೂರವಾಣಿ ಸಂಖ್ಯೆ, ಇ-ಮೇಲ್ ವಿಳಾಸ, ಆರ್ಥಿಕ ಸ್ಥಿತಿ, ಅಂಕಪಟ್ಟಿಗಳ ಫೋಟೋ ಪ್ರತಿಯನ್ನುಇಮೇಲ್ ಮೂಲಕ ಕಳುಹಿಸಲು ಕೋರಿದೆ. 28 ವರ್ಷದೊಳಗಿನ ಮಹಿಳಾ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅಕಾಡೆಮಿಯು ಅರ್ಹತಾ ಪರೀಕ್ಷೆ ನಡೆಸಲಿದೆ. ಈ ಪರೀಕ್ಷೆಯ ದಿನಾಂಕ, ಸ್ಥಳ ಮತ್ತು ಸಮಯವನ್ನು ಸಂದರ್ಶನದ ವೇಳೆ ತಿಳಿಸಲಾಗುವುದು ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಶಸ್ತಿಗೆ ಪ್ರಸ್ತಾವನೆಗಳ ಆಹ್ವಾನ

**ಬೆಂಗಳೂರು:** ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರ ಇಲಾಖಾ ವತಿಯಿಂದ ಅಕ್ಟೋಬರ್ 01, 2024 ರಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ರಾಜ್ಯ ಮಟ್ಟದಲ್ಲಿ ಆಚರಿಸುವ ಸಂದರ್ಭದಲ್ಲಿ ಶಿಕ್ಷಣ ಕ್ಷೇತ್ರ, ಸಾಹಿತ್ಯ ಕ್ಷೇತ್ರ, ಕಲೆ, ಕಾನೂನು, ಪ್ರತಿಭೆ/ ಕ್ರೀಡೆ ಮತ್ತು ಹಿರಿಯ ನಾಗರಿಕರ ಕ್ಷೇತ್ರದ ವಿವಿಧ ಕ್ಷೇತ್ರದಲಿ ಸಮಾಜ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ 6 ವೈಯಕ್ತಿಕ ಹಾಗೂ ಹಿರಿಯ ನಾಗರಿಕರ ಕ್ಷೇತ್ರಗಳಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 01 ಸಂಸ್ಥೆಗೆ ಪ್ರಶಸ್ತಿ ಸೇರಿ ಒಟ್ಟು 07 ರಾಜ್ಯ ಪ್ರಸ್ತಿಗಳನ್ನು ನೀಡಲು ಅರ್ಹರಿರುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ನಿಗದಿತ ನಮೂನೆಯಲ್ಲಿ ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಆಗಸ್ಟ್ 31 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಪರಿಶೀಲಿಸಿ ಮತ್ತು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾಷೆಗಳ ಅಧ್ಯಯನಕ್ಕೆ ಆಹ್ವಾನ

**ಬೆಂಗಳೂರು:** ಬೆಂಗಳೂರು ನಗರ ವಿಶ್ವವಿದ್ಯಾಲಯದ ಜಾಗತಿಕ ಭಾಷೆಗಳ ಅಧ್ಯಯನ ಕೇಂದ್ರದಿಂದ ಫ್ರೆಂಚ್, ಜರ್ಮನ್, ಸ್ಪ್ಯಾನಿಷ, ಜಪಾನೀಸ್, ಕೊರಿಯನ್, ಚೈನೀನ್, ಇಟಾಲಿಯನ್, ಪೋರ್ಚುಗೀಸ್ ಭಾಷಾ ತರಗತಿಗಳು ಆರಂಭವಾಗುತ್ತಿದ್ದು, ದ್ವಿತೀಯ ಪಿಯುಸಿ ಅಥವಾ ಸಮಾನಂತರ ಶಿಕ್ಷಣದಲ್ಲಿ ಪಾಸಾಗಿರುವವರು ಅರ್ಜಿ ಸಲ್ಲಿಸಬಹುದು. ಉನ್ನತ ಶಿಕ್ಷಣ ಇಲಾಖೆಯ ಸಮಗ್ರ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ನಿರ್ವಹಣಾ ವ್ಯವಸ್ಥೆ (ಯುಯುಸಿಎಂಎಸ್) ಅಡಿ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿ ಪ್ರವೇಶ ಪಡೆಯಬಹುದು. ಪ್ರತಿಯೊಂದು ಭಾ?ಾ ಕೋರ್ಸಿಗೆ 1 ವರ್ಷದ ಸರ್ಟಿಫಿಕೇಟ್ ಕೋರ್ಸು, 1 ವರ್ಷದ ಯುಜಿ ಡಿಪ್ಲೊಮಾ ಕೋರ್ಸ್ ಹಾಗೂ 1 ವರ್ಷದ ಪಿಜಿ ಡಿಪ್ಲೊಮಾ ಕೋರ್ಸ್ ವ್ಯಾಸಂಗದ ಅವಧಿಯಲ್ಲಿ ಸರ್ಟಿಫಿಕೇಟ್ ನೀಡಲಾಗುತ್ತದೆ.ಆಸಕ್ತರು ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080-29572019 / 9353251761ಗೆ ಕರೆ ಮಾಡಬಹುದು.

## ರಾಜಗೋಪುರಕ್ಕೆ ಹಳದಿ ಬಣ್ಣ ತರವಲ್ಲ: ಡಾ.ಜ್ಯೋತಿ ಅಗ್ರಹಾರ್

**ಬೇಲೂರು:** ಶ್ರೀಚನ್ನಕೇಶವಸ್ವಾಮಿ ದೇಗುಲದ ರಾಜಗೋಪುರಕ್ಕೆ ಗೋಪುರದ ಕೆಳಗಿನ ಶಿಲೆಗಳ ಬಣ್ಣಕ್ಕೆ ಹೊಂದಿಕೊಂಡಂತೆ ಇರುವ ಬಣ್ಣ ಬಳಸುವಂತೆ ಯುನೆಸ್ಕೋ ಉಪ ನಿರ್ದೇಶಕಿ ಡಾ.ಜ್ಯೋತಿ ಅಗ್ರಹಾರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.ದೇಗುಲಕ್ಕೆ ಭೇಟಿ ನೀಡಿ ಬಣ್ಣ ಬಳಿಯಲು ಅಳವಡಿಸಿದ್ದ ಪೈಪುಗಳ ವೀಕ್ಷಿಸಿ, ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡ ಅವರು, ಇಡಿ ದೇಗುಲ ಶಿಲೆಯಿಂದ ಕೂಡಿದೆ.



ರಾಜಗೋಪುರ ನಿರ್ಮಾಣ ಯಾವುದರಿಂದ ನಿರ್ಮಿಸಿದ್ದರೂ ಇದೀಗ ಬಳಿಯುತ್ತಿರುವ ಬಣ್ಣ ಹಳದಿ ಸರಿಯಲ್ಲ, ಅದರ ಬದಲು ಗೋಪುರದ ಕೆಳಗಿನ ಶಿಲೆಯ ಬಣ್ಣದಂತೆ ಕಾಣುವ ಬಣ್ಣ ಬಳಿಸುವಂತೆ ಪುರಾತತ್ವ ಇಲಾಖೆ ಅಧಿಕಾರಿಗಳಿಗೆ ಸಲಹೆ ನೀಡಿದರು.

# ನವರಾತ್ರಿ ಮಂಟಪ ಮರು ನಿರ್ಮಾಣ ಶೀಘ್ರ: ಗೌತಮ್

**ಬೇಲೂರು:** ಶ್ರೀಚನ್ನಕೇಶವಸ್ವಾಮಿ ದೇವಾಲಯದ ಬಲಭಾಗದಲ್ಲಿರುವ ಶಿಥಿಲಗೊಂಡಿರುವ ನವರಾತ್ರಿ ಮಂಟಪವನ್ನು ಮಳೆ ಕಡಿಮೆಯಾದ ಕೂಡಲೆ ಮರು ನಿರ್ಮಾಣ ಮಾಡಲಾಗುವುದು ಎಂದು ಕೇಂದ್ರ ಪುರಾತತ್ವ ಇಲಾಖೆ ಕನ್ಸರ್‌ವೇಟರ್ ಅಸಿಸ್ಟಂಟ್ ಗೌತಮ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ನವರಾತ್ರಿ ಮಂಟಪ ಶಿಥಿಲಗೊಂಡಿರುವುದು ನಿಜ, ಕೆಲವೊಂದು ತಾಂತ್ರಿಕ ಸಮಸ್ಯೆಯಿಂದ ತಡವಾಗಿತ್ತು, ಇದೀಗ ಮರು ನಿರ್ಮಾಣಕ್ಕೆ ಯೋಜನೆ ಸಿದ್ದಪಡಿಸಲಾಗುತ್ತಿದೆ. ಹಿರಿಯ ಅಧಿಕಾರಿಗಳು ಸ್ಥಳ ಭೇಟಿ ಮಾಡಿ ಪರಿಶೀಲಿಸಲಿದ್ದಾರೆ. ಹಾಲಿ ಇರುವಂತೆ ಮರು ಜೋಡಣೆ ಮಾಡಬೇಕಿದೆ ಎಂದು ಹೇಳಿದರು.

ಈ ನವರಾತ್ರಿ ಮಂಟಪ ಯಾರಿಗೆ ಸೇರಿದ್ದೆಂಬ ಬಗ್ಗೆ ಈವರಗೆ ಜಿಜ್ಞಾಸೆಯಿತ್ತು. ಇದೀಗ ಅದು ಬಗೆಹರಿದಿದ್ದು ಪುರಾತತ್ವ ಇಲಾಖೆಗೆ ಸೇರಿದ್ದೆಂಬುದು ಖಾತ್ರಿಯಾಗಿದೆ. ಅವಘಡಕ್ಕೆ ಮುನ್ನ ಪೂರ್ಣ ಪ್ರಮಾಣದಲ್ಲಿ ಶಿಥಿಲಗೊಂಡಿರುವ ನವರಾತ್ರಿ ಮಂಟಪದ ಮರು ನಿರ್ಮಾಣಕಾರ್ಯ ಶೀಘ್ರ ಆರಂಭಗೊಳ್ಳಲಿ ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.






ಕ್ವಿಟ್ ಇಂಡಿಯಾ ಚಳುವಳಿ ವರ್ಷಾಚರಣೆ ಅಂಗವಾಗಿ ಹುಳಿಯಾರಿನ ಸ್ವಾತಂತ್ರ ಹೋರಾಟಗಾರರಾದ ವೆಂಕಟಾಚಲಪತಿ ಶೆಟ್ಟಿ ಅವರನ್ನು ತಾಲ್ಲೂಕು ಆಡಳಿತದ ವತಿಯಿಂದ ಉಪತಹಸೀಲ್ದಾರ್ ರೇಖಾ, ಆರ್‌ಐ ಶ್ರೀನಿವಾಸ್, ವಿಎ ಲಕ್ಷ್ಮೀಪತಿ ಶ್ರೀಯುತರ ನಿವಾಸದಲ್ಲಿ ಶನಿವಾರ ಸನ್ಮಾನಿಸಿದರು.

# ಯಳನಾಡುವಿನಲ್ಲಿ ಗೋದಾಮು ಕಟ್ಟಡ ಉದ್ಘಾಟನೆ

**ಹುಳಿಯಾರು:** ಹುಳಿಯಾರು ಹೋಬಳಿಯ ಯಳನಾಡು ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಿಂದ ನೂತನವಾಗಿ ನಿರ್ಮಿಸಿರುವ ಆಡಳಿತ ಮಂಡಳಿ ಕಛೇರಿ ಹಾಗೂ ಗೋದಾಮು ಕಟ್ಟಡದ ಉದ್ಘಾಟನಾ ಕಾರ್ಯಕ್ರಮವನ್ನು ಆ.11 ರ ಭಾನುವಾರ 12 ಗಂಟೆಗೆ ಹಮ್ಮಿಕೊಳ್ಳಲಾಗಿದೆ.ರಾಜ್ಯ ಸಹಕಾರ ಸಚಿವರಾದ ಕೆ.ಎನ್. ರಾಜಣ್ಣ ಅವರು ಗೋದಾಮು ಕಟ್ಟಡ ಉದ್ಘಾಟಿಸುವರು. ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಖಾತೆ ಸಚಿವರಾದ ವಿ.ಸೋಮಣ್ಣ ಅವರು ಆಡಳಿತ ಕಛೇರಿ ಉದ್ಘಾಟಿಸುವರು. ಶಾಸಕರಾದ ಸಿ.ಬಿ.ಸುರೇಶ್‌ಬಾಬು ಸಭಾಂಗಣ ಉದ್ಘಾಟಿಸುವರು. ವಿಧಾನ ಪರಿಷತ್ ಸದ್ಯರಗಳಾದ ಆರ್.ರಾಜೇಂದ್ರ ಹಾಗೂ ಡಿ.ಟಿ.ಶ್ರೀನಿವಾಸ್ ಕ್ಯಾಷ್ ಕೌಂಟರ್ ಉದ್ಘಾಟಿಸಲಿದ್ದಾರೆ. ಸಂಘದ ಅಧ್ಯಕ್ಷರಾದ ಎಸ್.ರಾಮಲಿಂಗಯ್ಯ ಪಟೇಲರು ಅಧ್ಯಕ್ಷತೆ ವಹಿಸಲಿದ್ದಾರೆ. ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ, ಮಾಜಿ ಶಾಸಕ ಕೆ.ಎಸ್.ಕಿರಣ್‌ಕುಮಾರ್, ಡಿಸಿಸಿ ಬ್ಯಾಂಕ್ ನಿರ್ದೇಶಕ ಸಿಂಗದಹಳ್ಳಿರಾಜಕುಮಾರ್, ಗ್ರಾಪಂ ಅಧ್ಯಕ್ಷೆ ನಂದಿನಿ, ಉಪಾಧ್ಯಕ್ಷ ವೈ.ಎಸ್.ಶಶಿಧರ್, ಸಹಕಾರ ಸಂಘಗಳ ಉಪನಿಬಂಧಕರಾದ ಎಚ್.ಮೂರ್ತಿ, ಡಿಸಿಸಿ ಬ್ಯಾಂಕ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಂಗಮಪ್ಪ, ನಬಾರ್ಡ್ ಜಿಲ್ಲಾ ಅಭಿವೃದ್ಧಿ ಅಧಿಕಾರಿ ಕೀರ್ತಿಪ್ರಭ ಮತ್ತಿರರು ಆಗಮಿಸಲಿದ್ದಾರೆ.

# ವಿವಿಧ ಯೋಜನೆಗಳ ಸ್ಪಷ್ಟೀಕರಣ

**ಬೆಂಗಳೂರು:** ಕರ್ನಾಟಕ ಸರ್ಕಾರವು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಉದ್ಯೋಗ (ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996ರ ಕಲಂ 18(1) ಹಾಗೂ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಉದ್ಯೋಗ (ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996 ಹಾಗೂ ಕರ್ನಾಟಕ ನಿಯಮಗಳು 2006ರ ಅಡಿಯಲ್ಲಿ ದಿನಾಂಕ:18-01-2007ರಂದು ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲು ಮತ್ತು ಒದಗಿಸಲು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯನ್ನು ರಚಿಸಲಾಗಿದ್ದು, ಮಂಡಳಿಯು 19 ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ರೂಪಿಸಿದ್ದು, ಪ್ರಸ್ತುತ ಪಿಂಚಣಿ. ಕುಟುಂಬ ಪಿಂಚಣಿ. ದುರ್ಬಲತೆ ಪಿಂಚಣಿ, ಟೂಲ್‌ಕಿಟ್. ಹೆರಿಗೆ, ತಾಯಿ ಮಗು ಸಹಾಯಹಸ್ತ, ಅಂತ್ಯಕ್ರಿಯೆ / ಅನುಗ್ರಹರಾಶಿ, ಅಪಘಾತ ಮರಣ ಪರಿಹಾರ, ಶೈಕ್ಷಣಿಕ ಧನಸಹಾಯ, ವೈದ್ಯಕೀಯ / ಪ್ರಮುಖ ವೈದ್ಯಕೀಯ ವೆಚ್ಚಮರುಪಾವತಿ ಮತ್ತು ಮದುವೆ ಧನಹಾಯ ಸೌಲಭ್ಯಗಳನ್ನು ನಿಯಮಾನುಸಾರ ಒದಗಿಸುತ್ತಿದೆ. ಮಂಡಳಿಯು ಪ್ರಾರಂಭವಾದ ದಿನದಿಂದ 38.52 ಲಕ್ಷ ಕಟ್ಟಡ ಕಾರ್ಮಿಕರು ಮಂಡಳಿಯಲ್ಲಿ ಫಲಾನುಭವಿಗಳಾಗಿ ನೋಂದಾಯಿತರಾಗಿದ್ದು, ವಿವಿಧ ಸೌಲಭ್ಯಗಳ ಜೊತೆಗೆ ನೊಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳಿಗೆ ವಿದ್ಯಾರ್ಥಿವೇತನ (ಶೈಕ್ಷಣಿಕ ಧನಹಾಯ) ನೀಡುತ್ತಿರುವುದು ಗಮನಾರ್ಹವಾಗಿರುತ್ತದೆ. ಶೈಕ್ಷಣಿಕ ಧನಸಹಾಯವು ಮಂಡಳಿಯ ಅತಿಮುಖ್ಯ ಸೌಲಭ್ಯಗಳಲ್ಲಿ ಒಂದಾಗಿರುತ್ತದೆ.2007ನೇ ಸಾಲಿನಿಂದ ಇಲ್ಲಿಯವರೆಗೆ ರೂ. 6802.00 ಕೋಟಿಗಳನ್ನು ನೋಂದಾಯಿತ ಕಟ್ಟಡ ಕಾರ್ಮಿಕರ ಮತ್ತು ಅವರ ಅವಲಂಬಿತರಿಗೆ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸಲು ವಿನಿಯೋಗಿಸಲಾಗಿರುತ್ತದೆ. 2022-23ನೇ ಸಾಲಿನಲ್ಲಿ ವಿದ್ಯಾರ್ಥಿ ವೇತನಕ್ಕೆ ಅರ್ಜಿಗಳನ್ನು ಅಹ್ವಾನಿಸಿದ್ದು, ಒಟ್ಟು 11.13 ಲಕ್ಷ ಅರ್ಜಿಗಳು ಸ್ವೀಕೃತವಾಗಿದ್ದು, ಅದರಲ್ಲಿ ಅರ್ಹ 9.61 ಲಕ್ಷ ಅರ್ಜಿಗಳನ್ನು ಶೈಕ್ಷಣಿಕ ಧನಸಹಾಯಕ್ಕಾಗಿ ಸ್ವೀಕರಿಸಲಾಗಿರುತ್ತದೆ. 2022-23ನೇ ಸಾಲಿನಲ್ಲಿ ಒಟ್ಟು ರೂ.249.00 ಕೋಟಿಗಳ ಶೈಕ್ಷಣಿಕ ಸಹಾಯಧನವನ್ನು ಅರ್ಹ ಫಲಾನುಭವಿಗಳ ಮಕ್ಕಳಿಗೆ ನೀಡಲಾಗಿದ್ದು, 2022-23ನೇ ಸಾಲಿನಲ್ಲಿ ರೂ.400.00 ಕೋಟಿ ಹಣವನ್ನು ಶೈಕ್ಷಣಿಕ ಧನಸಹಾಯಕ್ಕೆ ಮೀಸಲಿಡಲಾಗಿರುತ್ತದೆ. ಪ್ರತಿಯೊಂದು ಯೋಜನೆಗಳಿಗೂ ಸಮಾನವಾಗಿ ಸಹಾಯಧನವನ್ನು ಹಂಚಿಕೆ ಮಾಡುವ ಉದ್ದೇಶದಿಂದ ಶೈಕ್ಷಣಿಕ ಧನಸಹಾಯವನ್ನು ಪರಿಷ್ಕರಿಸಲಾಗಿರುತ್ತದೆ. ಮಂಡಳಿಯು ನೋಂದಾಯಿತ ಕಟ್ಟಡ ಕಾರ್ಮಿಕರ ಹಾಗೂ ಅವರ ಅವಲಂಬಿತರ ಆರೋಗ್ಯ ತಪಾಸಣೆ ಉದ್ದೇಶದಿಂದ ಪ್ರಿವೆಂಟಿವ್ ಹೆಲ್ತ್ ಕೇರ್ ಟೆಸ್ಟ್‌ಗಳನ್ನು ಕೈಗೊಳ್ಳುತ್ತಿದ್ದು, ಈ ಸಾಲಿನಲ್ಲಿ 11.39 ಲಕ್ಷ ಫಲಾನುಭವಿಗಳು ಇದರ ಉಪಯೋಗವನ್ನು ಪಡೆದಿರುತ್ತಾರೆ. ಮಂಡಳಿಯು ಹೊಸ ತಂತ್ರಾಂಶವನ್ನು ರೂಪಿಸಿದ್ದು, ನೋಂದಣಿ / ನವೀಕರಣ ಹಾಗೂ ಫಲಾನುಭವಿಗಳ ಕ್ಲೇಮ್ ಅರ್ಜಿಗಳನ್ನು ನಿಗದಿತ ಸಮಯದಲ್ಲಿ ವಿಲೇವಾರಿ ಮಾಡಲು ಎಲ್ಲಾ ಯೋಜನೆಗಳನ್ನು ಸಕಾಲ ಯೋಜನೆಯ ನಿಗದಿತ ಕಾಲಮಿತಿಗೆ ಒಳಪಡಿಸಲಾಗಿರುತ್ತದೆ. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ನೋಂದಾಯಿತ ಅರ್ಹ ಫಲಾನುಭವಿಗಳಿಗೆ ಹಾಗೂ ಅವಲಂಬಿತರಿಗೆ ವಿವಿಧ ಯೋಜನೆಗಳನ್ನು ಮಂಡಳಿ ಮತ್ತು ಸರ್ಕಾರದ ಅನುಮತಿಯೊಂದಿಗೆ ಕಾರ್ಯರೂಪಕ್ಕೆ ತರುತ್ತಿದೆ ಎಂದು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾನ ಕಾರ್ಮಿಕರ ಮಂಡಳಿಯ ಕರ್ಯದರ್ಶಿಗಳು ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಭಾರತಿ ಡಿ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿದ್ದೆಗೆಟ್ಟು ಹಗಲು ರಾತ್ರಿ ಕೆಲಸ ಮಾಡುವ ಸೆಕ್ಯೂರಿಟಿ ಗಾರ್ಡ್‌ಗಳ ಶೋಷಣೆ ತಪ್ಪಲಿ: ಡಾ.ಎಚ್.ಕೆ.ಎಸ್. ಸ್ವಾಮಿ

**ಬೆಂಗಳೂರು:** ಹಗಲು ರಾತ್ರಿ ನಿದ್ದೆಗೆಟ್ಟು, ನಮ್ಮ ಆಸ್ತಿ, ನಮ್ಮ ಕಾಲೇಜು, ನಮ್ಮ ವಸ್ತುಗಳನ್ನ, ನಮ್ಮ ಹಾಸ್ಟೆಲ್‌ಗಳನ್ನ, ನಮ್ಮ ಹೆಣ್ಣು ಮಕ್ಕಳನ್ನ, ನಮ್ಮ ವಿದ್ಯಾರ್ಥಿಗಳನ್ನ, ನಮ್ಮ ಹೋಟೆಲ್‌ಗಳನ್ನ, ನಮ್ಮ ಆಸ್ಪತ್ರೆಗಳನ್ನ ಕಾದು, ಯಾವುದೇ ಕಳ್ಳತನವಾಗದಂತೆ, ಎಚ್ಚರಿಕೆವಹಿಸಿ, ನಿದ್ದೆಗೆಟ್ಟು, ಕಷ್ಟಪಡುವ ಸೆಕ್ಯೂರಿಟಿ ಗಾರ್ಡ್‌ಗಳ ಬಗ್ಗೆ ಶೋಷಣೆಯಾಗದಂತೆ, ಮಾನವೀಯತೆಯಿಂದ ಅವರನ್ನ ನಡೆಸಿಕೊಳ್ಳಬೇಕೆಂದು ಎಂದು ಕರ್ನಾಟಕ ಜ್ಞಾನವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ. ಎಚ್. ಕೆ. ಎಸ್. ಸ್ವಾಮಿ ವಿನಂತಿಸಿಕೊಂಡಿದ್ದಾರೆ.

ಕನಿಷ್ಠ ವೇತನವನ್ನು ಸಹ ಪಡೆಯದೆ ಕೆಲವೊಮ್ಮೆ ಕಡಿಮೆ ಸಂಬಳ ಪಡೆದು, ದಿನದ 12 ಗಂಟೆ ಕಣ್ಣಿನ ರೆಪ್ಪೆ ಮುಚ್ಚದಂತೆ, ಸುತ್ತಮುತ್ತಲು ನಡೆಯುವ ಆಗುಹೋಗುಗಳನ್ನ ಪರಿಶೀಲಿಸುತ್ತಾ, ಭದ್ರತೆಯನ್ನು ಒದಗಿಸುತ್ತಾ, ತಮ್ಮ ಜೀವವನ್ನೇ ಹೊತ್ತೆಗಿಟ್ಟು, ಕಾಡಿನಲ್ಲಿ, ಎಸ್ಟೇಟ್‌ಗಳಲ್ಲಿ, ನಿರ್ಜನ ಪ್ರದೇಶಗಳಲ್ಲಿ, ಕ್ಯಾಂಪಸ್‌ಗಳಲ್ಲಿ ಒಂಟಿಯಾಗಿ ರಾತ್ರಿ ಹಗಲು ಸೆಕ್ಯೂರಿಟಿ ಕೆಲಸ ಮಾಡುವಂತಹ ಗಾಡ್‌ಗಳಿಗೆ ಕನಿಷ್ಠ ವೇತನ, ಕನಿಷ್ಠ ಮೂಲಭೂತ ಸೌಲಭ್ಯಗಳನ್ನ, ಕನಿಷ್ಠ ಸೌಜನ್ಯ, ಕನಿಷ್ಠ ಮಾನವೀಯತೆಗಳನ್ನ ತೋರಿಸಿ, ಅವರನ್ನು ನ್ಯಾಯಬದ್ಧವಾಗಿ ನಡೆಸಿಕೊಂಡು, ಆ ಹುದ್ದೆಗೆ ಗೌರವ ತಂದುಕೊಡಬೇಕು ಎಂದು ವಿನಂತಿಸಿಕೊಂಡಿದ್ದಾರೆ.

ಈಗಲೂ ಸಹ ಬಹಳಷ್ಟು ಸೆಕ್ಯೂರಿಟಿ ಗಾರ್ಡಾಗಾಗಿ




ಕೆಲಸ ಮಾಡುತ್ತಿರುವವರು ನಿವೃತ್ತರಾದಂತ ನೌಕರರೇ ಹೆಚ್ಚಾಗಿರುತ್ತಾರೆ, ಆ ವಯಸ್ಸಿನಲ್ಲೂ ಸಹ ಅವರು ರಾತ್ರಿ ಹಗಲು ಎನ್ನದೆ ಕುಳಿತಲ್ಲೇ ಕುಳಿತು, ನಿಂತಲ್ಲೇ ನಿಂತು ಅಥವಾ ಸುತ್ತಾಡಿಕೊಂಡು ಸ್ಥಳ ವೀಕ್ಷಣೆ ಮಾಡುತ್ತಾ, ಬಂದವರನ್ನು ವಿಚಾರಿಸುತ್ತ, ಪಾರ್ಕಿಂಗ್ ವ್ಯವಸ್ಥೆಗಳನ್ನು ಸರಿಪಡಿಸುತ್ತಾ, ಹೋಟೆಲ್ ಮುಂದೆ, ಬಾರ್ ಅಂಡ್ ರೆಸ್ಟೋರೆಂಟ್ ಮುಂದೆ, ಹಾಸ್ಟೆಲ್‌ಗಳ ಮುಂದೆ, ಆಸ್ಪತ್ರೆಗಳ ಮುಂದೆ, ಬಸ್ಟ್ಯಾಂಡ್‌ಗಳ ಮುಂದೆ, ಎಟಿಎಂಗಳ ಮುಂದೆ, ಎಲ್ಲೆಂದರಲ್ಲಿ ಸೆಕ್ಯೂರಿಟಿ ಗಾರ್ಡ್‌ಗಳನ್ನು ನಾವು ನೋಡುತ್ತಿದ್ದೇವೆ. ಅವರ ಸಂಬಳ, ಅವರ ವೇತನ, ಅವರ ಭದ್ರತೆ ಹಣ, ಆರೋಗ್ಯ ವಿಮೆ, ಜೀವ ವಿಮೆ, ಜೀವ ಹಾನಿಯಾದರೇ ಅವರಿಗೆ ಪರಿಹಾರ, ಅವರ ಕುಟುಂಬದ ರಕ್ಷಣೆ, ಯಾವುದರ ಬಗ್ಗೆನೂ ಸಹ ಸಾರ್ವಜನಿಕರು ಹೆಚ್ಚು ಗಮನ ಹರಿಸದೇ, ತಮ್ಮ ಪಾಡಿಗೆ ತಾವು, ಅವರ ಪಾಡಿಗೆ ಅವರನ್ನು ಬಿಟ್ಟು ಜೀವನ ನಡೆಸುತ್ತಿರುವುದು ಸರಿಯಾದದ್ದಲ್ಲ ಎಂದಿದ್ದಾರೆ.

ಸೆಕ್ಯೂರಿಟಿ ಗಾರ್ಡನ್ ನೇಮಿಸಿಕೊಂಡಂತಹ ಕೆಲವು ಸಂಸ್ಥೆಗಳು ಹೆಚ್ಚು ಹಣವನ್ನು ಪಡೆದು, ಕೆಲಸ ಮಾಡುವ ವ್ಯಕ್ತಿಗಳಿಗೆ ಕಡಿಮೆ ಹಣ ನೀಡಿ, ಶೋಷಣೆಯ ಗೆರೆಯನ್ನ ಎಳೆಯುತ್ತಲೇ ಬಂದಿದ್ದಾರೆ. ಅವರು ಹಗಲು ರಾತ್ರಿ ಎನ್ನದೆ ಕೆಲಸ ಮಾಡಿದರು ಸಹ ವಿಶ್ರಾಂತಿ ಪಡೆಯಲು ಸೂಕ್ತವಾದ ಸಮಯವನ್ನು ಸಹ ನೀಡದೇ, ಕೆಲಸ ಮಾಡು, ಇಲ್ಲ ಬಿಟ್ಟು ಹೋಗು ಎಂಬ ಮಾತುಗಳನ್ನಾಡಿ, ಅವರನ್ನು ನೋಯಿಸಿ, ಅವರಿಗೆ ಕೊಡುತ್ತಿರುವ ಸಂಬಳದಲ್ಲಿ ತಮ್ಮ ಸಂಸ್ಥೆಗಳನ್ನ ಸಮೃದ್ಧವಾಗಿ ಬಳಸಿಕೊಳ್ಳುವುದು ನ್ಯಾಯವಾದುದಲ್ಲ. ಸೆಕ್ಯೂರಿಟಿ ಸಂಸ್ಥೆಗಳು 15 ಸಾವಿರ ಸಂಬಳ ಪಡೆದು, ಗಾರ್ಡ್‌ಗಳಿಗೆ 8000, 8.500 ಅಥವ 9000 ನೀಡಿ, ಅವರಿಗೆ ಯಾವುದೇ ಸೌಲತ್ತುಗಳನ್ನು ನೀಡದೇ, ಪಿಎಫ್ ನೀಡದೇ, ಕೆಲವೊಮ್ಮೆ ಶೋಷಣೆ ಮಾಡುತ್ತಾರೆ ಎಂಬುದನ್ನ ಅವರ ಬಾಯಿಂದಲೇ ಕೇಳಿ ತಿಳಿದುಕೊಂಡಾಗ ಮನಸ್ಸಿಗೆ ನೋವಾಗುತ್ತದೆ. ಎರಡು ದಿವಸ, ಮೂರು ದಿವಸ ನಿದ್ದೆಗೆಟ್ಟು, ಕೆಲಸ ಮಾಡಿದಾಗ ಒಂದು ದಿವಸ ವಿಶ್ರಾಂತಿ ಕೇಳಿದರು ಸಹ ನೀಡದೆ, ಕೇವಲ ಬಿಟ್ಟು ಹೋಗು, ಕೆಲಸ ಮಾಡಲು ಸಾಧ್ಯವಾದರೆ ಮಾಡು ಎಂಬ ಮಾತನ್ನಾಡುತ್ತಾರೆ ಎಂದು ನೊಂದು ನುಡಿಯುತ್ತಿದ್ದಾರೆ ಎಂದರು.

# ಅರ್ಥಪೂರ್ಣ ಸ್ವಾತಂತ್ರ್ಯ ದಿನಾಚರಣೆಗೆ ನಿರ್ಧಾರ



**ಯಳಂದೂರು:** ಈ ಬಾರಿಯ ಆ.15ರಂದು ಸ್ವಾತಂತ್ರ್ಯ ದಿನವನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಲು ಇಲಾಖೆ ಅಧಿಕಾರಿಗಳು ತಾಲೂಕು ಆಡಳಿತ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ತಹಸೀಲ್ದಾರ್ ಜಯಪ್ರಕಾಶ್ ಸಲಹೆ ನೀಡಿದರು.

ಅವರು ಪಟ್ಟಣದ ತಾಲೂಕು ತಹಸೀಲ್ದಾರ್ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಸ್ವಾತಂತ್ರ್ಯ ದಿನಾಚರಣೆ ಹಾಗೂ ಗಣತಂತ್ರ ದಿನಾಚರಣೆಗಳು ರಾಷ್ಟ್ರೀಯ ಹಬ್ಬಗಳ ಸಾಲಿನಲ್ಲಿ ಮಹತ್ತರ ಪಡೆದುಕೊಂಡಿರುವ ಭಾರತೀಯರ ಪ್ರಮುಖ ಉತ್ಸವಗಳಾಗಿವೆ. ಇದನ್ನು ಎಲ್ಲರೂ ಸೇರಿ ಆಚರಿಸುವ ಪರಿಪಾಠ ಬೆಳೆಸಿಕೊಳ್ಳಬೇಕು. ತಾಲೂಕು ಆಡಳಿತದ ವತಿಯಿಂದ ನಡೆಯುವ ಈ ಕಾರ್ಯಕ್ರಮದಲ್ಲಿ ತಪ್ಪದೆ ಎಲ್ಲಾ ಇಲಾಖೆಯ ನೌಕರರು, ಪಿಯುಸಿ, ಪದವಿ ಕಾಲೇಜಿನ ನೌಕರರು, ಉಪನ್ಯಾಸಕರು ಸೇರಿ ಕಡ್ಡಾಯವಾಗಿ ಭಾಗವಹಿಸಬೇಕು, ಇಲ್ಲವಾದಲ್ಲಿ ಅಂತಹರವ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು. ಇಲಾಖೆಗಳು ತಮಗೆ ವಹಿಸಿರುವ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಶಾಲಾ ಮಕ್ಕಳನ್ನು ಸಾಂಸ್ಕೃತಿ ಕಾರ್ಯಕ್ರಮಗಳಿಗೆ ತಯಾರುಗೊಳಿಸುವ ಕೆಲಸ ಶಿಕ್ಷಣ ಇಲಾಖೆ ನಿರ್ವಹಿಸಬೇಕು. ಜತೆಗೆ ಈ ಬಾರಿ ಸಾಕಷ್ಟು ಪ್ರಮಾಣ ಮಳೆಯಿಂದ ರಾಜ್ಯ ಹಾಗೂ ಕೇರಳ ಪ್ರದೇಶದಲ್ಲಿ ಹೆಚ್ಚು ಸಾವು ನೋವುಗಳು ಉಂಟಾಗಿರುವ ಪರಿಣಾಮ ಸರ್ಕಾರವು ಯಾವ ರೀತಿಯ ಆದೇಶ ನೀಡುತ್ತದೆ ಎಂಬುದನ್ನು ಗಮನಿಸಿ ಮುಂದಿನ ಸಿದ್ದತೆ ಮಾಡಿಕೊಂಡಲಾಗುವುದು, ಜತೆಗೆ ಮಳೆಯ ಬಂದರೆ ತಾಲೂಕು ತಹಸೀಲ್ದಾರ್ ಆವರಣ, ಇಲ್ಲವಾದರೆ ಪಿಯುಸಿ ಕಾಲೇಜು ಆವರಣದಲ್ಲಿ ಮಾಡಲು ಸಿದ್ದತೆಯನ್ನು ಮಾಡುಕೊಳ್ಳುಬೇಕು, ಎಲ್ಲಾ ಇಲಾಖೆ ಅಧಿಕಾರಿಗಳು ಸೂಕ್ತ ಜವಾಬ್ದಾರಿಯನ್ನು ಆಯಾ ಇಲಾಖೆಗಳು ಚಾಚುತಪ್ಪದೆ ನಿರ್ವಹಿಸಬೇಕು ಎಂದು ತಿಳಿಸಿದರು. ಪಪಂ ಮುಖ್ಯಾಧಿಕಾರಿ ಮಹೇಶ್ ಕುಮಾರ್, ಬಿಇಒ ಕೆ.ಕಾಂತರಾಜು, ಸಮಾಜ ಸೇವಕ ಪಿ.ವೀರಭದ್ರಪ್ಪ, ಪ.ಪಂ ಸದಸ್ಯರಾದ ಮಹೇಶ್, ಮಾಜಿ. ತಾ.ಪಂ. ಸದಸ್ಯ ವೈ.ಕೆ.ಮೋಳೆ ನಾಗರಾಜು, ಕೃಷಿ ಸಹಾಯಕ ನಿರ್ದೇಶಕ ಅಮೃತೇಶ್ವರ, ಕಸಾಪ ಅಧ್ಯಕ್ಷ ಯರಿಯೂರು ನಾಗೇಂದ್ರ, ಕಂದಹಳ್ಳಿ ನಾರಯಣ್ ಇದ್ದರು.

# ಶ್ರಾವಣ: ದೇವಾಲಯಗಳಲ್ಲಿ ವಿಶೇಷ ಪೂಜೆ



**ವಿಜಯಪುರ:** ಹೋಬಳಿಯಾದ್ಯಾಂತ ಶ್ರಾವಣ ಮಾಸದ ಮೊದಲ ಶನಿವಾರದಂದು ವಿವಿಧದೇಗುಲಗಳಲ್ಲಿ ವಿಶೇಷ ಪೂಜೆ ಹಾಗೂ ಧಾರ್ಮಿಕಕಾರ್ಯಗಳು ನಡೆದವು. ಪಟ್ಟಣದಲ್ಲಿ ವಿಶೇಷವಾಗಿ ಶ್ರೀ ಕ್ಷೇತ್ರ ಹಾರ್ಡಿಪುರದ ಲಕ್ಷ್ಮಿಜವೆಂಕಟೇಶ್ವರಸ್ವಾಮಿ ದೇವಾಲಯ, ಬಲಿಜ ಪೇಟೆ ವೆಂಕಟರಮಣಸ್ವಾಮಿ ದೇವಾಲಯ, ಕೆರೆಕೋಡಿ ಬಳಿವಿರುವ ಶನೈಶ್ಚರ, ಪುರದ ಶನೇಶ್ವರ, ಕಗ್ಗಳಹಳ್ಳಿ ಬಳಿವಿರುವ ಶನೈಶ್ಚರ ಸೇರಿದಂತೆ ಆಂಜನೇಯ ದೇಗುಲಗಳಲ್ಲಿ ಪ್ರಮುಖವಾಗಿ ಪೂಜೆಗಳು ನೆರವೇರಿದವು.

ಬೆಳಗ್ಗಿನಿಂದ ಭಕ್ತರು ದೇಗುಲಗಳಿಗೆ ಬಂದು ಶ್ರದ್ಧಾಭಕ್ತಿಯಿಂದ ಪೂಜೆ ಸಲ್ಲಿಸಿದರು. ಇನ್ನೂ ಸಾವಿರಾರೂ ಭಕ್ತರೂ ಬರುವ ಕಗ್ಗಲಹಳ್ಳಿ ಶನಿಶ್ಚರ ದೇವಾಲಯಕ್ಕೆ ಆಡಳಿತದಿಂದ ವಿಶೇಷ ಬಸ್ ವ್ಯವಸ್ಥೆ ಮಾಡಲಾಗಿತು, ಇಲ್ಲಿ ಹೊಸಕೋಟೆ ಹಾಗೂ ಬೆಂಗಳೂರು ನಗರ ಹಾಗೂ ಗ್ರಾಮಾಂತರ ಜಿಲ್ಲೆಗಳಿಂದ ಲಕ್ಷಾಂತರ ಭಕ್ತರು ಬರುವುದರಿಂದ ಇಲ್ಲಿ ಬಿಗಿ ಪೋಲಿಸ್ ಬಂದ್ ಬಸ್ತ್ ವ್ಯವಸ್ಥೆ ನಡೆಸಲಾಗಿತ್ತು. ಬೆಳಿಗ್ಗೆಯಿಂದಲೇ ಪೂಜೆಗಳು ಆರಂಭವಾದವು. ಭಕ್ತಾಧಿಗಳಿಗೆ ಅನ್ನದಸೋಹ ಕಾರ್ಯಕ್ರಮ ನಡೆಯಿತು. ಕೆರೆಕೋಡಿ ಬಳಿವಿರುವ ಶನೈಶ್ವರಸ್ವಾಮಿ ದೇವಾಲಯ ಹಾಗೂ ಆಂಜನೇಯಸ್ವಾಮಿ ಹಾಗೂ ಪಂಚಮುಖಿ ಗಣಪತಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು.

# ಗ್ರಾಪಂಗೊಂದು ಸಹಕಾರ ಸಂಘ ಸ್ಥಾಪಿಸುವ ಸಂಕಲ್ಪ



**ಹುಳಿಯಾರು:** ಗ್ರಾಮ ಪಂಚಾಯ್ತಿಗೊಂದು ಸಹಕಾರ ಸಂಘ ಸ್ಥಾಪಿಸುವ ಸಂಕಲ್ಪ ಮಾಡಲಾಗಿದೆ ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ತಿಳಿಸಿದರು.

ಹುಳಿಯಾರು ಹೋಬಳಿಯ ಯಳನಡು ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ವತಿಯಿಂದ ಭಾನುವಾರ ಹಮ್ಮಿಕೊಂಡಿದ್ದ ನೂತನ ಆಡಳಿತ ಮಂಡಳಿ ಕಛೇರಿ ಹಾಗೂ ಗೋದಾಮು ಕಟ್ಟಡದ ಉಧ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಕಟ್ಟಡ ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲಿ ಈಗಾಗಲೇ ಕೋರಗೆರೆ, ಬೆಳಗುಲಿ, ತಿಮ್ಲಾಪುರ, ದೊಡ್ಡಬಿದರೆ, ಮುದ್ದೇನಹಳ್ಳಿ ಈ 5 ಗ್ರಾಮ ಪಂಚಾಯ್ತಿಗಳಿಗೆ ಪ್ರಾಥಮಿಕ ಕೃಷಿ ಸಹಕಾರ ಸಂಘ ಮಂಜೂರು ಮಾಡಲಾಗಿದೆ ಎಂದು ತಿಳಿಸಿದರಲ್ಲದೆ ನಿಮ್ಮ ಪಂಚಾಯ್ತಿ ವ್ಯಾಪ್ತಿಯಲ್ಲಿನ ಸಹಕಾರ ಸಂಘಗಳಲ್ಲಿ ಠೇವಣಿ ಇಡುವ, ಒಡವೆ ಸಾಲ, ಬೆಳೆ ಸಾಲ, ಅಡಮಾನ ಸಾಲ ಪಡೆಯುವ ಮೂಲಕ ಸಂಘಗಳನ್ನು ಬೆಳಸಿ ನೀವೂ ಕೂಡ ದುಬಾರಿ ಬಡ್ಡಿಯ ಸುಳಿಯಲ್ಲಿ ಸಿಲುಕುವುದನ್ನು ತಪ್ಪಿಸಿಕೊಳ್ಳಿ ಎಂದರು.

ರೈತರು ತುರ್ತು ಸಂದರ್ಭದಲ್ಲಿ ಹಣ ಬೇಕಾದಾಗ ಖಾಸಗಿಯವರಿಂದ ಹೆಚ್ಚು ಬಡ್ಡಿಗೆ ತರುವ ಪರಿಸ್ಥಿತಿ ಇತ್ತು. ಈ ಹಣಕಾಸಿನ ಶೋಷಣೆ ತಪ್ಪಿಸಲು 2004 ರಲ್ಲಿ ಉಪಮುಖ್ಯಮಂತ್ರಿಯಾಗಿದ್ದ ಸಿದ್ಧರಾಮಯ್ಯ ಶೂನ್ಯ ಬಡ್ಡಿ ದರದಲ್ಲಿ ಸಾಲ ಕೊಡುವ ಯೋಜನೆ ಜಾರಿಗೆ ತಂದರು. ನಾನು ಡಿಸಿಸಿ ಬ್ಯಾಂಕ್ ಅಧ್ಯಕ್ಷನಾಗಿದ್ದಾಗ ಈ ಯೋಜನೆಯನ್ನು ಸದ್ಬಳಕೆ ಮಾಡಿಕೊಂಡು ಜಿಲ್ಲೆಯಲ್ಲಿ 10 ಗುಂಟೆ ಜಮೀನು ಇರುವ ರೈತನಿಗೂ ಕನಿಷ್ಟ 25 ಸಾವಿರ ಸಾಲ ಕೊಟ್ಟೆ. ಇದರಿಂದ ಅನೇಕರು ಕುರಿ, ಹಸು ತಂದು ಬದುಕು ಕಟ್ಟಿಕೊಂಡರು ಎಂದು ತಿಳಿಸಿದರು.

ಡಿಸಿಸಿ ಬ್ಯಾಂಕ್ ನಿರ್ದೇಶಕ ಸಿಂಗದಹಳ್ಳಿ ರಾಜಕುಮಾರ್ ಮಾತನಾಡಿ ರಾಜಣ್ಣ ಅವರು ಸಹಕಾರ ಸಚಿವರಾದ ಮೇಲೆ ಅನೇಕ ರೈತ ಪರ ಕೆಲಸಗಳನ್ನು ಮಾಡಿದ್ದಾರೆ. ಇಡೀ ಜಿಲ್ಲೆಗೆ 25 ಗೋದಾಮು ಮಂಜೂರಾದರೆ ಚಿಕ್ಕನಾಯಕನಹಳ್ಳಿ ತಾಲೂಕಿಗೆ 12 ಕೊಟ್ಟಿದ್ದಾರೆ. ಶೂನ್ಯ ಬಡ್ಡಿ ದರದಲ್ಲಿ ತಾಲೂಕಿನ ರೈತರಿಗೆ ಸಾಲಸೌಲಭ್ಯ ಸಿಗಲು ಕಾರಣರಾಗಿದ್ದಾರೆ ಎಂದು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಡಿ.ಸಿ.ಸಿ ಬ್ಯಾಂಕ್ ನಿರ್ದೇಶಕರಾದ ಸಿಂಗದಹಳ್ಳಿ ರಾಜಕುಮಾರ್, ಡಿ.ಸಿ.ಸಿ ಬ್ಯಾಂಕ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾದ ಜಂಗಮಪ್ಪ, ಸಹಕಾರ ಸಂಘಗಳ ಉಪ ನಿಬಂಧಕರಾದ ಹೆಚ್.ಮೂರ್ತಿ, ಯಳನಡು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾದ ಎಸ್. ರಾಮಲಿಂಗಯ್ಯ ಪಟೇಲ್, ಯಳನಡು ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ನಂದಿನಿ ರಂಗಸ್ವಾಮಿ, ಮಾಜಿ ಅಧ್ಯಕ್ಷ ದಿನೇಶ್, ಹಾಗೂ ಸಂಘದ ಪದಾಧಿಕಾರಿಗಳು, ಗ್ರಾಮ ಪಂಚಾಯಿತಿ ಉಪಾಧ್ಯಕ್ಷರು, ಸದಸ್ಯರುಗಳು, ಸಹಕಾರಿಗಳು, ಮುಖಂಡರುಗಳು ಉಪಸ್ಥಿತರಿದ್ದರು.

# ಕೊಡವ ಉಡುಗೆ ದುರ್ಬಳಕೆ ವಿರುದ್ಧ ಕ್ರಮ



**ಮಡಿಕೇರಿ:** ಕೊಡವ ಸಾಂಪ್ರದಾಯಿಕ ಉಡುಗೆ ತೊಡುಗೆ, ಆಭರಣಗಳು ಸೇರಿದಂತೆ ಕೊಡವ ಸಂಸ್ಕೃತಿಯನ್ನು ಬೇರೆಯವರು ದುರ್ಬಳಕೆ ಮಾಡಿದರೆ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅಖಿಲ ಕೊಡವ ಸಮಾಜದ ಅಧ್ಯಕ್ಷ ಪರದಂಡ ಸುಬ್ರಮಣಿ ಕಾವೇರಪ್ಪ ತಿಳಿಸಿದರು.

ಅಖಿಲ ಕೊಡವ ಸಮಾಜ ನೇತೃತ್ವದಲ್ಲಿ ನಡೆದ ವಿವಿಧ ಕೊಡವ ಸಮಾಜ ಹಾಗೂ ವಿವಿಧ ಕೊಡವ ಸಂಘಟನೆಗಳ ಪ್ರತಿನಿಧಿಗಳ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು. ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸುಬ್ರಮಣಿ ಕಾವೇರಪ್ಪ

ಜಿಲ್ಲೆಯ ವಿವಿಧ ಕೊಡವ ಸಮಾಜಗಳು ಸೇರಿದಂತೆ ವಿವಿಧ ಕೊಡವ ಸಂಘಟನೆಗಳ ಪ್ರಮುಖರು ಭಾಗಿಯಾಗಿ ಈ ಮಹತ್ವದ ನಿರ್ಣಯದೊಂದಿಗೆ ಇತರ ವಿಷಯ ಚರ್ಚಿಸಲಾಯಿತು. ಇತ್ತೀಚಿನ ದಿನಗಳಲ್ಲಿ ಕೊಡವ ಸಾಂಪ್ರದಾಯಿಕ ಉಡುಗೆ ತೊಡುಗೆ ಹಾಗೂ ಸಾಂಪ್ರದಾಯಿಕ ಆಭರಣಗಳು ಸೇರಿದಂತೆ ಕೊಡವ ಸಂಸ್ಕೃತಿಯ ದುರ್ಬಳಕೆಯಾಗುತ್ತಿದ್ದು ಕೊಡವೇತರರು ಕೂಡ ಇದರ ದುರ್ಬಳಕೆ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಯಿತು.

ಇತ್ತೀಚೆಗೆ ಬೆಂಗಳೂರಿನ ರೆಸಾರ್ಟ್‌ವೊಂದರಲ್ಲಿ ನಡೆದ ಮುಸ್ಲಿಂ ಜನಾಂಗದ ವ್ಯಕ್ತಿಯೊಬ್ಬರ ಮದುವೆಯಲ್ಲಿ ಕೊಡವ ಸಾಂಪ್ರದಾಯಿಕ ಉಡುಗೆ ತೊಡುಗೆ ಸೇರಿದಂತೆ ಕೊಡವ ಸಂಸ್ಕೃತಿಯ ದುರ್ಬಳಕೆ ಆಗಿದ್ದನ್ನು ಖಂಡಿಸಲಾಯಿತು.

ಈ ಹಿಂದೆ ಕೂಡ ಹೊರದೇಶದಲ್ಲಿ ನಮ್ಮವರೆ ನಮ್ಮ ಪವಿತ್ರ ಆಭರಣವಾದ ಪತ್ತಾಕ್‌ಗೆ ಅವಮಾನ ಮಾಡಿದ್ದಾರೆ, ಈ ಹಿಂದೆ ಕೂಡ ಹಲವಾರು ಮಂದಿ ಕೊಡವ ಸಂಸ್ಕೃತಿ ಸಾಂಪ್ರದಾಯಿಕ್ಕೆ ಅವಮಾನ ಮಾಡಿದ್ದಾರೆ. ಕೊಡವಾಮೆಯ ಹೆಸರಿನಲ್ಲಿ ಕಂಡ ಕಂಡ ಜಾತಿ ಜನಾಂಗಕ್ಕೆ ನಮ್ಮ ಪವಿತ್ರವಾದ ಪತ್ತಾಕ್ ನೀಡಲಾಗಿದನ್ನು ಸಭೆ ಖಂಡಿಸಲಾಯಿತು.

ಬೇರೆ ಜಾತಿಯನ್ನು ಮದುವೆಯಾಗುವ ಕೊಡವತಿ ಹೆಣ್ಣು ಮಕ್ಕಳು ನಮ್ಮ ಪವಿತ್ರವಾದ ಪತ್ತಾಕ್ ಅನ್ನು ಕೊಂಡೊಯ್ಯುತ್ತಿದ್ದು ಅವರ ಮರುದಿನಕ್ಕೆ ಈ ಪತ್ತಾಕ್ ಯಾವ ಜಾತಿ ಜನಾಂಗದ ಸೊತ್ತು ಎಂದು ಆಯಾಯ ಕುಟುಂಬ ಚಿಂತಿಸಬೇಕಿದೆ. ಈ ನಿಟ್ಟಿನಲ್ಲಿ ಆಯಾಯ ಕೊಡವ ಕುಟುಂಬಗಳು ಗಮನ ಹರಿಸಬೇಕು ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಅಂತಹಾ ಕುಟುಂಬಗಳ ಹೆಸರು ಹಾಳಾಗುತ್ತದೆ ಈ ನಿಟ್ಟಿನಲ್ಲಿ ಕುಟುಂಬ ಕ್ರಮ ಕೈಗೊಳ್ಳದಿದ್ದರೆ ವಿವಿಧ ಕೊಡವ ಸಮಾಜ ಹಾಗೂ ಸಂಘ ಸಂಸ್ಥೆಗಳ ಸಹಕಾರದಲ್ಲಿ ಅಖಿಲ ಕೊಡವ ಸಮಾಜ ಕಾನೂನು ಕ್ರಮಕ್ಕೆ ಮುಂದಾಗಬೇಕಿದೆ ಎಂಬ ಮಹತ್ವದ ನಿರ್ಣಯ ಕೈಗೊಳ್ಳಲಾಯಿತು.

ಹಾಗೇ ಕೊಡವರು ಕೊಡವರಲ್ಲದವರನ್ನು ಮದುವೆಯಾಗುವುದನ್ನು ನಿಲ್ಲಿಸಬೇಕು, ಒಂದು ಸಮಯ ಮದುವೆಯಾದರೆ ಕೊಡವಾಮೆಯನ್ನು ಬಳಕೆ ಮಾಡುವುದನ್ನು ನಿಲ್ಲಿಸಬೇಕು,

ಯಾವುದೇ ಹೆಣ್ಣು ಆಕೆ ಮದುವೆಯಾಗುವ ಸಂಸಾರದ ಸಂಸ್ಕೃತಿಯನ್ನು ಪಾಲನೆ ಮಾಡಬೇಕು ಹೊರತು ಆಕೆ ಬಿಟ್ಟುಹೋದ ಜನಾಂಗದ ಸಂಸ್ಕೃತಿಯನ್ನು ಅಲ್ಲಾ. ಕೊಡವರು ಬೇಡವೆಂದು ಬಿಟ್ಟುಹೋದಮೇಲೆ ಅವರ ಪದ್ದತಿ ಸಂಸ್ಕೃತಿಯನ್ನು ಪಾಲನೆ ಮಾಡಲಿ. ಇಲ್ಲಿಯತನಕ ನಮಗೂ ನೋಡಿ ಸಾಕಾಗಿದೆ ಇನ್ನು ಮುಂದೆ ನೋಡಿಕೊಂಡು ಇರಲು ಸಾಧ್ಯವಿಲ್ಲ,

ಕೊಡವ ಸಾಂಪ್ರದಾಯವನ್ನು ಪಾಲಿಸದ ಜನಾಂಗ ಕೊಡವ ಉಡುಗೆ ತೊಡುಗೆ ಹಾಗೂ ಆಭರಣಗಳು ಮತ್ತು ಸಂಸ್ಕೃತಿಯನ್ನು ದುರ್ಬಳಕೆ ಮಾಡಿದರೆ ಅಂತಹವರ ವಿರುದ್ಧ ಕ್ರಮ ಕೈಗೊಳ್ಳುವುದರ ಜೊತೆಗೆ ಹೊರಗಿನಿಂದ ಬರುವ ಕೊಡವರಲ್ಲದ ರಾಜಕೀಯ ವ್ಯಕ್ತಿಗಳಿಗೆ ಕೊಡವ ಉಡುಪನ್ನು ತೊಡಿಸಿ ನಮ್ಮ ಒಡಿಕತ್ತಿ ಪೀಚೆ ಕತ್ತಿ ಸೇರಿದಂತೆ ನಮ್ಮ ಸಾಂಪ್ರದಾಯಿಕ ಉಡುಗೆ ಅಥವಾ ಆಭರಣಗಳನ್ನು ನೀಡುವುದನ್ನು ಕೂಡ ನಿಲ್ಲಿಸಬೇಕು, ಅದರ ಬದಲು ಕಾವೇರಮ್ಮೆ ಇಗ್ಗುತಪ್ಪನ ಭಾವಚಿತ್ರ ಅಥವಾ ಚಿನ್ನದ, ಬೆಳ್ಳಿಯ ಮೂರ್ತಿ ನಿಮ್ಮ ಶಕ್ತಿಗೆ ಅನುಸಾರವಾಗಿ ನೀಡಿ ಅವರು ಅದನ್ನು ಕೊಂಡೊಯ್ದು ಪೂಜಿಸಲಿ ಎಂಬ ನಿರ್ಣಯವನ್ನು ಸಭೆಯಲ್ಲಿ ಕೈಗೊಳ್ಳಲಾಯಿತು.

ಕೊಡವರು ಪರರಿಗೆ ಆಸ್ತಿ ಮಾರಾಟ ಮಾಡದಂತೆ ಹಾಗೂ ಅನಿವಾರ್ಯವಾದರೆ ಕೊಡವರಿಗೆ ನೀಡುವಂತೆ ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯ ಅಧ್ಯಕ್ಷತೆಯನ್ನು ಅಖಿಲ ಕೊಡವ ಸಮಾಜದ ಅಧ್ಯಕ್ಷ ಪರದಂಡ ಸುಬ್ರಮಣಿ ಕಾವೇರಪ್ಪ ವಹಿಸಿ ಮಾತನಾಡಿದರೆ, ಉಪಾಧ್ಯಕ್ಷ ಅಜ್ಜಿಕುಟ್ಟೀರ ಸುಬ್ರಮಣಿ ಮಾದಯ್ಯ, ಖಜಾಂಚಿ ಮಂಡೇಪಂಡ ಸುಗುಣ ಮುತ್ತಣ, ಕಾರ್ಯದರ್ಶಿ ಕೀತಿಯಂಡ ವಿಜಯ್, ಸಹ ಕಾರ್ಯದರ್ಶಿ ಮೂವೇರ ರೇಖಾ ಪ್ರಕಾಶ್, ಪೊಮ್ಮಕ್ಕಡ ಪರಿಷತ್ ಅಧ್ಯಕ್ಷೆ ಬಾಚರಣಿಯಂಡ ರಾಣು ಅಪ್ಪಣ್ಣ, ಯೂತ್ ವಿಂಗ್ ಅಧ್ಯಕ್ಷ ಚಮ್ಮಟೀರ ಪ್ರವೀಣ್ ಉತ್ತಪ್ಪ ಸೇರಿದಂತೆ ಪೊನ್ನಂಪೇಟೆ ಕೊಡವ ಸಮಾಜದ ಅಧ್ಯಕ್ಷ ಕಾಳಿಮಾಡ ಮೋಟಯ್ಯ ವೇದಿಕೆಯಲ್ಲಿ ಉಪಸ್ಥಿತರಿದ್ದು ಮಾತನಾಡಿದರೆ. ಸಭೆಯಲ್ಲಿ ಹಿರಿಯ ಸಾಹಿತಿ ಬಾಚರಣಿಯಂಡ ಅಪ್ಪಣ್ಣ ಸೇರಿದಂತೆ ವಿವಿಧ ಕೊಡವ ಸಮಾಜಗಳ ಹಾಗೂ ಕೊಡವ ಸಂಘಟನೆಗಳ ಪ್ರಮುಖರು ಉಪಸ್ಥಿತರಿದ್ದರು.

# ಪೋಲೀಸರ ನಿರ್ಲಕ್ಷ್ಯ ಖಂಡಿಸಿ ಎಸಿಗೆ ಮನವಿ



**ಪಾಂಡವಪುರ:** ಪರಿಶಿಷ್ಟ ಜಾತಿಯ ಕುಟುಂಬದ ಮೇಲೆ ಹಲ್ಲೆ ನಡೆದು 15 ದಿನ ಕಳೆದರೂ ಆರೋಪಿಗಳನ್ನು ಬಂಧಿಸುವಲ್ಲಿ ಪೊಲೀಸ್ ಇಲಾಖೆ ನಿರ್ಲಕ್ಷ್ಯತನ ತೋರುತ್ತಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯ ತಾಲ್ಲೂಕು ಸಮಿತಿಯಿಂದ ಉಪವಿಭಾಗಾದಿಕಾರಿಯವರಿಗೆ ಮನವಿ ಸಲ್ಲಿಸಿದರು.

ತಾಲ್ಲೂಕಿನ ಕೆಂಚನಹಳ್ಳಿ ಗ್ರಾಮದಲ್ಲಿ ಸವರ್ಣೀಯ ಜನಾಂಗದ ಒಂದು ಕುಟುಂಬ ಪರಿಶಿಷ್ಟ ಜಾತಿಯವರ ಮೇಲೆ ಜಮೀನು ವಿಚಾರಕ್ಕೆ ಸಂಬಂಧ ಪಟ್ಟಂತೆ ಹಲ್ಲೆಯನ್ನು ಮಾಡಿದ್ದರು. ಈ ಕುರಿತು ಪಟ್ಟಣದ ಪೊಲೀಸ್ ಠಾಣೆಯಲ್ಲಿ 4 ಜನರ ಮೇಲೆ ಜಾತಿನಿಂದನೆ ಕೇಸ್ ದಾಖಲಾಗಿತ್ತು. ಆದರೆ ಘಟನೆ ನಡೆದು 10 ದಿನ ಕಳೆದರೂ ಆರೋಪಿಗಳನ್ನ ಬಂಧಿಸುವಲ್ಲಿ ಪೊಲೀಸ್ ಇಲಾಖೆ ವಿಫಲವಾಗಿದ್ದಾರೆ ಎಂದು ಉಪವಿಭಾಗಧಿಕಾರಿ ಕಚೇರಿಯ ಗ್ರೇಡ್ 2 ತಹಸೀಲ್ದಾರ್ ಅವರಿಗೆ ಮನವಿ ಪತ್ರ ಸಲ್ಲಿಸಿದರು. ಈ ಕುರಿತು ದಲಿತ ಮುಖಂಡ ಬನ್ನಂಗಾಡಿ ಯೋಗೇಶ್ ಮಾತನಾಡಿ, ಘಟನೆ ನಡೆದು ಇಷ್ಟು ದಿನ ಕಳೆದರೂ ಆರೋಪಿಗಳನ್ನು ಬಂಧಿಸದೆ ಇರುವುದು ಪೊಲೀಸ್ ಇಲಾಖೆಯ ವೈಫಲ್ಯ ಇನ್ನು 2 ದಿನದಲ್ಲಿ ಆರೋಪಿಗಳನ್ನು ಬಂಧಿಸದಿದ್ದರೆ ತಾಲ್ಲೂಕು ಕಚೇರಿಯ ಮುಂದೆ ಧರಣಿ ನಡೆಸಲಾಗುವುದು ಎಂದರು. ತಾಲೂಕು ಸಂಚಾಲಕ ಬಳೆ ಅತ್ತಿಗುಪ್ಪೆ ರವಿ ಮಾತನಾಡಿ, ದಲಿತರ ಮೇಲೆ ಹಲ್ಲೆ ನಡೆಸಿರುವುದು ಅಮಾನವೀಯ ತಾಲೂಕಿನಲ್ಲಿ ದಲಿತರ ದೌರ್ಜನ್ಯ ಪ್ರಕರಣಗಳು ಜಾಸ್ತಿ ಆಗುತ್ತಿದ್ದು ಇದಕ್ಕೆ ಅಧಿಕಾರಿಗಳು ಕಡಿವಾಣ ಹಾಕಬೇಕು ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ತಾಲ್ಲೂಕು ಆಡಳಿತದ ವಿರುದ್ಧ ಪ್ರತಿಭಟನೆ ನಡೆಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡ ಬ್ಯಾಡರಹಳ್ಳಿ ಪ್ರಕಾಶ್. ಜಿಲ್ಲಾ ಸಂಘಟನಾ ಸಂಚಾಲಕ ಮಾಣಿಕ್ಯನ ಹಳ್ಳಿ ಮಂಜು, ಸಣಬ ಹನುಮಂತು, ಮುಖಂಡರಾದ ಚಿಕ್ಕಾಡೆ ಮದನ್ ಕುಮಾರ್, ಚಂದ್ರೆ ಅಶ್ವತ, ಸಣಬ ಶಿವರಾಜ್ ಕುಮಾರ್, ಮಾಣಿಕ್ಯನಹಳ್ಳಿ ಕುಮಾರ್, ಗ್ರಾಪಂ ಸದಸ್ಯ ಎಲೆಕೆರೆ ಮಹದೇವು, ಬಸ್ತಿ ಯೋಗೇಶ್, ಮಹೇಶ್ ಕ್ಯಾತನಹಳ್ಳಿ, ಹೊಸಕೋಟೆ ಗುರುಮೂರ್ತಿ. ಇನ್ನು ಇತರರು ಉಪಸ್ಥಿತರಿದ್ದರು.

# ಆರೋಗ್ಯ ತಪಾಸಣಾ ಶಿಬಿರ

**ಪಾಂಡವಪುರ:** ಮೇಲುಕೋಟೆ ಯೋಜನಾಧಿಕಾರಿಗಳ ಕಚೇರಿಯ ನರಹಳ್ಳಿ ಕಾರ್ಯ ಕ್ಷೇತ್ರದಲ್ಲಿನ ಚಿಲುಮೆ ಜ್ಞಾನ ವಿಕಾಸ ಕೇಂದ್ರದಲ್ಲಿ ಸದಸ್ಯರಿಗೆ ಆರೋಗ್ಯ ತಪಾಸಣಾ ಶಿಬಿರ ನಡೆಯಿತು.

ಕಾರ್ಯಕ್ರಮವನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ಮುರುಳೀಧರ್ ಹಾಗೂ ನರಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಬಸವರಾಜ್ ಅವರು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು ಆರೋಗ್ಯವೇ ಭಾಗ್ಯ ಎಂಬ ಘೋಷಣೆಯಂತೆ ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕು, ನಮ್ಮ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಚತೆವಾಗಿ ಕಾಪಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ಮಾತೃಶ್ರೀ ಹೇಮಾವತಿ ಅಮ್ಮನವರ ಆಶಯದಂತೆ ಪ್ರತಿ ಜ್ಞಾನವಿಕಾಸ ಕೇಂದ್ರದಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಮಹಿಳೆಯರಿಗೆ ಆಯೋಜನೆ ಮಾಡಲಾಗುವುದು, ಮಹಿಳೆಯರು ಉತ್ತಮ ಜ್ಞಾನವನ್ನು ಪಡೆಯಲು ಪ್ರತಿ ತಿಂಗಳು ಮಾಸಿಕ ಸಭೆಯನ್ನು ನಡೆಸಲಾಗುವುದು ಎಂದು ನಿರ್ದೇಶಕರು ಮಾಹಿತಿ ಮಾರ್ಗದರ್ಶನ ನೀಡಿದರು, ಆರೋಗ್ಯ ಅಧಿಕಾರಿ ವಿಠಲ್ ಆರೋಗ್ಯದ ಬಗ್ಗೆ ಮಾಹಿತಿ ತಿಳಿಸಿದರು. ಜ್ಞಾನವಿಕಾಸ ಸಮನ್ವಯಧಿಕಾರಿ ಸವಿತಾ, ವಲಯದ ಸೇವಾಪ್ರತಿನಿಧಿಯವರು, ಜ್ಞಾನವಿಕಾಸ ಕೇಂದ್ರದ ಸದಸ್ಯರು, ಹಾಗೂ ಊರಿನ ಮುಖಂಡರು ಭಾಗವಸಿದ್ದರು.



## ಎದೆ ಹಾಲಿನಿಂದ ಮಕ್ಕಳಲ್ಲಿ ಆರೋಗ್ಯ

**ಕೊಳ್ಳೇಗಾಲ:** ತಾಯಂದಿರು ಮಕ್ಕಳಿಗೆ ಎದೆಹಲನ್ನು ಪೂರ್ಣ ಪ್ರಮಾಣದಲ್ಲಿ ಮಾಡಿಸುವುದರಿಂದ ಮಕ್ಕಳು ಉತ್ತಮ ಆರೋಗ್ಯ ಹೊಂದಲು ಸಾಧ್ಯ ಎಂದು ಪ್ರಾಂಶುಪಾಲ ಹೆಚ್.ಶ್ರೀಧರ್ ತಿಳಿಸಿದರು. ಕೊಳ್ಳೇಗಾಲ ರೋಟರಿ ಸಂಸ್ಥೆ ಅಯೋಜಿಸಿದ್ದ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ತಾಯಂದಿರು ಹಿಂದೆ ಮಕ್ಕಳಿಗೆ ನಾಲ್ಕು ಐದು ವರ್ಷ ತುಂಬುವವರೆಗೂ ಹಾಲು ಉಣಿಸುತ್ತಿದ್ದರು. ಆದರೆ ಇತ್ತೀಚೆಗೆ ಬಹುತೇಕ ತಾಯಂದಿರು ತಮ್ಮ ಸೌಂದರ್ಯ ಕಾಳಜಿಯಿಂದ ಮಕ್ಕಳಿಗೆ ಹೆಚ್ಚು ಕಾಲ ಹಾಲು ಉಣಿಸುತ್ತಿಲ್ಲ ಇದರಿಂದಾಗಿ ಮಕ್ಕಳು ಸದೃಢಕಾಯರಾಗಿ ಬೆಳೆಯಲು ಆಗುತ್ತಿಲ್ಲ. ತಾಯಿ ಹಾಲಲ್ಲಿ ಪೌಷ್ಟಿಕಾಂಶ ಹೆಚ್ಚು ಇದೆ. ಇದು ಬೆಳೆಯುವ ಮಕ್ಕಳಿಗೆ ಸಹಕಾರಿ. ಬಾಟೆಲ್‌ಗಳಲ್ಲಿ ಹಾಲು ಉಣಿಸುವ ಸಂಪ್ರದಾಯ ನಿಲ್ಲಿಸಿ. ತಾಯಂದಿರು ಮಕ್ಕಳಿಗೆ ಎದೆ ಹಾಲು ಉಣಿಸಬೇಕೆಂದರು.

# ಪ್ರಶಸ್ತಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ವತಿಯಿಂದ ಆಗಸ್ಟ್ 1 ರಂದು ವಿಶ್ವ ಹಿರಿಯ ನಾಗರಿಕ ದಿನಾಚರಣೆಯನ್ನು ರಾಜ್ಯ ಮಟ್ಟದಲ್ಲಿ ಆಚರಿಸುತ್ತಿರುವ ಹಿನ್ನೆಲೆಯಲ್ಲಿ ವಿವಿಧ ಕ್ಷೇತ್ರದಲ್ಲಿ (ಶಿಕ್ಷಣ ಕ್ಷೇತ್ರ, ಸಾಹಿತ್ಯ ಕ್ಷೇತ್ರ, ಕಾನೂನು, ಪ್ರತಿಭೆ/ ಕ್ರೀಡೆ ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಮಾಜ ಸೇವೆ) ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ 6 ವೈಯಕ್ತಿಕ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 01 ಸಂಸ್ಥೆಗೆ ಪ್ರಶಸ್ತಿ ಸೇರಿ ಒಟ್ಟು 07 ಪ್ರಶಸ್ತಿಗಳನ್ನು ನೀಡಲಾಗುವುದು. ಆದ್ದರಿಂದ ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿರಿಯ ನಾಗರಿಕರ ಹಾಗೂ ಸಂಸ್ಥೆಗಳ ವತಿಯಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆ ಮತ್ತು ದಾಖಲಾತಿಗಳೊಂದಿಗೆ ಆಗಸ್ಟ್ 31 ರೊಳಗೆ ಈ ಕಛೇರಿಗೆ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ:ಜಿ.ಎ.18, ನೆಲಮಹಡಿ ಚಿಕ್ಕಬಳ್ಳಾಪುರ, ದೂರವಾಣಿ ಸಂಖ್ಯೆ: 08156-200122 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಎನ್.ಎಂ ಜಗದೀಶ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಧಿಕಾರ ಸ್ವೀಕಾರ

**ಚಿಕ್ಕಬಳ್ಳಾಪುರ:** ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾಗಿ ನಾಗರಾಜು ಕೆಳಗಿನಮನಿ ರವರು ಅಧಿಕಾರ ವಹಿಸಿಕೊಂಡಿದ್ದಾರೆ. ಶ್ರೀಯುತರು ಈ ಹಿಂದೆ ಬೆಂಗಳೂರು ಉತ್ತರ ವಲಯದಲ್ಲಿ ಕಾರ್ಯನಿರ್ವಹಿಸುತ್ತಿದ್ದರು.

# ಇಂದು ಕೃಷಿ ಸಚಿವರ ಪ್ರವಾಸ

**ಚಿಕ್ಕಬಳ್ಳಾಪುರ:** ಮಾನ್ಯ ಕೃಷಿ ಸಚಿವರಾದ ಎನ್. ಚಲುವರಾಯಸ್ವಾಮಿ ಅವರು ಆಗಸ್ಟ್ 12 ರಂದು ಚಿಕ್ಕಬಳ್ಳಾಪುರ ಜಿಲ್ಲೆಯ್ಲಲಿ ಕೈಗೊಳ್ಳಲಿರುವ ಪ್ರವಾಸ ಕಾರ್ಯಕ್ರಮದ ವಿವರ ಇಂತಿದೆ. ಅಂದು ಬೆಳಿಗ್ಗೆ 10:30 ಗಂಟೆಗೆ ಚಿಕ್ಕಬಳ್ಳಾಪುರ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಕಾರ್ಯಕರ್ತರ ಅಹವಾಲು ಸ್ವೀಕರಿಸಲಿದ್ದಾರೆ. ನಂತರ ಬೆಳಿಗ್ಗೆ 11:00 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬೆಂಗಳೂರು ವಿಭಾಗ ಮಟ್ಟದ ಕೃಷಿ ಇಲಾಖೆಯ ಪ್ರಗತಿ ಪರಿಶೀಲಿನಾ ಸಭೆಯಲ್ಲಿ ಭಾಗವಹಿಸುವರು. ತದನಂತರ ಮಧ್ಯಾಹ್ನ 1:00 ಗಂಟೆಗೆ ಕೃಷಿ ಇಲಾಖೆಗೆ ಸಂಬಂಧಿಸಿದ ವಿಷಯಗಳ ಕುರಿತು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯನ್ನು ಏರ್ಪಡಿಸಲಾಗಿದೆ.ನಂತರ ಮಧ್ಯಾಹ್ನ 2:30 ಗಂಟೆಗೆ ಚಿಕ್ಕಬಳ್ಳಾಪುರ ತಾಲ್ಲೂಕಿನ ಬನ್ನಿಕುಪ್ಪೆ ಮತ್ತು ಯಲುವಳ್ಳಿ ಕೃಷಿ ಕ್ಷೇತ್ರಗಳಿಗೆ ಭೇಟಿ ನೀಡಲಿದ್ದಾರೆ. ಸಂಜೆ 4:30 ಗಂಟೆಗೆ ಚಿಕ್ಕಬಳ್ಳಾಪುರದಿಂದ ಬೆಂಗಳೂರಿಗೆ ತೆರಳುವರು.

# ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ (ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ ಮತ್ತು ಪ.ಜಾ/ಪ. ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸೆಪ್ಟೆಂಬರ್ 4 ರೊಳಗೆ ಸಲ್ಲಿಸಬೇಕು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್ ಸೈಟ್ ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ಥಿಳಿತಿಜುಜಟಔಟಟಿಜಅಟಚಿಟ.ಛಿಂಟ ಗೆ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವುದುಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಎಸ್‌ಬಿ-4, ಜಿಲ್ಲಾಡಳಿತ ಭವನ, ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ ಅಥವಾ ಸಹಾಯವಾಣಿ ಸಂಖ್ಯೆ: 8050370004 ಮತ್ತು 8050770005 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಿಕಾಲಯಗಳಲ್ಲಿ ತರಬೇತಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಿಕೋದ್ಯಮ ವಿಷಯದಲ್ಲಿ ಸ್ನಾತಕೋತ್ತರ ಪದವಿ ಅಥವಾ ಪದವಿ ಪಡೆದಿರುವ ಮಹಿಳಾ ವಿದ್ಯಾರ್ಥಿಗಳಿಗೆ ಪತ್ರಿಕಾಲಯದಲ್ಲಿ ತರಬೇತಿ ಪಡೆಯಲು ಅರ್ಜಿ ಆಹ್ವಾನಿಸಿದೆ. ಪ್ರಸಕ್ತ ಸಾಲಿನಲ್ಲಿ 5 ಮಂದಿ ಮಹಿಳಾ ವಿದ್ಯಾರ್ಥಿಗಳಿಗೆ ಪ್ರಮುಖ ದಿನಪತ್ರಿಕೆಗಳ ಕಾರ್ಯಾಲಯಗಳಲ್ಲಿ 2 ತಿಂಗಳ ಕಾಲ ತರಬೇತಿ ಪಡೆಯಲು, ಮಾಸಿಕ ತಲಾ 20,000 ರೂ ಗಳನ್ನು ಶಿಶ್ಯವೇತನ ನೀಡಲಾಗುವುದು.

ಕರ್ನಾಟಕದ ಯಾವುದೇ ವಿಶ್ವವಿದ್ಯಾಲಯಗಳಲ್ಲಿ ಪತ್ರಿಕೋದ್ಯಮ ವಿಷಯದಲ್ಲಿ ಸ್ನಾತಕೋತ್ತರ/ಪದವಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿರುವ ವಿದ್ಯಾರ್ಥಿಗಳಿಗೆ ಆದ್ಯತೆ ನೀಡಲಾಗಿದೆ. ಮಹಿಳಾ ವಿದ್ಯಾರ್ಥಿಗಳು ಆಗಸ್ಟ್ 26 ರೊಳಗೆ ತಮ್ಮ ಸ್ವವಿವರ, ದೂರವಾಣಿ ಸಂಖ್ಯೆ, ಇ-ಮೇಲ್ ವಿಳಾಸ, ಆರ್ಥಿಕ ಸ್ಥಿತಿ, ಅಂಕಪಟ್ಟಿಗಳ ಫೋಟೋ ಪ್ರತಿಯನ್ನು ಸ್ಕ್ಯಾನ್ ಮಾಡಿ ಇಮೇಲ್ ಮೂಲಕ ಕಳುಹಿಸಬಹುದು. 28 ವರ್ಷದೊಳಗಿನ ಮಹಿಳಾ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅಕಾಡೆಮಿಯು ಅರ್ಹತಾ ಪರೀಕ್ಷೆ ನಡೆಸಲಿದೆ. ಈ ಪರೀಕ್ಷೆಯ ದಿನಾಂಕ, ಸ್ಥಳ ಮತ್ತು ಸಮಯವನ್ನು ಸಂದರ್ಶನದ ವೇಳೆ ತಿಳಿಸಲಾಗುವುದು.

# 20ಕ್ಕೆ ಅರಸು ಜನ್ಮ ದಿನವನ್ನು ಅರ್ಥಪೂರ್ಣವಾಗಿ ಆಚರಿಸಿ



**ಚಿಕ್ಕಬಳ್ಳಾಪುರ:** ರಾಜ್ಯದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜು ಅರಸು ಅವರ 109ನೇ ಜನ್ಮ ದಿನಾಚರಣೆಯನ್ನು ಆಗಸ್ಟ್ 20ರಂದು ಅರ್ಥಪೂರ್ಣವಾಗಿ ಆಚರಿಸಲು ಸಕಲ ಸಿದ್ಧತೆಯನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶುಕ್ರವಾರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ನಡೆದ ದೇವರಾಜು ಅರಸು ಅವರ ಜನ್ಮ ದಿನಾಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅರಸು ಅವರ 109ನೇ ಜನ್ಮ ದಿನಾಚರಣೆಯನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿಯೂ ಆಚರಿಸಬೇಕು. ಜನ ಪ್ರತಿನಿಧಿಗಳನ್ನು ಖುದ್ದಾಗಿ ಅಧಿಕಾರಿಗಳು ಶಿಷ್ಟಾಚಾರದ ರೀತಿ ಆಹ್ವಾನ ಮಾಡಬೇಕು. ಶಾಲಾ ಕಾಲೇಜುಗಳಲ್ಲಿ ಪೂರ್ವಭಾವಿಯಾಗಿ ಚರ್ಚಾ ಸ್ಪರ್ಧೆಯನ್ನು ಏರ್ಪಡಿಸಿ ವಿಜೇತರಿಗೆ ಸನ್ಮಾನಿಸಬೇಕು. ದೇವರಾಜು ಅರಸು ನಿಗಮದಿಂದ ಸೌಲಭ್ಯಗಳನ್ನು ಪಡೆದ ಫಲಾನುಭವಿಗಳನ್ನು ಗುರುತಿಸಿ ಕಾರ್ಯಕ್ರಮದಲ್ಲಿ ಸನ್ಮಾನಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು.

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಸಾಂಸ್ಕೃತಿಕ ಕಲಾ ತಂಡಗಳೊಂದಿಗೆ ಪಲ್ಲಕ್ಕಿ, ಕುಂಭಮೇಳ ಮೆರವಣಿಗೆಯು ನಗರದ ಜೈ ಭೀಮ್ ಹಾಸ್ಟಲ್ ಆವಣದಿಂದ ನಗರದ ಮುಖ್ಯ ಬೀದಿಗಳಲ್ಲಿ ಸಾಗಿ ಅಂಬೇಡ್ಕರ್ ಭವನ ವರೆಗೆಗೂ ಸಾಗಲಿದೆ. ಇದಕ್ಕೆ ಪೂರಕ ಸಿದ್ದತೆಗಳನ್ನು ಮಾಡಿಕೊಳ್ಳಬೇಕು. ಜೊತೆಗೆ ವೇದಿಕೆ ಸಿದ್ಧತೆ, ಅಲಂಕಾರ, ಆಸನ ವ್ಯವಸ್ಥೆ, ಪೊಲೀಸ್ ಬಿಗಿ ಭದ್ರತೆ, ಆಹ್ವಾನ ಪತ್ರಿಕೆಗಳ ಮುದ್ರಣ, ವಿತರಣೆ, ಕಾರ್ಯಕ್ರಮ ನಿರ್ವಹಣೆ, ನಿರೂಪಣೆ, ಇನ್ನಿತರೆ ಸಿದ್ಧತಾ ಕಾರ್ಯಗಳನ್ನು ಸಂಬಂಧ ಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ಕಾರ್ಯಭಾರ ಹಂಚಿಕೆ ಮಾಡಿ ಈ ಎಲ್ಲಾ ಕಾರ್ಯಗಳನ್ನು ಸಮರ್ಪಕವಾಗಿ ಮಾಡುವಂತೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗಗಳ ಒಕ್ಕೂಟದ ಮಹಿಳಾ ಘಟಕದ ರಾಜ್ಯಾಧ್ಯಕ್ಷರಾದ ಎಂ.ವಿ. ರಾಜೇಶ್ವರಿ, ದೇವರಾಜು ಅರಸು ನಿಗಮದ ಅಧಿಕಾರಿಗಳಾದ ಶಿವನಂದ ರೆಡ್ಡಿ, ಮಹಿಳಾ ಮತ್ತು ಮಕ್ಕಳ ಇಲಾಖೆಯ ಉಪನಿರ್ದೇಶಕ ವೆಂಕಟೇಶ್ ರೆಡ್ಡಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮುನಿರತ್ನಮ್ಮ, ಸಮುದಾಯದ ಮುಖಂಡರು ಹಾಗೂ ಸಂಘ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಕ್ರೀಡೆಯಿಂದ ದೈಹಿಕ ಮಾನಸಿಕ ಆರೋಗ್ಯ

**ಸಂತೆಮರಹಳ್ಳಿ:** ಇಲ್ಲಿನ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ ಗುಂಬಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ವತಿಯಿಂದ ಹೋಬಳಿ ಮಟ್ಟದ ಕ್ರೀಡಾಕೂಟಕ್ಕೆ ಯಳಂದೂರು ಕ್ಷೇತ್ರ ಶಿಕ್ಷಣಾಧಿಕಾರಿ ಕಾಂತರಾಜ್ ಚಾಲನೆ ನೀಡಿದರು.

ಈ ವೇಳೆಯಲ್ಲಿ ಗುಂಬಳ್ಳಿ ಗ್ರಾ ಪಂ ಅಧ್ಯಕ್ಷೆ ಮೀನಾ ಗೋವಿಂದರಾಜು ಮಾತನಾಡಿ ಕ್ರೀಡೆ ಮಕ್ಕಳ ಶೈಕ್ಷಣಿಕವಾಗಿ ಬೆಳೆಯಲು ಸಹಕರಿಯಾಗುತ್ತದೆ. ಕ್ರೀಡಾ ಮನೋಭಾವನೆ ಹೆಚ್ಚಿಸುವುದರ ಜೊತೆಗೆ ಆರೋಗ್ಯ ಕಾಪಾಡುವುದರಲ್ಲಿ ಅತ್ಯಮೂಲ್ಯ ಹಾಗೂ ವಿದ್ಯಾರ್ಥಿಗಳು ಹೋಬಳಿ ಮಟ್ಟದಿಂದ ರಾಜ್ಯ ಮಟ್ಟಕ್ಕೆ ಆಯ್ಕೆಯಾಗುವ ಮುಖಾಂತರ ಓದುತ್ತಿರುವ ಶಾಲೆಗೆ ಹಾಗೂ ಹೆತ್ತ ತಾಯಿ ತಂದೆಗೆ ಹೆಸರು ತರುವಲ್ಲಿ ಮುಂದಾಗಬೇಕು ಎಂದರು. ಗ್ರಾಮೀಣ ಭಾಗದಲ್ಲಿ ಇಂತಹ ಕ್ರೀಡಾಕೂಟ ಆಯೋಜನೆ ಮಾಡಿ ಮಕ್ಕಳಲ್ಲಿ ಆತ್ಮಸ್ಥೈರ್ಯ ತುಂಬುವಲ್ಲಿ ಶಿಕ್ಷಕರ ಪಾತ್ರ ಬಹಳ ಮುಖ್ಯ ಎಂದು ತಿಳಿಸಿದರು. ಈ ವೇಳೆಯಲ್ಲಿ ಗ್ರಾಪಂ ಉಪಾಧ್ಯಕ್ಷ ಶ್ರೀನಿವಾಸ, ಗ್ರಾಪಂ ಸದಸ್ಯರಾದ ಮಮತಾ, ಮಹೇಶ್, ಶಿವಮ್ಮ, ಎಸ್ ಡಿಎಂಸಿ ಅಧ್ಯಕ್ಷ ಜಗದೀಶ್, ತಾ ಪಂ ಮಾಜಿ ಅಧ್ಯಕ್ಷ ರಾಜಣ್ಣ, ಸಿಆರ್‌ಪಿ ರೇಚಣ್ಣ, ಮುಖ್ಯ ಶಿಕ್ಷಕರಾದ ಪುಟ್ಟರಾಜಮ್ಮ, ಮಹಾದೇವಮ್ಮ, ಜೆ ಎಸ್ ಎಸ್ ಶಾಲೆ ಮುಖ್ಯ ಶಿಕ್ಷಕ ಮರಿಸ್ವಾಮಿ ಮತ್ತು ಶಾಲಾ ಸಿಬ್ಬಂದಿ ಉಪಸ್ಥಿತರಿದ್ದರು.



# ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನ

**ಮಂಡ್ಯ:** ವಿಶ್ವ ಹಿರಿಯ ದಿನಾಚರಣೆಯನ್ನು ಅಕ್ಟೋಬರ್ 1 ರಂದು ರಾಜ್ಯ ಮಟ್ಟದಲ್ಲಿ ಆಚರಿಸುವ ಸಂದರ್ಭದಲ್ಲಿ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆಸಲ್ಲಿಸಿರುವವರನ್ನು ಸನ್ಮಾನಿಸಲು ವಿವಿಧ ಕ್ಷೇತ್ರಗಳಾದ ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಪ್ರತಿಭೆ/ಕ್ರೀಡೆ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿರುವ 06 ಮಂದಿ ಹಿರಿಯ ನಾಗರಿಕರಿಗೆ ವೈಯುಕ್ತಿಕ ಪ್ರಶಸ್ತಿ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 01 ಸಂಸ್ಥೆ ಸೇರಿ ಒಟ್ಟು 07 ರಾಜ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 31 ರೊಳಗೆ ಅರ್ಜಿಯನ್ನು ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಪಡೆದು ಕನ್ನಡದಲ್ಲಿ ಭರ್ತಿ ಮಾಡಿ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232-231090 ಹಾಗೂ www.dwdsc.karnataka.gov.in ವೆಬ್ ಸೈಟ್ ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲೆ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರೀಕರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ಸಂಜೆ ಟಿಪ್ಸ್



## ಜಿಯೋಫೈನಾನ್ ಅಪ್ಲಿಕೇಷನ್ ಬಳಸಿ ಪ್ಯಾರಿಸ್ ಪ್ರವಾಸಿ ತಾಣಗಳಲ್ಲಿಯೂ ಪಾವತಿಗೆ ಅವಕಾಶ

ಜಾಗತಿಕ ಮಟ್ಟದಲ್ಲಿಯೇ ಈಗ ಪ್ಯಾರಿಸ್ ಕ್ರೀಡಾ ಉತ್ಸಾಹಿಗಳನ್ನು ಸೆಳೆಯುತ್ತಿದೆ. ಇಂಥ ಸನ್ನಿವೇಶದಲ್ಲಿ ಜಿಯೋ ಫೈನಾನ್ಷಿಯಲ್ ಸರ್ವೀಸಸ್ ಲಿಮಿಟೆಡ್ ನಿಂದ ಮಹತ್ತರವಾದ ಘೋಷಣೆ ಮಾಡಿದ್ದು, ಫ್ರೆಂಚ್ ರಾಜಧಾನಿ ಪ್ಯಾರಿಸ್ ನಲ್ಲಿ ಜಿಯೋಫೈನಾನ್ಸ್ ಅಪ್ಲಿಕೇಷನ್ ಅನ್ನು ಅಲ್ಲಿ ಪರಿಚಯಿಸಲಾಗಿದೆ. ಇದರೊಂದಿಗೆ ರಿಲಯನ್ಸ್ ಜಿಯೋಫೈನಾನ್ಸ್ ಅಪ್ಲಿಕೇಷನ್ ಪ್ಯಾರಿಸ್ ನಲ್ಲಿ ಪ್ರವೇಶ ಪಡೆದಿದೆ. ಭಾರತೀಯ ಪ್ರಯಾಣಿಕರಿಗೆ ಡಿಜಿಟಲ್ ವಹಿವಾಟು ನಡೆಸಲು ಅನುಕೂಲವಾಗುವಂತೆ, ಅಧಿಕೃತ ವೆಬ್ಸೈಟ್ ಲಾ ಟೂರ್ ಐಫೆಲ್ ಮೂಲಕ ಐಫೆಲ್ ಟವರ್ಗೆ ಭೇಟಿ ನೀಡಲು ಟಿಕೆಟ್ಗಳನ್ನು ಖರೀದಿಸಲು ಜಿಯೋಫೈನಾನ್ಸ್ ಅಂತಾರಾಷ್ಟ್ರೀಯ ಪಾವತಿಗಳನ್ನು ಸಕ್ರಿಯಗೊಳಿಸುತ್ತದೆ; ಹಾಗೆಯೇ ಪ್ಯಾರಿಸ್ ಡಿಪಾರ್ಟ್ಮೆಂಟ್ ಸ್ಟೋರ್, ಗ್ಯಾಲರೀಸ್ ಲಫಯೆಟ್ಟೆ ಪ್ಯಾರಿಸ್ ಹೌಸ್ಮನ್ನಲ್ಲಿ ಅಂಗಡಿಯಲ್ಲಿ ಶಾಪಿಂಗ್ ಮಾಡಲು ಇದರಿಂದ ಅನುಕೂಲ ಆಗುತ್ತದೆ. ಭಾರತೀಯ ಒಲಿಂಪಿಕ್ ಒಕ್ಕೂಟದ ಸಹಭಾಗಿತ್ವದಲ್ಲಿ ರಿಲಯನ್ಸ್ ಫೌಂಡೇಷನ್ ಪರಿಕಲ್ಪನೆಯಲ್ಲಿ ರೂಪುಗೊಂಡಿರುವ 'ಇಂಡಿಯಾ ಹೌಸ್' ಒಳಗೆ ನಿಗದಿಪಡಿಸಿದ ಅನುಭವ ಕೇಂದ್ರದ ಮೂಲಕ ಜಿಯೋಫೈನಾನ್ಸ್ ಅಪ್ಲಿಕೇಷನ್ ಅನುಭವ ಸಹ ಪಡೆಯಬಹುದು. ಇಂಡಿಯಾ ಹೌಸ್ ಎಂಬುದು ಭಾರತದ ಶ್ರೀಮಂತ ಪರಂಪರೆ ಮತ್ತು ಐತಿಹ್ಯವನ್ನು ಜಗತ್ತಿನ ಮುಂದೆ ಪ್ರದರ್ಶಿಸುತ್ತಿದೆ. ಮತ್ತು ಈ ಸಮಯದಲ್ಲಿ ಪ್ಯಾರಿಸ್ನಲ್ಲಿ ಇರುವ ಭಾರತೀಯ ಕ್ರೀಡಾಪಟುಗಳು ಮತ್ತು ಸಂದರ್ಶಕರಿಗೆ ಇಂಡಿಯಾ ಹೌಸ್ ತಮ್ಮ ಮನೆಯಿಂದ ದೂರವಿರುವ ಮತ್ತೊಂದು ಮನೆಯಂತಾಗಿದೆ. ಒಲಿಂಪಿಕ್ ಗೇಮ್ಸ್ ಪ್ಯಾರಿಸ್ 2024ರ ಅಧಿಕೃತ ಪಾವತಿ ಪಾಲುದಾರ ವೀಸಾ ಆಗಿದ್ದು, ಮತ್ತು ವೀಸಾದೊಂದಿಗೆ ಸಹಭಾಗಿತ್ವ ಇರುವ ಜಿಯೋ ಫೈನಾನ್ಸ್ ಈಗ ಇಂಡಿಯಾ ಹೌಸ್ನಲ್ಲಿ ತನ್ನ ಅಸ್ತಿತ್ವವನ್ನು ಹೊಂದಿದೆ.ಸಲೀಸಾದ ನ್ಯಾವಿಗೇಷನ್ಗಾಗಿ ವಿನ್ಯಾಸ ಮಾಡಲಾದ ಜಿಯೋಫೈನಾನ್ಸ್ ಇದೀಗ ಭಾರತೀಯರಿಗೆ ಅವರ ಹಣಕಾಸಿನ ಪ್ರಯಾಣದ ಪ್ರತಿ ಹಂತದಲ್ಲೂ ಅತ್ಯುತ್ತಮವಾದ ಡಿಜಿಟಲ್ ಅನುಭವವನ್ನು ನೀಡುವ ಗುರಿ ಹೊಂದಿದೆ.

## ಬಜ್ರಾ ರಾಬ್

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಸಜ್ಜೆ ಹಿಟ್ಟು- 1/2 ಕಪ್, ನೀರು- 4 ಕಪ್, ತುಪ್ಪ- 1 ಟೀಸ್ಪೂನ್, ಬೆಲ್ಲದ ಪುಡಿ- 1/4 ಕಪ್, ತುರಿದ ಶುಂಠಿ, ಅಜ್ವೈನ್- 1/2 ಟೀಸ್ಪೂನ್

### ಮಾಡುವ ವಿಧಾನ

ಮೊದಲಿಗೆ ಬಾಣಲೆಗೆ ತುಪ್ಪ ಹಾಕಿ ಬಿಸಿಯಾಗಲು ಬಿಡಿ. ತುರಿದ ಶುಂಠಿ, ಅಜ್ವೈನ್ ಮತ್ತು ಸಜ್ಜೆ ಹಿಟ್ಟು ಸೇರಿಸಿ. ಮಿಶ್ರಣವು ಉತ್ತಮ ಕಂದು ಬಣ್ಣಕ್ಕೆ ತಿರುಗುವವರೆಗೆ ಬೆರೆಸಿ. ಬಳಿಕ ನೀರು ಮತ್ತು ಬೆಲ್ಲದ ಪುಡಿ ಸೇರಿಸಿ. ಮಿಶ್ರಣವನ್ನು 10 ನಿಮಿಷಗಳ ಕಾಲ ಚೆನ್ನಾಗಿ ಕುದಿಸಿದರೆ ಸಿದ್ಧವಾಗುತ್ತೆ ಬಜ್ರಾ ರಾಬ್, ಇದನ್ನು ಬಿಸಿ ಬಿಸಿ ಇರುವಾಗಲೇ ಸವಿಯಿರಿ.

## ತೂಕ ಇಳಿಸುವುದು ಹೇಗೆ ಗೊತ್ತೇ?

### ಹೆಲ್ತ್ ಟಿಪ್ಸ್



ಇತ್ತೀಚಿನ ದಿನಗಳಲ್ಲಿ ಜನರ ಜೀವನಶೈಲಿ ಮತ್ತು ಆಹಾರಕ್ರಮವು ಬೊಜ್ಜುಗೆ ಬಲಿಯಾಗುತ್ತಿದೆ. ಸಮಯದ ಕೊರತೆಯು ನಿಮಗಾಗಿ ಸಮಯವನ್ನು ಹುಡುಕಲು ತುಂಬಾ ಕಷ್ಟಕರವಾಗಿಸುತ್ತದೆ. ಒಂದೇ ಸ್ಥಳದಲ್ಲಿ ಹೆಚ್ಚು ಗಂಟೆಗಳ ಕಾಲ ಕೆಲಸ ಮಾಡುವುದು ಮತ್ತು ದೈಹಿಕ ಚಟುವಟಿಕೆಯ ಕೊರತೆ ಕೂಡ ಬೊಜ್ಜುಗೆ ಕಾರಣವಾಗುತ್ತದೆ.

ಹಾಗಾಗಿ ತಡರಾತ್ರಿಯಲ್ಲಿ ತಿನ್ನುವುದು ಮತ್ತು ಫಾಸ್ಟ್ ಫುಡ್ ಸೇವನೆ ಕೂಡ ತೂಕ ಹೆಚ್ಚಾಗಲು ಕಾರಣವಾಗುತ್ತದೆ.

ಆರೋಗ್ಯಕರ ಆಹಾರ ಮತ್ತು ವ್ಯಾಯಾಮವು ನಿಮ್ಮನ್ನು ಫಿಟ್ ಆಗಿರಿಸಲು ಸಲಹೆ ನೀಡಲಾಗುತ್ತದೆ. ಆದರೆ ಅನೇಕ ಜನರು ಬಯಸಿದರೂ ವ್ಯಾಯಾಮ ಮತ್ತು ಡಯಟ್ ಮಾಡಲು ಸಾಧ್ಯವಿಲ್ಲ. ತೂಕ ಇಳಿಸಿಕೊಳ್ಳಲು ಕಷ್ಟವಾಗುತ್ತದೆ. ವ್ಯಾಯಾಮ ಮಾಡದೆ ಮತ್ತು ಡಯಟ್ ಮಾಡದೆ ಫಿಟ್ ಆಗಿರಲು ಬಯಸುವವರಲ್ಲಿ ನೀವೂ ಸಹ ಸೇರಿದ್ದೀರಿ, ನಂತರ ನೀವು ಪ್ರತಿದಿನ ಈ ಸಣ್ಣ ಕೆಲಸಗಳನ್ನು ಮಾಡುವುದರಿಂದ ನಿಮ್ಮ ಫಿಟ್ನೆಸ್ ಹೆಚ್ಚಾಗುತ್ತದೆ.

ಬೆಳಿಗ್ಗೆ ಮತ್ತು ಸಂಜೆ ನಡೆಯುವುದನ್ನು ಅಭ್ಯಾಸ ಮಾಡಿ. ನಿಮ್ಮನ್ನು ಫಿಟ್ ಆಗಿಟ್ಟುಕೊಳ್ಳಲು ಇದು ಸುಲಭವಾದ ಮಾರ್ಗವಾಗಿದೆ. ಕೆಲವು ಅಧ್ಯಯನಗಳ ಪ್ರಕಾರ, ಪ್ರತಿದಿನ 30 ನಿಮಿಷಗಳ ಕಾಲ ನಡೆಯುವುದು ನಿಮ್ಮನ್ನು ಆರೋಗ್ಯಕರವಾಗಿ ಮತ್ತು ಫಿಟ್ ಆಗಿರಿಸಲು ಸಹಾಯ ಮಾಡುತ್ತದೆ. ವಿಶೇಷವಾಗಿ ಊಟ ಮಾಡಿದ ನಂತರ ನಡೆಯುವುದನ್ನು ರೂಢಿಸಿಕೊಳ್ಳಿ.

ದೇಹದಲ್ಲಿ ಸಂಗ್ರಹವಾಗಿರುವ ವಿಷವನ್ನು ಹೊರಹಾಕಲು ನೀವು ಸಾಕಷ್ಟು ಪ್ರಮಾಣದ ನೀರನ್ನು ಸೇವಿಸಬೇಕು. ನಿರ್ಜಲೀಕರಣವು ನಿಮ್ಮ ಆರೋಗ್ಯದ ಮೇಲೆ ಪರಿಣಾಮ ಬೀರಬಹುದು. ಆದ್ದರಿಂದ ತೂಕವನ್ನು ನಿಯಂತ್ರಿಸಲು ದಿನಕ್ಕೆ ಕನಿಷ್ಠ 8 ಲೋಟ ನೀರು ಕುಡಿಯಿರಿ.

ಊಟದ ಸಮಯದಲ್ಲಿ ತೂಕ ನಷ್ಟಕ್ಕೆ ನಿಮ್ಮ ಆಹಾರಕ್ರಮವನ್ನು ವೀಕ್ಷಿಸಿ . ಬೇಗನೆ ತಿನ್ನುವ ಅಭ್ಯಾಸವನ್ನು ಮಾಡಿಕೊಳ್ಳಿ, ವಿಶೇಷವಾಗಿ ರಾತ್ರಿಯಲ್ಲಿ. ರಾತ್ರಿಯ ಊಟವನ್ನು ಬೇಗ ತಿಂದರೆ ಅದು ಜೀರ್ಣವಾಗುತ್ತದೆ ಮತ್ತು ತೂಕ ಹೆಚ್ಚಾಗುವುದಿಲ್ಲ.

ಮನೆಯಲ್ಲಿ ತೂಕವನ್ನು ಕಳೆದುಕೊಳ್ಳುವ ಪ್ರಮುಖ ವಿಷಯವೆಂದರೆ ಹೊರಗೆ ತಿನ್ನುವುದು ಮತ್ತು ತ್ವರಿತ ಆಹಾರವನ್ನು ನಿಲ್ಲಿಸುವುದು. ನೀವಿಬ್ಬರೂ ಮನೆಯಲ್ಲಿ ಮಾಡಿದ ಊಟವನ್ನು ತಿನ್ನಿರಿ. ಮನೆಯಲ್ಲಿ ತಯಾರಿಸಿದ ಆಹಾರವು ಶುದ್ಧ ಮತ್ತು ಪೌಷ್ಟಿಕವಾಗಿದೆ.

## ಮಳೆಗಾಲದಲ್ಲಿ 'ಕೂದಲು-ಚರ್ಮ'ದ ಆರೈಕೆ

### ಬ್ಯೂಟಿ ಟಿಪ್ಸ್



ಆರೋಗ್ಯದ ಜೊತೆಗೆ ಕೂದಲು ಹಾಗೂ ಚರ್ಮದ ಕೆಲ ಸಮಸ್ಯೆಗಳು ಮಳೆಗಾಲದಲ್ಲಿ ಕಾಡುತ್ತವೆ. ಹಾಗಾಗಿ ಮಳೆಗಾಲದಲ್ಲಿ ಚರ್ಮ ಹಾಗೂ ಕೂದಲಿಗೆ ವಿಶೇಷ ಆರೈಕೆ ಬೇಕು. ವಾರದಲ್ಲಿ ಎರಡರಿಂದ ಮೂರು ದಿನ ಕೂದಲು ಸ್ವಚ್ಛಗೊಳಿಸಬೇಕು. ಹಾಗೆ ಮುಖವನ್ನು ಸ್ವಚ್ಛವಾಗಿ ತೊಳೆದು ಒಣಗಿದ ಬಟ್ಟೆಯಲ್ಲಿ ಒರೆಸಿಕೊಳ್ಳಬೇಕು. ಮಳೆಯಿಂದ ನಿಮ್ಮ ಬಟ್ಟೆ ಒದ್ದೆಯಾಗಿದ್ದರೆ ತುಂಬಾ ಸಮಯದವರೆಗೆ ಒದ್ದೆ ಬಟ್ಟೆಯಲ್ಲಿರಬೇಡಿ. ಸ್ವಚ್ಛ ನೀರಿನಲ್ಲಿ ಸ್ನಾನ ಮಾಡಿ. ಒಣಗಿದ ಬಟ್ಟೆಯನ್ನು ಆದಷ್ಟು ಬೇಗ ಧರಿಸಿ. ಸಾಮಾನ್ಯವಾಗಿ ಮಳೆಗಾಲದಲ್ಲಿ ಬಿಸಿಬಿಸಿ ಕರಿದ ತಿಂಡಿ ತಿನ್ನಲು ಮನಸ್ಸು ಬಯಸುತ್ತದೆ. ಎಣ್ಣೆಯುಕ್ತ ತಿಂಡಿಗಳು ಚರ್ಮದ ಮೇಲೆ ಪರಿಣಾಮ ಬೀರುತ್ತವೆ. ಹಾಗಾಗಿ ಎಣ್ಣೆಯುಕ್ತ ತಿಂಡಿಯಿಂದ ದೂರವಿರುವುದು ಒಳ್ಳೆಯದು. ಚರ್ಮದ ತೇವಾಂಶ ಕಾಪಾಡಿಕೊಂಡು ನೈಸರ್ಗಿಕ ಹೊಳಪು ಪಡೆಯಲು ಹೆಚ್ಚಿನ ಪ್ರಮಾಣದಲ್ಲಿ ನೀರು ಕುಡಿಯಿರಿ. ಮಳೆಗಾಲದಲ್ಲಿ ಕೂದಲು ಒಣಗಿ ತುರಿಕೆ ಕಾಣಿಸಿಕೊಳ್ಳುತ್ತದೆ. ಇದು ಸಾಮಾನ್ಯ ಸಮಸ್ಯೆ. ಹಾಗಾಗಿ ಎಂಟಿ ಡ್ಯಾಂಡ್ರಫ್ ಶ್ಯಾಂಪೂ ಬಳಸಿ. ತಲೆ ಸ್ನಾನ ಮಾಡಲು ಒಂದು ಗಂಟೆ ಮೊದಲು ಎಣ್ಣೆಯಿಂದ ತಲೆಗೆ ಮಸಾಜ್ ಮಾಡಿಕೊಳ್ಳಿ. ಒದ್ದೆಯಾಗಿರುವ ಕೂದಲನ್ನು ಕಟ್ಟಬೇಡಿ. ಹೇರ್ ಡ್ರೈಯರ್ ಬಳಕೆಯನ್ನು ಮಳೆಗಾಲದಲ್ಲಿ ಕಡಿಮೆ ಮಾಡಿ.

## ಮತ್ತೆ ಮದುವೆ ಆಗಲಿದ್ದಾರೆ ಸಮಂತಾ? ವಿವಾಹ ಕೋರಿಕೆ ಒಪ್ಪಿದ್ರಾ ನಟಿ?



ತೆಲುಗು ನಟ ನಾಗ ಚೈತನ್ಯ ಅವರು ಗೆಳತಿ ಶೋಭಿತಾ ಧುಲಿಪಾಲ್ ಜೊತೆ ದಾಂಪತ್ಯ ಜೀವನಕ್ಕೆ ಕಾಲಿಡಲು ರೆಡಿ ಆಗಿದ್ದಾರೆ. ಹಲವು ವರ್ಷಗಳ ಕಾಲ ಪರಸ್ಪರ ಡೇಟಿಂಗ್ ಮಾಡಿದ ನಂತರ, ನಾಗ ಚೈತನ್ಯ ಮತ್ತು ಶೋಭಿತಾ ಎಂಗೇಜ್?ಮೆಂಟ್ ಮಾಡಿಕೊಂಡರು. ನಾಗ ಚೈತನ್ಯ ಎರಡನೇ ಬಾರಿಗೆ ಮದುವೆ ಆಗಲು ರೆಡಿ ಆಗಿರುವುದರಿಂದ ನಟಿ ಸಮಂತಾ ರುತ್ ಪ್ರಭು ಅವರ ಬಗ್ಗೆ ಅಭಿಮಾನಿಗಳು ಕಳವಳ ವ್ಯಕ್ತಪಡಿಸುತ್ತಿದ್ದಾರೆ. ಸಮಂತಾ ಅವರು ಮೊದಲ ಪತಿ ನಾಗ ಚೈತನ್ಯ ಬಗ್ಗೆ ಯಾವುದೇ ಹೇಳಿಕೆ ನೀಡಿಲ್ಲ. ಇದೇ ವೇಳೆ ನಾಗ ಚೈತನ್ಯ ಎರಡನೇ ಬಾರಿಗೆ ನಿಶ್ಚಿತಾರ್ಥ ಮಾಡಿಕೊಳ್ಳುತ್ತಿದ್ದಂತೆ ಅಭಿಮಾನಿಯೊಬ್ಬರು ಸಮಂತಾಗೆ ಮದುವೆ ಪ್ರಸ್ತಾಪ ಮಾಡಿದ್ದಾರೆ. ಇದಕ್ಕೆ ನಟಿ ಕೂಡ ಉತ್ತರ ನೀಡಿದ್ದಾರೆ. ಸದ್ಯ ಸಮಂತಾ ಖಾಸಗಿ ಬದುಕಿನ ಬಗ್ಗೆ ಎಲ್ಲೆಡೆ ಚರ್ಚೆಯಾಗುತ್ತಿದೆ.ಸಾಮಾಜಿಕ ಜಾಲತಾಣದದಲ್ಲಿ ಸಮಂತಾ ಅಭಿಮಾನಿ ಮುಕೇಶ್ ಚಿಂತಾ ಅವರು ವಿಡಿಯೋ ಮಾಡಿ ಸಮಂತಾಗೆ ಮದುವೆ ಪ್ರಸ್ತಾಪ ಮಾಡಿದ್ದಾರೆ. ವಿಡಿಯೋದಲ್ಲಿ ಅಭಿಮಾನಿ ಸಮಂತಾಗೆ ಪ್ರಪೋಸ್ ಮಾಡಿ ತನ್ನನ್ನು ಮದುವೆಯಾಗುವಂತೆ ಕೇಳಿದ್ದಾರೆ. ಇದಕ್ಕೆ ಸಮಂತಾ ಕೂಡ ಉತ್ತರ ನೀಡಿದ್ದಾರೆ.

**ವಿಡಿಯೋದಲ್ಲಿ ಏನಿದೆ?:** ಮುಕೇಶ್ ತನ್ನ ಬ್ಯಾಗ್ ಅನ್ನು ಪ್ಯಾಕ್ ಮಾಡಿ ಸಮಂತಾ ಮನೆಗೆ ಹೋಗುತ್ತಾರೆ. ಆ ಬಳಿಕ ಅವರು ಸಮಂತಾ ಮನೆಗೆ ಬರುತ್ತಾರೆ. ಹಿಂಭಾಗದಲ್ಲಿ ಂಖ ಮೂಲಕ ಜಿಮ್ ತೋರಿಸಲಾಗಿದೆ. ಅಲ್ಲಿ ಅವರು ಸಮಂತಾಗೆ ಮದುವೆ ಪ್ರಪೋಸ್ ಇಡುತ್ತಾರೆ. ಆ ಬಳಿಕ ಅವರು ಮೊಣಕಾಲುಗಳ ಮೇಲೆ ಕುಳಿತು ಅಭಿಮಾನಿ ಪ್ರಪೋಸ್ ಮಾಡುವುದನ್ನು ವೀಡಿಯೊ ಒಳಗೊಂಡಿದೆ.

ವಿಡಿಯೋ ನೋಡಿದ ಬಳಿಕ ಸಮಂತಾ, 'ಹಿನ್ನಲೆಯಲ್ಲಿ ಜಿಮ್ ಕಾಣಿಸುತ್ತಿದೆ. ಅದು ನನ್ನನ್ನು ಸ್ವಲ್ಪ ಕನ್ವಿನ್ಸ್ ಮಾಡಿದೆ' ಎಂದು ಸಮಂತಾ ಕಮೆಂಟ್ ಮಾಡಿದ್ದಾರೆ. ಸದ್ಯ ಸಮಂತಾ ನೀಡಿದ ಉತ್ತರ ಸಾಮಾಜಿಕ ಜಾಲತಾಣಗಳಲ್ಲೂ ಚರ್ಚೆಯಾಗುತ್ತಿದೆ. ಸಮಂತಾ ಪ್ರತಿಕ್ರಿಯೆ ತಿಳಿದು ಅಭಿಮಾನಿಯೂ ಖುಷಿಯಾಗಿದ್ದಾರೆ.

ಸಮಂತಾ ಅವರ ವೈಯಕ್ತಿಕ ಜೀವನದ ಬಗ್ಗೆ ಮಾತನಾಡುತ್ತಾ, ನಟಿ ಕಳೆದ ಕೆಲವು ವರ್ಷಗಳಿಂದ ತಮ್ಮ ಜೀವನದಲ್ಲಿ ಅನೇಕ ಕಷ್ಟಕರ ಸಂದರ್ಭಗಳನ್ನು ಎದುರಿಸುತ್ತಿದ್ದಾರೆ. ನಾಗ ಚೈತನ್ಯ ಮತ್ತು ಸಮಂತಾ 2017 ರಲ್ಲಿ ವಿವಾಹವಾದರು. ಆದರೆ ಅವರ ದಾಂಪತ್ಯ ಹೆಚ್ಚು ಕಾಲ ಉಳಿಯಲಿಲ್ಲ. ಅಂತಿಮವಾಗಿ 2021ರಲ್ಲಿ ಇಬ್ಬರೂ ತಮ್ಮ ವಿಚ್ಛೇದನವನ್ನು ಘೋಷಿಸಿದರು. ವಿಚ್ಛೇದನದ ನಂತರ ಸಮಂತಾ ಕೂಡ ಅನೇಕ ತೊಂದರೆಗಳನ್ನು ಎದುರಿಸಿದರು. ಅವರ ಆರೋಗ್ಯವೂ ಹದಗೆಟ್ಟಿತು . ಆದರೆ ನಟಿ ಎಲ್ಲಾ ತೊಂದರೆಗಳನ್ನು ನಗುತ್ತಲೇ ಎದುರಿಸಿದರು.ಶೋಭಿತಾ ಮತ್ತು ನಾಗ ಚೈತನ್ಯ ಆಗಸ್ಟ್ 8 ರಂದು ಹೈದರಾಬಾದ್ನಲ್ಲಿ ಎಂಗೇಜ್ಮೆಂಟ್ ಮಾಡಿಕೊಂಡರು. ನಟನ ತಂದೆ ನಾಗಾರ್ಜುನ ತಮ್ಮ ಮಗ ಮತ್ತು ಭಾವಿ ಸೊಸೆಯ ಚಿತ್ರವನ್ನು ಪೋಸ್ಟ್ ಮಾಡಿ ಇಬ್ಬರಿಗೂ ಶುಭ ಹಾರೈಸಿದ್ದಾರೆ. ಶೋಭಿತಾ ಮತ್ತು ನಾಗ ಚೈತನ್ಯ ಅವರ ನಿಶ್ಚಿತಾರ್ಥದ ಫೋಟೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿವೆ.

## ವಿಶ್ವ ಆನೆ ದಿನಾಚರಣೆ



ಈ ಆಗಸ್ಟ್ 12 ರಂದು, ನಾವು ವಿಶ್ವ ಆನೆ ದಿನದಂದು ಭೂಮಿಯ ಅತ್ಯಂತ ಅದ್ಭುತವಾದ ಜೀವಿಗಳಲ್ಲಿ ಒಂದನ್ನು ಗೌರವಿಸುತ್ತೇವೆ. ಕಳೆದ ದಶಕದಲ್ಲಿ, ಆನೆಗಳ ಸಂಖ್ಯೆಯು ಗಮನಾರ್ಹವಾಗಿ 62% ರಷ್ಟು ಕಡಿಮೆಯಾಗಿದೆ ಮತ್ತು ಮುಂದಿನ ದಶಕದ ಅಂತ್ಯದ ವೇಳೆಗೆ ಅವು ಬಹುತೇಕ ಅಳಿವಿನಂಚಿನಲ್ಲಿವೆ.

ಪ್ರತಿದಿನ, 100 ಆಫ್ರಿಕನ್ ಆನೆಗಳು ಬೇಟೆಗಾರರಿಂದ ಕೊಲ್ಲಲ್ಪಡುತ್ತವೆ ಎಂದು ಅಂದಾಜಿಸಲಾಗಿದೆ. ಏಷ್ಯಾದ ಮಾರುಕಟ್ಟೆಗಳಲ್ಲಿ ದಂತದ ಆಸೆ ಸಾವಿರಾರು ಆನೆಗಳ ಹತ್ಯೆಗೆ ಕಾರಣವಾಗಿದೆ. ಈ ಭವ್ಯ ಜೀವಿಗಳನ್ನು ಉಳಿಸಲು ಜಾಗೃತಿ ಮೂಡಿಸಲು ಮತ್ತು ಬದಲಾವಣೆಯನ್ನು ರಚಿಸಲು ವಿಶ್ವ ಆನೆ ದಿನವನ್ನು ರಚಿಸಲಾಗಿದೆ. 2012 ರಲ್ಲಿ ಪೆಟ್ರೀಷಿಯಾ ಸಿಮ್ಸ್ ಮತ್ತು ಥೈಲ್ಯಾಂಡ್ನ ಎಲಿಫೆಂಟ್ ರೀಇಂಟ್ರೊಡಕ್ಷನ್ ಫೌಂಡೇಶನ್ ಮತ್ತು ವಿಶ್ವದಾದ್ಯಂತ 100 ಕ್ಕೂ ಹೆಚ್ಚು ಆನೆ ಸಂರಕ್ಷಣಾ ಸಂಸ್ಥೆಗಳು ಸ್ಥಾಪಿಸಿದ ನಂತರ, ವಿಶ್ವ ಆನೆ ದಿನವು ಆನೆಗಳನ್ನು ಪ್ರೀತಿಸುವ ಮತ್ತು ಸಹಾಯ ಮಾಡಲು ಬಯಸುವ ಲಕ್ಷಾಂತರ ವ್ಯಕ್ತಿಗಳನ್ನು ತಲುಪಿದೆ.

ವಿಶ್ವ ಆನೆ ದಿನವು ಆನೆಗಳಿಗೆ ಬೆದರಿಕೆ ಹಾಕುವ ಸಮಸ್ಯೆಗಳಿಗೆ ಧ್ವನಿ ನೀಡಲು ಸಂಘಟನೆಗಳು ಮತ್ತು ವ್ಯಕ್ತಿಗಳು ಒಟ್ಟಾಗಿ ರ್ಯಾಲಿ ಮಾಡುವ ದಿನವಾಗಿದೆ.ಈ ಶಕ್ತಿಶಾಲಿ, ಸಾಮೂಹಿಕ ಜಾಗತಿಕ ಆಂದೋಲನವು ಆನೆಗಳು ಮತ್ತು ಅವುಗಳ ಆವಾಸಸ್ಥಾನಗಳಿಗೆ ಜಗತ್ತನ್ನು ಸುರಕ್ಷಿತ ಸ್ಥಳವನ್ನಾಗಿ ಮಾಡಲು ಸಂರಕ್ಷಣಾ ಪರಿಹಾರಗಳನ್ನು ಸ್ಥಾಪಿಸಲು ಮತ್ತು ಅನುಮೋದಿಸಲು ಒಂದು ಮಾರ್ಗವನ್ನು ನೀಡುತ್ತದೆ ಆದ್ದರಿಂದ ಭವಿಷ್ಯದ ಪೀಳಿಗೆಗಳು ಅವುಗಳನ್ನು ಪ್ರಶಂಸಿಸಬಹುದು.

ಆನೆಗಳು ಎದುರಿಸುತ್ತಿರುವ ಬಹು ಬೆದರಿಕೆಗಳಿಂದ ರಕ್ಷಿಸಲು ಮತ್ತು ರಕ್ಷಿಸಲು ಸಹಾಯ ಮಾಡಲು 2021 ರ ವಿಶ್ವ ಆನೆ ದಿನಕ್ಕಾಗಿ ಆಗಸ್ಟ್ 12 ರಂದು ನಮ್ಮ ಎಲ್ಲಾ ಪ್ರಯತ್ನಗಳನ್ನು ಸಂಯೋಜಿಸೋಣ.

ನಾಗರಿಕತೆಯ ಇತಿಹಾಸದುದ್ದಕ್ಕೂ ಆನೆಗಳು ಮತ್ತು ಮನುಷ್ಯರು ಒಟ್ಟಿಗೆ ಬಹಳ ದೂರ ಸಾಗಿದ್ದಾರೆ. ಆಫ್ರಿಕನ್ ಆನೆಯ ನೈಸರ್ಗಿಕ ಪರಿಸರದ ಸಂಪೂರ್ಣ ವಿಸ್ತಾರ ಮತ್ತು ಅದರ ಗಾತ್ರ ಮತ್ತು ಬೆದರಿಕೆಯ ಭಂಗಿಗೆ ಧನ್ಯವಾದಗಳು, ಇದು ಹೆಚ್ಚಾಗಿ ಸೆರೆಯಲ್ಲಿ ಮತ್ತು ಪಳಗಿಸುವಿಕೆಯನ್ನು ವಿರೋಧಿಸಲು ನಿರ್ವಹಿಸುತ್ತಿದೆ. ಮತ್ತೊಂದೆಡೆ, ಏಷ್ಯನ್ ಆನೆಯು 4,000 ವರ್ಷಗಳಿಂದ ಮಾನವರೊಂದಿಗೆ ವಾಸಿಸುತ್ತಿದೆ, ಇದು ಹೆಚ್ಚಿನ ಗೌರವವನ್ನು ಹೊಂದಿದೆ ಮತ್ತು ವಿವಿಧ ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಪದ್ಧತಿಗಳೊಂದಿಗೆ ಸಂಬಂಧ ಹೊಂದಿದೆ. ಉದಾಹರಣೆಗೆ, ಥೈಲ್ಯಾಂಡ್ನಲ್ಲಿ, ಆನೆಗಳು ರಾಷ್ಟ್ರೀಯ ಐಕಾನ್ ಆಗಿದ್ದು, ಅವುಗಳಿಗೆ ಸಂಪೂರ್ಣವಾಗಿ ಮೀಸಲಾದ ರಾಷ್ಟ್ರೀಯ ರಜಾದಿನವಾಗಿದೆ ಮತ್ತು ಅವು ರಾಜನಿಂದ ರಾಯಲ್ ಬಿರುದನ್ನು ಸಹ ಪಡೆಯಬಹುದು.

ಮೇಲಿನ ಎಲ್ಲದರ ಹೊರತಾಗಿಯೂ, ಆನೆಗಳ ಬಗ್ಗೆ ನಮಗೆ ಇನ್ನೂ ತಿಳಿದಿಲ್ಲ. ಅವರು ಯಾವುದೇ ಭೂ ಪ್ರಾಣಿಗಳಿಗಿಂತ ದೊಡ್ಡ ಮೆದುಳನ್ನು ಹೊಂದಿದ್ದಾರೆ, ಅದು ಅವರನ್ನು ಬುದ್ಧಿವಂತ, ಜಾಗೃತ, ಸಾಮಾಜಿಕ ಮತ್ತು ಪರಾನುಭೂತಿ ಮಾಡುತ್ತದೆ - ನಾವು ಮನುಷ್ಯರು ನಮ್ಮಲ್ಲಿಯೇ ಶ್ರಮಿಸುವ ಗುಣಗಳು. ಮಾನವರು ಮತ್ತು ಆನೆಗಳು ಅನೇಕ ಗುಣಲಕ್ಷಣಗಳನ್ನು ಹಂಚಿಕೊಳ್ಳುತ್ತವೆ ಮತ್ತು ಅವು ಇತರ ಯಾವುದೇ ಪ್ರಾಣಿಗಳಿಗಿಂತ ಬಹುಶಃ ನಮ್ಮಂತೆಯೇ ಇರುತ್ತವೆ. ಆದರೆ ನಾವು ಅವರ ಭವಿಷ್ಯವನ್ನು ಅಪಾಯಕ್ಕೆ ಸಿಲುಕಿಸುತ್ತಿದ್ದೇವೆ ಮತ್ತು ಏಷ್ಯಾ ಮತ್ತು ಆಫ್ರಿಕಾದಾದ್ಯಂತ ಅವರ ಅಗತ್ಯ ಜೀವವೈವಿಧ್ಯ ಆವಾಸಸ್ಥಾನಗಳಿಗೆ ಬೆದರಿಕೆ ಹಾಕುತ್ತಿದ್ದೇವೆ. ಆನೆಗಳು ಆರೋಗ್ಯಕರ ಪರಿಸರ ವ್ಯವಸ್ಥೆಗಳನ್ನು ಉತ್ತೇಜಿಸುವ ಮತ್ತು ಜೀವವೈವಿಧ್ಯತೆಯನ್ನು ಉತ್ತೇಜಿಸುವ ಕಾರಣದಿಂದ ಅವುಗಳ ಪರಿಸರಕ್ಕೆ ಒಂದು ಪ್ರಮುಖ ಜಾತಿಯಾಗಿದೆ. ವಿಶ್ವ ಆನೆ ದಿನದ ವೆಬ್ಸೈಟ್ ಹೇಳುವಂತೆ, ಆನೆಯನ್ನು ಕಳೆದುಕೊಳ್ಳುವುದೆಂದರೆ ಪರಿಸರದ ಪಾಲಕನನ್ನು ಮತ್ತು ಪ್ರಾಣಿಯನ್ನು ಕಳೆದುಕೊಳ್ಳುವುದು.

ಕಾಡು ಆನೆಗಳಿಗೆ ಬೇಟೆಯಾಡುವಿಕೆ ಮತ್ತು ಅಕ್ರಮ ದಂತ ವ್ಯಾಪಾರದ ವಿರುದ್ಧ ಬಲವಾದ ಸ್ಥಳೀಯ ಮತ್ತು ಅಂತರಾಷ್ಟ್ರೀಯ ರಕ್ಷಣಾ ನೀತಿಗಳು ಮತ್ತು ಕಾನೂನನ್ನು ಜಾರಿಗೊಳಿಸುವ ಮೂಲಕ ನಾವು ಆನೆಗಳನ್ನು ಉಳಿಸಬಹುದು, ಅವುಗಳ ನೈಸರ್ಗಿಕ ಆವಾಸಸ್ಥಾನಗಳ ಉತ್ತಮ ನಿರ್ವಹಣೆಯನ್ನು ಉತ್ತೇಜಿಸುವುದು, ಪರಿಸರ ವ್ಯವಸ್ಥೆಗಳಲ್ಲಿ ಆನೆಯ ಪ್ರಮುಖ ಪಾತ್ರದ ಬಗ್ಗೆ ಜನರಿಗೆ ಶಿಕ್ಷಣ ನೀಡುವುದು, ಮಾರ್ಗವನ್ನು ಸುಧಾರಿಸುವುದು. ಸೆರೆಯಲ್ಲಿರುವ ಆನೆಗಳಿಗೆ ಚಿಕಿತ್ಸೆ ನೀಡಲಾಗುತ್ತದೆ ಮತ್ತು ಅಗತ್ಯವಿದ್ದಲ್ಲಿ, ಅಳಿವಿನಂಚಿನಲ್ಲಿರುವ ಜನಸಂಖ್ಯೆಯ ನೈಸರ್ಗಿಕ ಮರುಪೂರಣವನ್ನು ಅನುಮತಿಸಲು ವನ್ಯಜೀವಿ ಮೀಸಲುಗಳಲ್ಲಿ ಸೆರೆಯಲ್ಲಿರುವ ಆನೆಗಳನ್ನು ಮರುಪರಿಚಯಿಸಲಾಗುತ್ತದೆ. ಇವು ಪ್ರಪಂಚದಾದ್ಯಂತದ ವಿವಿಧ ಆನೆ ಸಂರಕ್ಷಣಾ ಸಂಸ್ಥೆಗಳ ಕೆಲವು ಗುರಿಗಳಾಗಿವೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಸಾಲ ಮರುಪಾವತಿ, ತಾಳ್ಮೆ ಅಗತ್ಯ, ತೀರ್ಥಕ್ಷೇತ್ರ ದರ್ಶನ, ಮಹಿಳಾ ಉದ್ಯಮಿಗಳಿಗೆ ಉತ್ತಮ ದಿನ.

**ವೃಷಭ:** ಸ್ಥಳ ಬದಲಾವಣೆ, ವ್ಯಸನಕ್ಕೆ ಖರ್ಚು, ರಾಜಭೀತಿ, ಶರೀರದಲ್ಲಿ ಆಯಾಸ, ಮಾಡುವ ಕೆಲಸದಲ್ಲಿ ವಿಘ್ನ.

**ಮಿಥುನ:** ಯಂತ್ರೋಪಕರಣಗಳಿಂದ ಲಾಭ, ವಿಪರೀತ ಹಣವ್ಯಯ, ಮನಕ್ಲೇಶ, ವಿದೇಶ ಪ್ರಯಾಣ.

**ಕಟಕ:** ನಿಮ್ಮ ಪ್ರಯತ್ನಗಳಿಗೆ ಉತ್ತಮ ಫಲ, ಆದಾಯಕ್ಕಿಂತ ಖರ್ಚು ಜಾಸ್ತಿ, ಸಜ್ಜನ ವಿರೋಧ, ಪರಸ್ತ್ರೀಯಿಂದ ತೊಂದರೆ.

**ಸಿಂಹ:** ಮನಸ್ಸಿನಲ್ಲಿ ಭಯ ಭೀತಿ, ನೆಮ್ಮದಿ ಇಲ್ಲದ ಜೀವನ, ನಿಂದನೆ, ವಿಪರೀತ ಖರ್ಚು, ಬಾಕಿ ವಸೂಲಿ.

**ಕನ್ಯಾ:** ಗುರಿ ಸಾಧಿಸಲು ಶ್ರಮಪಡುವಿರಿ, ಪ್ರಭಾವಿ ವ್ಯಕ್ತಿಗಳ ಭೇಟಿ, ಪಾಪ ಬುದ್ಧಿ, ದುಃಖದಾಯಕ ಪ್ರಸಂಗಗಳು.

**ತುಲಾ:** ಯತ್ನ ಕಾರ್ಯಗಳಲ್ಲಿ ಜಯ, ಋಣ ಭಾದೆ, ಅಲ್ಪ ಆದಾಯ, ಅಮೂಲ್ಯ ವಸ್ತುಗಳನ್ನು ಕಳೆದುಕೊಳ್ಳುವಿರಿ.

**ವೃಶ್ಚಿಕ:** ಮಾನಸಿಕ ವೇದನೆ, ಧನವ್ಯಯ, ಹಿತ ಶತ್ರುಗಳಿಂದ ತೊಂದರೆ, ಅನಾರೋಗ್ಯ, ಪರಸ್ತ್ರೀಯಿಂದ ನಿಂದನೆ ಎಚ್ಚರ.

**ಧನಸ್ಸು:** ಕೆಲಸ ಕಾರ್ಯಗಳಲ್ಲಿ ಜಯ, ಆರೋಗ್ಯದಲ್ಲಿ ಚೇತರಿಕೆ, ಸಮಾಜದಲ್ಲಿ ಗೌರವ, ಬಂಧು ಬಾಂಧವರ ಸಹಕಾರ.

**ಮಕರ:** ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು, ವಿವಾಹಕ್ಕೆ ಅಡಚಣೆ, ಶತ್ರು ಭಾದೆ, ಸಲ್ಲದ ಅಪವಾದ, ಕಾರ್ಯ ಬದಲಾವಣೆ.

**ಕುಂಭ:** ಷೇರು ವ್ಯವಹಾರಗಳಲ್ಲಿ ನಷ್ಟ, ಮನೆಯಲ್ಲಿ ವ್ಯಾಜ್ಯಗಳು ಬಗೆಹರಿಯುತ್ತವೆ, ನಂಬಿಕೆ ದ್ರೋಹ, ಸಕಾಲಕ್ಕೆ ಭೋಜನ ಇಲ್ಲದಿರುವಿಕೆ.

**ಮೀನ:** ವಿಪರೀತ ಖರ್ಚು, ವಾಹನ ಖರೀದಿ, ದಾಂಪತ್ಯದಲ್ಲಿ ವಿರಸ, ಮಾತಾಪಿತರರಲ್ಲಿ ಪ್ರೀತಿ, ಆರೋಗ್ಯದಲ್ಲಿ ವ್ಯತ್ಯಾಸ.

## ಮಿಲನ್ ಫರ್ಟಿಲಿಟಿ ಸೆಂಟರ್ನಿಂದ 'ಮಿಲನ್ ಎಂಬ್ರೇಸ್' ಉಪಕ್ರಮದೊಂದಿಗೆ ವಿಶ್ವ ಸ್ತನ್ಯಪಾನ ಸಪ್ತಾಹ ಆಚರಣೆ

ಬೆಂಗಳೂರು ನಗರದ ಮುಂಚೂಣಿ ಐವಿಎಫ್ ಸೌಲಭ್ಯವಾಗಿರುವ ಮಿಲನ್ ಫರ್ಟಿಲಿಟಿ ಸೆಂಟರ್, ವಿಶ್ವ ಸ್ತನ್ಯಪಾನ ಸಪ್ತಾಹದ ಹಿನ್ನೆಲೆಯಲ್ಲಿ ಆಗಸ್ಟ್ 1ರಿಂದ 7ರವರೆಗೆ ಮಿಲನ್ಸ್ ಎಂಬ್ರೇಸ್': ಸ್ತನ್ಯಪಾನ ಆರೈಕೆಯಲ್ಲಿನ ಅಂತರ ನಿವಾರಣೆ ಎಂಬ ಅಭಿಯಾನವನ್ನು ಪ್ರಕಟಿಸಿದೆ. ಅಂತರವನ್ನು ನಿವಾರಿಸುವುದು ಎಂಬ ಥೀಮ್ ಹೊಂದಿರುವ ಈ ಉಪಕ್ರಮವು ಸಮಾಜದ ಅಂಚಿನಲ್ಲಿರುವ ಸಮುದಾಯಗಳಿಗೆ ಸ್ತನಪಾನ ಸಂಪನ್ಮೂಲಗಳು, ಶಿಕ್ಷಣ ಮತ್ತು ಬೆಂಬಲ ನೀಡುವ ಗುರಿಯನ್ನು ಹೊಂದಿದೆ, ಸುಧಾರಿತ ಸ್ತನ್ಯಪಾನ ನೀತಿಗಳನ್ನು ಪ್ರತಿಪಾದಿಸಲು, ಆರೋಗ್ಯ ಆರೈಕೆ ಸೇವಾದಾರರಿಗೆ ತರಬೇತಿ ನೀಡಲು ಮತ್ತು ಆಸ್ಪತ್ರೆಗಳು ಮತ್ತು ಕೆಲಸದ ಸ್ಥಳಗಳಲ್ಲಿ ಸದೃಢ ಬೆಂಬಲ ವ್ಯವಸ್ಥೆಯನ್ನು ಒದಗಿಸಲು ಮಿಲನ್ ಬದ್ಧವಾಗಿದೆ. ಈ ಅಭಿಯಾನ ಮೂಲಕ ಜಾಗೃತಿ ಮೂಡಿಸುವುದರ ಜತೆಗೆ ಸ್ತನ್ಯಪಾನ ಅಭ್ಯಾಸಗಳಿಗೆ ಅಡಚಣೆಯಾಗಿರುವ ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ಸವಾಲುಗಳನ್ನು ಪರಿಹರಿಸುವ ಉದ್ದೇಶವೂ ಇದೆ.

ಭಾರತದಲ್ಲಿ ಮಕ್ಕಳ ಅಪೌಷ್ಟಿಕತೆಯ ಸಮಸ್ಯೆಯನ್ನು ನಿವಾರಿಸುವಲ್ಲಿ ಸ್ತನ್ಯಪಾನವು ನಿರ್ಣಾಯಕವಾಗಿದೆ. ಶಿಶುವಿನ ಬೆಳವಣಿಗೆಗೆ ಅಗತ್ಯವಾಗಿರುವ ಪೋಷಕಾಂಶಗಳು ಮತ್ತು ಪ್ರತಿಕಾಯಗಳು ಸ್ತನಪಾನದಿಂದ ಲಭ್ಯವಾಗುತ್ತದೆ. ಇದು ತಾಯಿ ಮತ್ತು ಮಗುವಿನ ಬಂಧವನ್ನು ಇನ್ನಷ್ಟು ದೃಢವಾಗಿಸುತ್ತದೆ, ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವ ಮತ್ತು ಮೆದುಳಿನ ಬೆಳವಣಿಗೆಯನ್ನು ವೃದ್ಧಿಸುತ್ತದೆ, ಇದರಿಂದಾಗಿ ಮಗುವಿನ ಸ್ಮರಣ ಶಕ್ತಿ ಹೆಚ್ಚುವಿಕೆಯೊಂದಿಗೆ ಶೈಕ್ಷಣಿಕವಾಗಿ ಉತ್ತಮ ಫಲಿತಾಂಶ ಪಡೆಯಲು ಸಾಧ್ಯವಾಗುತ್ತದೆ. ಸ್ತನ್ಯಪಾನ ಮಾಡಿಸುವುದರಿಮದ ಪ್ರಸವಾನಂತರ ಮಹಿಳೆಗೆ ವೇಗವಾಗಿ ಚೇತರಿಸಿಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ. ರಕ್ತಸ್ರಾವ ಕಡಿಮೆಯಾಗುವುದಲ್ಲದೆ ಗರ್ಭಾಶಯದ ಸಂಕೋಚನಕ್ಕೆ ಸಹಾಯ ಮಾಡಿ ತಾಯಿಯ ಆರೋಗ್ಯ ಕಾಪಾಡುತ್ತದೆ. ಸ್ತನಪಾನ ಅಭ್ಯಾಸವು ತಾಯಿ-ಮಗುವಿನ ಬಂಧ ಗಟ್ಟಿಗೊಳಿಸುವ ಜತೆಗೆ ಸ್ತನ ಮತ್ತು ಅಂಡಾಶಯದ ಕ್ಯಾನ್ಸರ್ಗಳ ಅಪಾಯವನ್ನು ತಗ್ಗಿಸುವುದು ಸೇರಿದಂತೆ ಹಲವಾರು ದೀರ್ಘಕಾಲೀನ ಪ್ರಯೋಜನಗಳನ್ನು ಕೊಡುತ್ತದೆ.

ಈ ಎಲ್ಲ ಗಮನಾರ್ಹ ಪ್ರಯೋಜನಗಳನ್ನು ಗಮನಿಸಿದರ, ಸ್ತನ್ಯಪಾನ ಮಾಡುವ ತಾಯಿಯನ್ನು ಹೆಚ್ಚು ಕಾಳಜಿಯಿಂದ ನೋಡಿಕೊಳ್ಳುವುದು ಅತ್ಯಗತ್ಯ.ಇದು ತಾಯಿಯ ಯೋಗಕ್ಷೇಮ ಮತ್ತು ಸ್ತನ್ಯಪಾನ ಪ್ರಯಾಣದ ಯಶಸ್ಸಿಗೆ ಪ್ರಮುಖ ಸಂಗತಿಯಾಗಿದೆ. ಬೆಂಗಳೂರಿನ ಜೆ.ಪಿ.ನಗರದ ಮಿಲನ್ ಫರ್ಟಿಲಿಟಿ ಸೆಂಟರ್ನ ಪೆರಿಯೆಂಟಲ್ ಮತ್ತು ಲಾಕ್ಟೇಷನ್ ತಜ್ಞ ಡಾ.ಪಾಯಲ್ ಬಿಸ್ವಾಸ್ ಎಸ್ಒಒ ಅವರು ತಾಯಿಯ ಚಿಂತನಶೀಲ ಆರೈಕೆಯನ್ನು ಅಗತ್ಯವನ್ನು ಒತ್ತಿ ಹೇಳಿದ್ದಾರೆ.

# ಕಮಲಾ ಹ್ಯಾರಿಸ್‌ರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿದ ಟ್ರಂಪ್



**ನ್ಯೂಯಾರ್ಕ್:** ಡೆಮಾಕ್ರಾಟಿಕ್ ಪಕ್ಷದ ನಾಯಕಿ, ಅಮೆರಿಕ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರನ್ನು ಹಲವು ಸಂದರ್ಭಗಳಲ್ಲಿ ಅವಾಚ್ಯ ಶಬ್ದಗಳಿಂದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಿಂದಿಸಿದ್ದಾರೆ ಎನ್ನಲಾಗಿದೆ. ಈ ಬಗ್ಗೆ ಅಮೆರಿಕದ ನ್ಯೂಯಾರ್ಕ್ ಟೈಮ್ಸ್ ಪತ್ರಿಕೆ ವರದಿ ಮಾಡಿದೆ.



ಖಾಸಗಿಯಾಗಿ ಅವರು ನಿಂದನೆ ಮಾಡಿದ್ದಾರೆ ಎಂದು ವರದಿ ಹೇಳಿಕೊಂಡಿದೆ. ಆದರೆ ಟ್ರಂಪ್ ವಕ್ತಾರ ಈ ವರದಿಯನ್ನು ಅಲ್ಲಗಳೆದಿದ್ದಾರೆ. ಅವರು ಅಂಥ ಭಾಷೆ ಬಳಕೆ ಮಾಡುವುದೇ ಇಲ್ಲವೆಂದಿದ್ದಾರೆ. ಇತ್ತೀಚೆಗೆ ಡೊನಾಲ್ಡ್ ಟ್ರಂಪ್ ಅವರು ಕಮಲಾರನ್ನು ''ದಡ್ಡಿ', ''ಅಸಮರ್ಥಳು' ಎಂದೂ ಟೀಕಿಸಿದ್ದರು.

**ಅಮೆರಿಕದ 3 ಪ್ರಾಂತದಲ್ಲಿ ಟ್ರಂಪ್‌ಗಿಂತ ಹ್ಯಾರಿಸ್‌ಗೆ ಬೆಂಬಲ ಹೆಚ್ಚು: ಸಮೀಕ್ಷೆ:** ಅಮೆರಿಕ ಅಧ್ಯಕ್ಷೀಯ ಚುನಾವಣೆಗೆ ಪ್ರಚಾರ ಬಿರುಸುಗೊಳ್ಳುತ್ತಿರುವಂತೆಯೇ ಫಲಿತಾಂಶ ದಲ್ಲಿ ತಿರುವು ತರಬಲ್ಲ ವಿಸ್ಕಾನ್ಸಿನ್, ಪೆನ್ಸಿಲ್ವೇನಿಯಾ, ಮಿಚಿಗನ್ ಪ್ರಾಂತಗಳಲ್ಲಿ ಸಮೀಕ್ಷೆ ನಡೆಸಲಾಗಿದೆ. ಅದರಲ್ಲಿ ಮಾಜಿ ಅಧ್ಯಕ್ಷ ಟ್ರಂಪ್ಗಿಂತ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಕಮಲಾ ಹ್ಯಾರಿಸ್ ಅಲ್ಪಮತಗಳ ಅಂತರದಲ್ಲಿ ಮುಂದಿದ್ದಾರೆ. ಹ್ಯಾರಿಸ್ಗೆ ಶೇ.50 ಬೆಂಬಲ ನೀಡಿದ್ದರೆ, ಟ್ರಂಪ್ಗೆ ಶೇ.46 ಬೆಂಬಲ ವ್ಯಕ್ತವಾಗಿದೆ. 1,973 ಮತದಾರರನ್ನು ಸಂದರ್ಶಿಸಿ ಈ ಸಮೀಕ್ಷೆ ನಡೆಸಲಾಗಿದೆ. ಜೋ ಬೈಡೆನ್ ಅಧ್ಯಕ್ಷೀಯ ಚುನಾವಣೆಯಿಂದ ಹಿಂದೆ ಸರಿದ ಬಳಿಕ ಹ್ಯಾರಿಸ್ ಅಧ್ಯಕ್ಷೀಯ ಅಭ್ಯರ್ಥಿ ಎಂದು ಘೋಷಿಸಲಾಗಿದೆ.

# ಸರಕಾರದ ಕ್ರಮಕ್ಕೆ ಮಾಲ್ದೀವ್ಸ್ ವಿಪಕ್ಷ ಸ್ವಾಗತ

**ಮಾಲೆ:** ಅಧ್ಯಕ್ಷ ಮುಹಮ್ಮದ್ ಮುಯಿಜ್ಜು ನೇತೃತ್ವದ ಸರಕಾರದಿಂದ ಭಾರತ ನೀತಿಯ ಮರುಪರಿಶೀಲನೆಯನ್ನು ಪ್ರಮುಖ ವಿಪಕ್ಷ ಮಾಲ್ದೀವಿಯನ್ ಡೆಮೊಕ್ರಟಿಕ್ ಪಕ್ಷ ಸ್ವಾಗತಿಸಿದ್ದು ತುರ್ತು ಅಗತ್ಯದ ಸಂದರ್ಭದಲ್ಲಿ ಯಾವತ್ತೂ ಭಾರತವೇ ಮೊದಲು ನೆರವಿನ ಹಸ್ತ ಚಾಚಿದೆ ಎಂದು ಹೇಳಿದೆ.

ಶನಿವಾರ ರಾಜಧಾನಿ ಮಾಲೆಯಲ್ಲಿ ಭಾರತದ ವಿದೇಶಾಂಗ ಸಚಿವ ಎಸ್. ಜೈಶಂಕರ್ ರನ್ನು ಭೇಟಿಯಾದ ಬಳಿಕ ಮಾಲ್ದೀವಿಯನ್ ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷ ಹಾಗೂ ಮಾಲ್ದೀವ್ಸ್ ನ ಮಾಜಿ ವಿದೇಶಾಂಗ ಸಚಿವ ಅಬ್ದುಲ್ಲಾ ಶಾಹಿದ್ 'ನನ್ನ ಮಾಜಿ ಸಹೋದ್ಯೋಗಿಯನ್ನು ಆತ್ಮೀಯವಾಗಿ ಸ್ವಾಗತಿಸಲು ಮತ್ತು ಭೇಟಿಯಾಗಲು ತುಂಬಾ ಸಂತೋಷವಾಗಿದೆ' ಎಂದು 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ. 'ಯಾವುದೇ ಸಮಯದಲ್ಲಿ ಮಾಲ್ದೀವ್ಸ್ ಅಂತರರಾಷ್ಟ್ರೀಯ 911 ಸಂಖ್ಯೆಗೆ ಕರೆ ಮಾಡಿದರೂ ಅದಕ್ಕೆ ಪ್ರಥಮವಾಗಿ ಸ್ಪಂದಿಸುವುದು ಭಾರತ ಎಂಬ ಬಗ್ಗೆ ಮಾಲ್ದೀವ್ಸ್ ಗೆ ನಂಬಿಕೆಯಿದೆ. ದೇಶದ ಪ್ರಸಕ್ತ ಸರಕಾರವು ಆರಂಭದಲ್ಲಿ ಆಕ್ರಮಣಕಾರಿ ಘೋಷಣೆ, ಲೇವಡಿಯ ಮಾತುಗಳ ಮೂಲಕ ಮತ್ತು ವಿಶ್ವಾಸಾರ್ಹ ಮಿತ್ರ ಹಾಗೂ ಅಭಿವೃದ್ಧಿಯ ಪಾಲುದಾರನನ್ನು ಬೆದರಿಸುವ ದೇಶವೆಂದು ಟೀಕಿಸಿತ್ತು. ಇದು ಮಾಲ್ದೀವ್ಸ್ ನ ಅಂತರರಾಷ್ಟ್ರೀಯ ಮಟ್ಟದಲ್ಲಿ ಕುಸಿತ, ಆರ್ಥಿಕ ನಷ್ಟ, ಅನಗತ್ಯ ತೊಂದರೆ, ಸವಾಲುಗಳನ್ನು ತಂದೊಡ್ಡಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಮುಯಿಝ್ಝು ಸರಕಾರ ಮಾಲ್ದೀವ್ಸ್-ಭಾರತ ನೀತಿಯನ್ನು ಹಠಾತ್ ಮರು ಪರಿಶೀಲಿಸಲು ಮುಂದಾಗಿರುವುದು ಸ್ವಾಗತಾರ್ಹ ಬೆಳವಣಿಗೆ' ಎಂದು ಅವರು ಹೇಳಿದ್ದಾರೆ.

## ಬಾಂಗ್ಲಾ ಸುಪ್ರೀಂಕೋರ್ಟ್‌ಗೆ ಹೊಸ ಸಿಜೆ ನೇಮಕ

**ಢಾಕಾ:** ಬಾಂಗ್ಲಾದೇಶದ ಸುಪ್ರೀಂಕೋರ್ಟ್ನ ನೂತನ ಮುಖ್ಯ ನ್ಯಾಯಾಧೀಶ(ಸಿಜೆ) ಆಗಿ ಸೈಯದ್ ರೆಫತ್ ಅಹ್ಮದ್‌ರನ್ನು ಅಧ್ಯಕ್ಷ ಮುಹಮ್ಮದ್ ಶಹಾಬುದೀನ್ ನೇಮಕಗೊಳಿಸಿರುವುದಾಗಿ ಕಾನೂನು ಮತ್ತು ನ್ಯಾಯ ಇಲಾಖೆಯ ಅಧಿಸೂಚನೆ ಹೇಳಿದೆ.ಸುಪ್ರೀಂಕೋರ್ಟ್ ಮುಖ್ಯ ನ್ಯಾಯಾಧೀಶರಾಗಿದ್ದ ಒಬೈದುಲ್ ಹಸನ್ ಹಾಗೂ ಇತರ ಐವರು ನ್ಯಾಯಾಧೀಶರು ಶನಿವಾರ ಹುದ್ದೆಗೆ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ನೂತನ ಸಿಜೆ ನೇಮಕಾತಿಯ ಬಗ್ಗೆ ಅಧಿಸೂಚನೆ ಹೊರಡಿಸಲಾಗಿದೆ. ಹೈಕೋರ್ಟ್ನ ವಿಭಾಗೀಯ ಪೀಠವೊಂದರ ಮುಖ್ಯ ನ್ಯಾಯಾಧೀಶರಾಗಿರುವ ಅಹ್ಮದ್ ಸಿಜೆ ಆಗಿ ಪ್ರಮಾಣವಚನ ಸ್ವೀಕರಿಸಿದಂದಿನಿಂದ ಅವರ ಸೇವಾವಧಿ ಪ್ರಾರಂಭವಾಗಲಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.



## ಇತರೆ ದೇಶಗಳ ನಾಗರಿಕರನ್ನು ಸೇನೆಗೆ ನೇಮಕ ಮಾಡಿಕೊಳ್ಳುವುದನ್ನು ನಿಲ್ಲಿಸಿದ ರಷ್ಯಾ

**ಉಕ್ರೇನ್:** ಉಕ್ರೇನ್‌ನಲ್ಲಿ ರಷ್ಯಾ ನಡೆಸುತ್ತಿರುವ ವಿಶೇಷ ಸೇನಾ ಕಾರ್ಯಾಚರಣೆಯಲ್ಲಿ ಭಾರತೀಯ ಪ್ರಜೆಗಳು ಮೃತಪಟ್ಟಿರುವುದು ದುರದೃಷ್ಟಕರ ಎಂದು ರಷ್ಯಾದ ರಾಯಭಾರ ಕಚೇರಿ ಸಂತಾಪ ಸೂಚಿಸಿದ್ದು, ಏಪ್ರಿಲ್‌ನಿಂದ ರಷ್ಯಾದ ಸಶಸ್ತ್ರ ಪಡೆಗಳಿಗೆ ಭಾರತೀಯರ ನೇಮಕಾತಿಯನ್ನು ನಿಲ್ಲಿಸಲಾಗಿದೆ ಎಂದು ಹೇಳಿದೆ.



ರಷ್ಯಾ ಸೇನೆಗೆ ಸೇರಲು ಸ್ವಯಂಪ್ರೇರಣೆಯಿಂದ ಒಪ್ಪಂದಕ್ಕೆ ಸಹಿ ಹಾಕಿರುವ ಮತ್ತು ಭಾರತಕ್ಕೆ ಮರಳಲು ಬಯಸುವ ಭಾರತೀಯ ಪ್ರಜೆಗಳ ಗುರುತಿಸುವಿಕೆ ಮತ್ತು ಬಿಡುಗಡೆಗೊಳಿಸುವಿಕೆಗೆ ಸಂಬಂಧಿಸಿ ಉಭಯ ದೇಶಗಳು ನಿಕಟ ಸಮನ್ವಯದಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ರಾಯಭಾರ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

ರಷ್ಯಾದ ರಕ್ಷಣಾ ಸಚಿವಾಲಯವು ಈ ವರ್ಷದ ಏಪ್ರಿಲ್ನಿಂದ ಭಾರತ ಸೇರಿದಂತೆ ಇತರೆ ದೇಶಗಳ ನಾಗರಿಕರನ್ನು ಸೇನೆಗೆ ನೇಮಕ ಮಾಡಿಕೊಳ್ಳುವುದನ್ನು ನಿಲ್ಲಿಸಿದೆ ಎಂದು ಅಲ್ಲಿನ ರಾಯಭಾರ ಕಚೇರಿ ಮಾಹಿತಿ ನೀಡಿದ್ದಾರೆ.

ರಷ್ಯಾ ರಾಯಭಾರ ಕಚೇರಿಯು ಭಾರತ ಸರ್ಕಾರ ಮತ್ತು ಮೃತರ ಕುಟುಂಬಗಳಿಗೆ ಸಂತಾಪವನ್ನು ವ್ಯಕ್ತಪಡಿಸುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ. ಪ್ರಸ್ತುತ 69 ಭಾರತೀಯ ಪ್ರಜೆಗಳು ರಷ್ಯಾದ ಸೇನೆಯಿಂದ ಬಿಡುಗಡೆಗಾಗಿ ಕಾಯುತ್ತಿದ್ದಾರೆ ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಶುಕ್ರವಾರ ಲೋಕಸಭೆಯಲ್ಲಿ ತಿಳಿಸಿದ್ದಾರೆ.

# ಇದು ಮೋದಿ ಭಾರತ, ಬಾಂಗ್ಲಾದೇಶದಂತಹ ಪರಿಸ್ಥಿತಿ ಉಂಟಾಗಲ್ಲ; ಕಾಂಗ್ರೆಸ್‌ಗೆ ತಿರುಗೇಟು



**ನವದೆಹಲಿ:** ಇದು ಮೋದಿಯವರ ಭಾರತ, ಬಾಂಗ್ಲಾದೇಶದಂತಹ ಪರಿಸ್ಥಿತಿ ಬರೋದಕ್ಕೆ ಸಾಧ್ಯವಿಲ್ಲ ಎಂದು ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಪ್ರಧಾನಿಗಳ ಪರ ಬ್ಯಾಟ್ ಬೀಸಿದ್ದಾರೆ.

ಜೋಧ್‌ಪುರ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಾಂಗ್ಲಾದೇಶದಲ್ಲಿ ನಡೆದಂತೆ ಭಾರತದಲ್ಲೂ ಮುಂದೊಂದು ದಿನ ಪ್ರಧಾನಿ ನರೇಂದ್ರ ಮೋದಿ ನಿವಾಸಕ್ಕೆ ಜನರು ನುಗ್ಗುತ್ತಾರೆ ಎಂಬ ಮಧ್ಯಪ್ರದೇಶ ಕಾಂಗ್ರೆಸ್‌ನ ಹಿರಿಯ ನಾಯಕ ಸಜ್ಜನ್ ಸಿಂಗ್ ವರ್ಮಾ ಅವರ ಹೇಳಿಕೆಗೆ ಪ್ರತಿಕ್ರಿಯೆ ನೀಡಿದರು.

ಭಾರತದಲ್ಲಿ ಬಾಂಗ್ಲಾದೇಶದಂತಹ ಪರಿಸ್ಥಿತಿ ಉದ್ಭವಿಸುತ್ತದೆ ಎಂದು ಕೆಲವರು ಕಾಮೆಂಟ್ ಮಾಡಿರುವುದು ದುರದೃಷ್ಟಕರ. ಅಂತಹ ಪರಿಸ್ಥಿತಿ ಇಲ್ಲಿ ಬರಲು ಸಾಧ್ಯವಿಲ್ಲ, ಏಕೆಂದರೆ ಇದು ಮೋದಿ ಅವರ ಭಾರತ. ಬಾಂಗ್ಲಾದೇಶದಲ್ಲಿ ನಡೆದಿರುವುದು



ಅನಿರೀಕ್ಷಿತವಲ್ಲ. ಅಲ್ಲಿನ ಪರಿಸ್ಥಿಯ ಬಗ್ಗೆ ಭಾರತ ಕಣ್ಣಿಟ್ಟಿದೆ ಎಂದು ಹೇಳಿದ್ದಾರೆ.

**ಪ್ರವಾಸೋದ್ಯಮಕ್ಕೆ ಉತ್ತೇಜನ:** ಇದೇ ವೇಳೆ ಸ್ವದೇಶ್ ದರ್ಶನ್ ಯೋಜನೆಯಡಿ ರಾಜಸ್ಥಾನಕ್ಕೆ 4 ಸರ್ಕ್ಯೂಟ್ ನೀಡುತ್ತಿರುವ ಕುರಿತು ಮಾತನಾಡಿದ ಅವರು, ಪ್ರವಾಸೋದ್ಯಮವು ಆಯಾ ರಾಜ್ಯ ಸರ್ಕಾರಗಳಿಗೆ ಸಂಬಂಧಿಸಿದ ವಿಷಯವಾಗಿದೆ. ಮುಂದಿನ ದಿನಗಳಲ್ಲಿ ರಾಜ್ಯಗಳ ಸಹಯೋಗದೊಂದಿಗೆ ಇಡೀ ದೇಶದಲ್ಲಿ ಪ್ರವಾಸೋದ್ಯಮ ಹೆಚ್ಚಿಸಲು ಕೆಲಸ ಮಾಡುತ್ತೇವೆ. ರಾಜ್ಯ ಸರ್ಕಾರದಿಂದ ಪ್ರವಾಸೋದ್ಯಮಕ್ಕೆ ಸಂಬಂಧಿಸಿದಂತೆ ಪ್ರಸ್ತಾವನೆಗಳು ಬಂದರೆ ಅವುಗಳನ್ನು ಗಂಭೀರವಾಗಿ ಪರಿಗಣಿಸಿ ಮುಂದೆ ಕೊಂಡೊಯ್ಯುತ್ತೇವೆ ಎಂದು ಭರವಸೆ ನೀಡಿದ್ದಾರೆ. ಮುಂದುವರಿದು ಮಾತನಾಡಿ, ವರ್ಷಾಂತ್ಯದ ವೇಳೆಗೆ ಜೋಧ್‌ಪುರ ವಿಮಾನ ನಿಲ್ದಾಣದಲ್ಲಿ ಹೊಸ ಟರ್ಮಿನಲ್ ಕಟ್ಟಡ ಉದ್ಘಾಟಿಸಲಾಗುವುದು. ಅದರ ಶೇ.45ಕ್ಕೂ ಹೆಚ್ಚು ಕಾಮಗಾರಿ ಪೂರ್ಣಗೊಂಡಿದೆ ಎಂದು ಕೇಂದ್ರ ಸಚಿವರು ಹೇಳಿದರು.

## ಬಾಂಬ್ ಸ್ಫೋಟದಲ್ಲಿ ಬಿಜೆಪಿ ಮಾಜಿ ಶಾಸಕನ ಪತ್ನಿ ಸಾವು

**ಇಂಫಾಲ್:** ಮಣಿಪುರದ ಕಾಂಗ್ಪೋಕ್ಪಿ ಜಿಲ್ಲೆಯಲ್ಲಿ ಬಾಂಬ್ ಸ್ಫೋಟ ಸಂಭವಿಸಿದ್ದು, ಘಟನೆಯಲ್ಲಿ ಬಿಜೆಪಿ ಮಾಜಿ ಶಾಸಕರೊಬ್ಬರ ಪತ್ನಿ ಸಾವನ್ನಪ್ಪಿದ್ದಾರೆ.ಸಾಯಿಕುಲ್ ಕ್ಷೇತ್ರದ ಬಿಜೆಪಿ ಮಾಜಿ ಶಾಸಕ ಯಮ್ಥಾಂಗ್ ಹಾಕಿಪ್ ಅವರ ಮನೆಯ ಪಕ್ಕದಲ್ಲೇ ಬಾಂಬ್ ಸ್ಫೋಟ ಸಂಭವಿಸಿದೆ. ಘಟನೆಯಲ್ಲಿ ಹಾಕಿಪ್ ಅವರ 2ನೇ ಪತ್ನಿ ಸಪಂ ಚಾರುಬಾಲಾ ಅವರು ಗಂಭೀರ ಗಾಯಗೊಂಡಿದ್ದಾರೆ. ಕೂಡಲೇ ಅವರನ್ನು ಸಾಯಿಕುಲ್ನಲ್ಲಿರುವ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಅವರು ಆಸ್ಪತ್ರೆಯಲ್ಲಿಯೇ ಕೊನೆಯುಸಿರೆಳೆದಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ.ಸ್ಫೋಟ ಸಂಭವಿಸಿದಾಗ ಹಾಕಿಪ್ ಅವರ ಮನೆಯಲ್ಲೇ ಇದ್ದರು. ಆದರೆ ಅವರು ಭಾರೀ ಅಪಾಯದಿಂದ ಪಾರಾಗಿದ್ದಾರೆ.ಸದ್ಯ ಪೊಲೀಸರು ಬಾಂಬ್ ಸ್ಫೋಟ ಸಂಭವಿಸಿದ್ದು ಹೇಗೆ ಅನ್ನೋ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.



## ಭದ್ರತೆ ರಕ್ಷಿಸಲು ಇರಾನ್‌ಗೆ ಬೆಂಬಲ: ಚೀನಾ

**ಬೀಜಿಂಗ್:** ತನ್ನ ಸಾರ್ವಭೌಮತ್ವ, ಭದ್ರತೆ ಮತ್ತು ರಾಷ್ಟ್ರೀಯ ಘನತೆಯನ್ನು ರಕ್ಷಿಸುವಲ್ಲಿ ಇರಾನ್ ಗೆ ಚೀನಾ ಬೆಂಬಲ ನೀಡುತ್ತದೆ ಎಂದು ಚೀನಾ ವಿದೇಶಾಂಗ ಸಚಿವ ವಾಂಗ್ ಯಿ ಹೇಳಿರುವುದಾಗಿ ವರದಿಯಾಗಿದೆ. ರವಿವಾರ ಇರಾನ್ ವಿದೇಶಾಂಗ ಸಚಿವರ ಜತೆ ದೂರವಾಣಿಯ ಮೂಲಕ ಮಾತನಾಡಿದ ಚೀನಾದ ವಿದೇಶಾಂಗ ಸಚಿವರು, ಜುಲೈ 31ರಂದು ಟೆಹ್ರಾನ್ನಲ್ಲಿ ಹಮಾಸ್ ನಾಯಕ ಇಸ್ಮಾಯೀಲ್ ಹಾನಿಯೆಹ್ ಅವರ ಹತ್ಯೆಯನ್ನು ಖಂಡಿಸುವುದಾಗಿ ಪುನರುಚ್ಚರಿಸಿದರು. ಅಲ್ಲದೆ, ಈ ಆಕ್ರಮಣವು ಇರಾನ್ನ ಸಾರ್ವಭೌಮತ್ವವನ್ನು ಉಲ್ಲಂಘಿಸಿದೆ ಮತ್ತು ಪ್ರಾದೇಶಿಕ ಸ್ಥಿರತೆಗೆ ಬೆದರಿಕೆಯೊಡ್ಡಿದೆ. ಹಾನಿಯೆಹ್ ಹತ್ಯೆಯು ಗಾಝಾ ಶಾಂತಿ ಮಾತುಕತೆಯ ಪ್ರಕ್ರಿಯೆ ಮತ್ತು ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಯನ್ನು ದುರ್ಬಲಗೊಳಿಸಿದೆ ಎಂದು ಕಳವಳ ವ್ಯಕ್ತಪಡಿಸಿರುವುದಾಗಿ ಚೀನಾದ ವಿದೇಶಾಂಗ ಇಲಾಖೆ ಹೇಳಿದೆ.

ಕಾನೂನಿಗೆ ಅನುಗುಣವಾಗಿ ತನ್ನ ಸಾರ್ವಭೌಮತ್ವ, ಭದ್ರತೆ ಮತ್ತು ರಾಷ್ಟ್ರೀಯ ಘನತೆಯನ್ನು ರಕ್ಷಿಸುವಲ್ಲಿ, ಪ್ರಾದೇಶಿಕ ಶಾಂತಿ, ಸ್ಥಿರತೆಯನ್ನು ಕಾಪಾಡಿಕೊಳ್ಳುವ ಪ್ರಯತ್ನಗಳಲ್ಲಿ ಇರಾನ್ ಗೆ ಚೀನಾ ಬೆಂಬಲ ನೀಡುತ್ತದೆ ಹಾಗೂ ಇರಾನ್ ನೊಂದಿಗೆ ನಿಕಟ ಸಂವಹನವನ್ನು ನಿರ್ವಹಿಸಲು ಸಜ್ಜಾಗಿದೆ ಎಂದು ವಾಂಗ್ ಹೇಳಿದ್ದಾರೆ.



# ಅಮರನಾಥ್ ಯಾತ್ರೆ ತಾತ್ಕಾಲಿಕವಾಗಿ ರದ್ದು

**ಶ್ರೀನಗರ:** ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಅಮರನಾಥ್ ಯಾತ್ರೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.ಪಹಲ್ಗಾಮ್ ಮತ್ತು ಬಾಲ್ಟಾಲ್ ಮಾರ್ಗಗಳು ರದ್ದಾಗಿವೆ. ಇದರಿಂದ ಎರಡೂ ಮಾರ್ಗಗಳಲ್ಲಿ ಯಾತ್ರೆ ಸ್ಥಗಿತಗೊಂಡಿದೆ. ಬುಧವಾರ ನಿರ್ವಹಣಾ ಕಾರ್ಯಕ್ಕಾಗಿ ಪಹಲ್ಗಾಮ್ ಮಾರ್ಗವನ್ನು ಮುಚ್ಚಲಾಗಿತ್ತು. ಭಾನುವಾರ ಅಮರನಾಥ ಯಾತ್ರೆಯ ಪಹಲ್ಗಾಮ್ ಮತ್ತು ಬಲ್ಟಾಲ್ ಮಾರ್ಗಗಳಲ್ಲಿ ಭಾರೀ ಮಳೆ ಸುರಿದಿದೆ ಎಂದು ಕಾಶ್ಮೀರದ ವಿಭಾಗೀಯ ಆಯುಕ್ತ ವಿ ಕೆ ಭಿದುರಿ ಹೇಳಿದ್ದಾರೆ. ಮಳೆಯ ಕಾರಣ, ಅಮರನಾಥ ಯಾತ್ರೆಯ ಬಾಲ್ಟಾಲ್ ಅಕ್ಷದ ಮೇಲೆ ತುರ್ತು ದುರಸ್ತಿ ಮತ್ತು ನಿರ್ವಹಣಾ ಕಾರ್ಯವನ್ನು ಕೈಗೊಳ್ಳಬೇಕಾಗಿದೆ. ಯಾತ್ರಿಗಳ ಸುರಕ್ಷತೆಯ ಹಿತದೃಷ್ಟಿಯಿಂದ ಸೋಮವಾರ ಬಾಲ್ಟಾಲ್ ಮಾರ್ಗದಿಂದ ಯಾವುದೇ ಯಾತ್ರೆಗೆ ಅವಕಾಶ ನೀಡುವುದಿಲ್ಲ ಎಂದು ಅವರು ತಿಳಿಸಿದ್ದಾರೆ.ಈ ವರ್ಷ ಇದುವರೆಗೆ 3,880 ಮೀಟರ್ ಎತ್ತರದ ಗುಹಾ ದೇಗುಲದಲ್ಲಿ 5.10 ಲಕ್ಷಕ್ಕೂ ಹೆಚ್ಚು ಯಾತ್ರಾರ್ಥಿಗಳು ಶಿವನ ದರ್ಶನ ಪಡೆದಿದ್ದಾರೆ.

## ಉಗಾಂಡಾದ ಕಂಪಾಲಾ ಕಸದ ರಾಶಿಯಲಿ ಭೂಕುಸಿತ: ಸಾವಿನ ಸಂಖ್ಯೆ ಏರಿಕೆ

**ಉಗಾಂಡಾ:** ಉಗಾಂಡಾದ ರಾಜಧಾನಿ ಕಂಪಾಲಾದ ಭೂಕುಸಿತದಲ್ಲಿ ಕಸ ಭೂಕುಸಿತದಿಂದ ಸಾವನ್ನಪ್ಪಿದವರ ಸಂಖ್ಯೆ 12 ಕ್ಕೆ ಏರಿದೆ ಎಂದು ಪೊಲೀಸರು ಭಾನುವಾರ (ಆಗಸ್ಟ್ 11) ತಿಳಿಸಿದ್ದಾರೆ. ಒಂದು ದಿನ ಮೊದಲು, ಶನಿವಾರ (ಆಗಸ್ಟ್ 10) ಧಾರಾಕಾರ ಮಳೆಯಿಂದಾಗಿ ಪ್ರಚೋದಿಸಲ್ಪಟ್ಟ ಕಿಟೀಜಿ ಭೂಕುಸಿತವು ಭಾರಿ ಕುಸಿತ ಉಂಟಾಗಿದೆ. ಈ ಪರಿಣಾಮ ಮನೆಗಳು, ಜಾನುವಾರುಗಳು ಮತ್ತು ಜನರು ಕಸದ ರಾಶಿಯ ಅಡಿಯಲ್ಲಿ ಹುದುಗಿ ಹೋಗಿದ್ದಾರೆ. ಕಂಪಾಲಾದ ಮೆಟ್ರೋಪಾಲಿಟನ್ ಪೊಲೀಸ್ ವಕ್ತಾರ ಪ್ಯಾಟ್ರಿಕ್ ಒನ್ಯಾಂಗೊ ಸುದ್ದಿ ಸಂಸ್ಥೆ ಎಎಫ್ಪಿಗೆ ಮಾತನಾಡಿ, ಇಲ್ಲಿಯವರೆಗೆ ಕಸದ ರಾಶಿಯಿಂದ 12 ಶವಗಳನ್ನು ಹೊರತೆಗೆಯಲಾಗಿದೆ. 14 ಜನರನ್ನು ಜೀವಂತವಾಗಿ ರಕ್ಷಿಸಲಾಗಿದೆ ಎಂದು ಹೇಳಿದರು.ಯಾರೂ ಕಸದ ಅಡಿಯಲ್ಲಿ ಸಿಲುಕಿಲ್ಲ ಎಂದು ನಮಗೆ ಖಚಿತವಾಗುವವರೆಗೂ ರಕ್ಷಣಾ ಕಾರ್ಯಾಚರಣೆ ಮುಂದುವರೆಸುತ್ತೇವೆ ಎಂದು ಅವರು ಹೇಳಿದರು. ನಾಯಿ ಸೇರಿದಂತೆ ಹಲವಾರು ಪ್ರಾಣಿಗಳನ್ನು ರಕ್ಷಿಸಲಾಗಿದೆ ಎಂದು ಒನ್ಯಾಂಗೊ ಬಹಿರಂಗಪಡಿಸಿದರು. ನಮ್ಮ ಅಂದಾಜಿನ ಪ್ರಕಾರ, ಘಟನೆಯಿಂದ ಸುಮಾರು 1,000 ಜನರು ಸ್ಥಳಾಂತರಗೊಂಡಿದ್ದಾರೆ. (ನಾವು) ಪ್ರಸ್ತುತ ಸರ್ಕಾರದ ಇತರ ಏಜೆನ್ಸಿಗಳು ಮತ್ತು ಸಮುದಾಯ ನಾಯಕತ್ವದೊಂದಿಗೆ ಪೀಡಿತ ಜನರಿಗೆ ಹೇಗೆ ಸಹಾಯ ಕೆಲಸ ಮಾಡಲಾಗುತ್ತಿದೆ ಎಂದು ಅವರು ಹೇಳಿದರು. ಶನಿವಾರ, ಭೂಕುಸಿತವನ್ನು ನಿರ್ವಹಿಸುವ ಕಂಪಾಲಾ ಕ್ಯಾಪಿಟಲ್ ಸಿಟಿ ಅಥಾರಿಟಿ ಇಬ್ಬರು ಮಕ್ಕಳು ಸೇರಿದಂತೆ ಎಂಟು ಜನರ ಸಾವಿನ ಸಂಖ್ಯೆಯನ್ನು ನೀಡಿದೆ. ಇಂದು ಆ ಸಂಖ್ಯೆ 14ಕ್ಕೆ ಏರಿಕೆಯಾಗಿದೆ.



# ಆಫ್ರಿಕನ್ ದೇಶಗಳಲ್ಲಿ ಮಾರಣಾಂತಿಕ Mpox ವೈರಸ್ ಆತಂಕ

**ನವದೆಹಲಿ:** ಮಾರಣಾಂತಿಕ ಎಂಪೋಕ್ಸ್ ವೈರಸ್ ಆಫ್ರಿಕಾದ ದೇಶಗಳಲ್ಲಿ ಹರಡುತ್ತಿದೆ. ವಿಶ್ವ ಆರೋಗ್ಯ ಸಂಸ್ಥೆ ಅಂತಾರಾಷ್ಟ್ರೀಯ ಆರೋಗ್ಯ ತುರ್ತು ಪರಿಸ್ಥಿತಿ ಘೋಷಿಸಲು ಚಿಂತನೆ ನಡೆಸಿದೆ. ಎಂಪಾಕ್ಸ್ ವೈರಸ್ ಏಕಾಏಕಿ: ಆಫ್ರಿಕನ್ ದೇಶಗಳಲ್ಲಿ ಎಂಪಾಕ್ಸ್ ವೈರಸ್ ಹರಡುವುದರ ವಿರುದ್ಧ ಅಕಾಡೆಮಿಕ್ ಜರ್ನಲ್ ಸೈನ್ಸ್ ಎಚ್ಚರಿಕೆ ನೀಡಿದೆ. ಡೆಮಾಕ್ರಟಿಕ್ ರಿಪಬ್ಲಿಕ್ ಆಫ್ ಕಾಂಗೋ (ಡಿಆರ್ಸಿ) ಯಲ್ಲಿ ಮೊದಲು ವರದಿಯಾದ ಎಂಪಾಕ್ಸ್ ವೈರಸ್ ಉಗಾಂಡಾ ಮತ್ತು ಕೀನ್ಯಾಕ್ಕೆ ಹರಡಿತು ಮತ್ತು ಈಗ ಖಂಡದಾದ್ಯಂತ ಹರಡಲು ಹೆದರುತ್ತಿದೆ.



ಇದಾದ ಕೆಲವೇ ದಿನಗಳಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಕೂಡ ಶಂಕಿತ ಎಂಪಾಕ್ಸ್ ವೈರಸ್ ಹರಡುವಿಕೆಯ ಬಗ್ಗೆ ಹೆಚ್ಚುತ್ತಿರುವ ಸಂಕಟವನ್ನು ವ್ಯಕ್ತಪಡಿಸಿತು. ಡಬ್ಲ್ಯುಎಚ್ಒ ಅಂತರರಾಷ್ಟ್ರೀಯ ಆರೋಗ್ಯ ತುರ್ತುಸ್ಥಿತಿಯನ್ನು ಘೋಷಿಸುವ ಸಾಧ್ಯತೆಯಿದೆ. ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ ಜಾಗತಿಕ ಆರೋಗ್ಯ ತುರ್ತುಸ್ಥಿತಿಯನ್ನು ಘೋಷಿಸುವ ಅಗತ್ಯವಿದೆಯೇ ಎಂದು ನಿರ್ಧರಿಸಲು ಅಂತರರಾಷ್ಟ್ರೀಯ ಆರೋಗ್ಯ ನಿಯಂತ್ರಣ ತುರ್ತು ಸಮಿತಿಯನ್ನು ರಚಿಸಲು ಯೋಚಿಸುತ್ತಿರುವುದಾಗಿ ಡಬ್ಲ್ಯುಎಚ್ಒ ಮಹಾನಿರ್ದೇಶಕ ಟೆಡ್ರೊಸ್ ಅಧಾನೊಮ್ ಘೆಬ್ರೆಯೆಸಸ್ ಎಕ್ಸ್‌ನಲ್ಲಿ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಡಬ್ಲ್ಯುಎಚ್ಒ ಮಹಾನಿರ್ದೇಶಕರು ಅದೇ ಪೋಸ್ಟ್‌ನಲ್ಲಿ ತಡೆಗಟ್ಟುವಿಕೆಯನ್ನು ಹೆಚ್ಚಿಸಲು ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದು ಹೇಳಿದರು.

ಆಫ್ರಿಕನ್ ಒಕ್ಕೂಟದ ಆರೋಗ್ಯ ಸಂಸ್ಥೆಯಾದ ಆಫ್ರಿಕಾ ಸೆಂಟರ್ಸ್ ಫಾರ್ ಡಿಸೀಸ್ ಕಂಟ್ರೋಲ್ ಅಂಡ್ ಪ್ರಿವೆನ್ಷನ್ ಸಹಯೋಗದೊಂದಿಗೆ ಪ್ರಸರಣ. ಎಂಪಾಕ್ಸ್ ವೈರಸ್ ಹರಡುವಿಕೆಯನ್ನು ತಡೆಗಟ್ಟಲು ಎಲ್ಲಾ ಕ್ರಮಗಳನ್ನು ತರಲು ಹಣದ ಕೊರತೆಯನ್ನು ಅವರು ಒತ್ತಿಹೇಳಿದರು. ಆಫ್ರಿಕನ್ ಯೂನಿಯನ್ (ಎಯು) ನ ಖಾಯಂ ಪ್ರತಿನಿಧಿಗಳ ಸಮಿತಿಯು ಆಫ್ರಿಕಾ ಸೆಂಟರ್ಸ್ ಫಾರ್ ಡಿಸೀಸ್ ಕಂಟ್ರೋಲ್ ಅಂಡ್ ಪ್ರಿವೆನ್ಷನ್ಗೆ ಅಸ್ತಿತ್ವದಲ್ಲಿರುವ ಕೋವಿಡ್ ನಿಧಿಯಿಂದ 10.4 ಮಿಲಿಯನ್ ಡಾಲರ್ ಬಿಡುಗಡೆ ಮಾಡಿದೆ.

# ಉದ್ಧವ್ ಠಾಕ್ರೆ ಮೇಲೆ ಸಗಣಿ ಎಸೆದ ರಾಜ್ ಠಾಕ್ರೆ ಬೆಂಬಲಿಗರು!



**ಮಹಾರಾಷ್ಟ್ರ:** ಮಹಾ ನವನಿರ್ಮಾಣ ಸೇನೆಯ ಕಾರ್ಯಕರ್ತರು ತೆಂಗಿನಕಾಯಿ ಮತ್ತು ಸೆಗಣಿಯಿಂದ ದಾಳಿ ಮಾಡಿದ್ದಾರೆ.

ಮಹಾ ನವನಿರ್ಮಾಣ ಸೇನಾ ಮುಖ್ಯಸ್ಥ ರಾಜ್ ಠಾಕ್ರೆ ಅವರ ಕಾರಿನ ಮೇಲೆ ಅಡಿಕೆ ದಾಳಿ ನಡೆದ ಬಳಿಕ ಈ ದಾಳಿ ನಡೆದಿದೆ.

ಉದ್ಧವ್ ಠಾಕ್ರೆ ಮೇಲಿನ ದಾಳಿಗೆ ಸಂಬಂಧಿಸಿದಂತೆ 20 ಕ್ಕೂ ಹೆಚ್ಚು ಜನರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಶಿವಸೇನೆ (ಯುಬಿಟಿ) ಮುಖ್ಯಸ್ಥ ಉದ್ಧವ್ ಠಾಕ್ರೆ, ಅವರ ಬೆಂಗಾವಲು ಪಡೆಗೆ ಎಂಎನ್‌ಎಸ್ ಕಾರ್ಯಕರ್ತರು ತೆಂಗಿನಕಾಯಿ ಮತ್ತು ಗೋವಿನ ಸಗಣಿಯಿಂದ ದಾಳಿ ಮಾಡಿದ್ದಾರೆ. ರಾಜ್ ಠಾಕ್ರೆ, ಅವರ ಕಾರಿನ ಮೇಲೆ ಅಡಿಕೆ ದಾಳಿ ನಡೆಸಿದ ಘಟನೆಗೆ ಪ್ರತಿಯಾಗಿ ಇದು ನಡೆದಿದೆ ಎಂದು ಎಂಎನ್‌ಎಸ್ ಹೇಳಿದೆ.

ರಾಜ್ ಠಾಕ್ರೆ, ಅವರ ಬೆಂಗಾವಲು ಪಡೆ ಬೀಡ್ ನಗರದಲ್ಲಿ ಹೋಗುತ್ತಿದ್ದಾಗ ಶಿವಸೇನೆ (ಯುಬಿಟಿ)ಗೆ ಸೇರಿದವರೆಂದು ಶಂಕಿಸಲಾದ ಕೆಲವು ಕಾರ್ಯಕರ್ತರು ವೀಳ್ಯದೆಲೆ ಎಸೆದಿದ್ದರು. ಈ ಪ್ರಕರಣದಲ್ಲಿ ನಾಲ್ವರು ಶಿವಸೇನೆಯ (ಯುಬಿಟಿ) ಕಾರ್ಯಕರ್ತರನ್ನು ಬಂಧಿಸಲಾಗಿತ್ತು.

ತಮ್ಮ ಮರಾಠವಾಡ ಪ್ರವಾಸಕ್ಕೆ ಅಡ್ಡಿಪಡಿಸಲು ಪ್ರಯತ್ನಿಸಿದರೆ ಶಿವಸೇನೆ (ಯುಬಿಟಿ) ಮತ್ತು ಎನ್ಸಿಪಿ (ಶರತ್ ಪವಾರ್) ಮಹಾರಾಷ್ಟ್ರದಲ್ಲಿ ಒಂದೇ ಒಂದು ರ್‍ಯಾಲಿ ನಡೆಸಲು ಸಾಧ್ಯವಾಗುವುದಿಲ್ಲ ಎಂದು ರಾಜ್ ಠಾಕ್ರೆ ಎಚ್ಚರಿಕೆ ನೀಡಿದ್ದರು.

# ಬಾಂಗ್ಲಾದೇಶದಲ್ಲಿ ಅರಾಜಕತೆ ಸೃಷ್ಟಿಯಾಗಲು ಅಮೆರಿಕಾ ಷಡ್ಯಂತ್ರ ಕಾರಣ: ಹಸೀನಾ



**ಬಾಂಗ್ಲಾ:** ಮೀಸಲಾತಿಯ ಕಾರಣದಿಂದಾಗಿ ಬಾಂಗ್ಲಾದೇಶದಲ್ಲಿ ಶುರುವಾದ ಪ್ರತಿಭಟನೆ ಹಿಂಸಾತ್ಮಕ ರೂಪ ಪಡೆದು 500ಕ್ಕೂ ಅಧಿಕ ಮಂದಿ ಮೃತಪಟ್ಟಿದ್ದಾರೆ. ಘಟನೆಯ ಬಳಿಕ ಪ್ರಧಾನಿ ಶೇಖ್ ಹಸೀನಾ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ಭಾರತಕ್ಕೆ ಬಂದಿದ್ದಾರೆ. ಈ ಮಧ್ಯೆ ಬಾಂಗ್ಲಾದೇಶದಲ್ಲಿ ಅರಾಜಕತೆ ಸೃಷ್ಟಿಯಾಗಲು ಅಮೆರಿಕಾ ಷಡ್ಯಂತ್ರ ಕಾರಣ ಅಂತ ಹಸೀನಾ ಆರೋಪ ಮಾಡಿದ್ದಾರೆ. ಪ್ರಧಾನಿ ಸ್ಥಾನದಿಂದ ಕೆಳಗಿಳಿದಿರುವ, ಭಾರತದಲ್ಲಿ ಆಶ್ರಯ ಪಡೆದಿರುವ ಬಾಂಗ್ಲಾ ಮಾಜಿ ಪ್ರಧಾನಿ ಶೇಖ್ ಹಸೀನಾ, ಅಮೆರಿಕ ವಿರುದ್ಧ ದೊಡ್ಡ ಆರೋಪ ಮಾಡಿದ್ದಾರೆ. ಬಾಂಗ್ಲಾದಲ್ಲಿ ಅರಾಜಕತೆ ಸೃಷ್ಟಿಯಾಗಲು ಹಾಗೂ ಪ್ರಧಾನಿ ಸ್ಥಾನದಿಂದ ತಾವು ಕೆಳಗಿಳಿಯಲು ಅಮೆರಿಕಾ ಷಡ್ಯಂತ್ರವೇ ಕಾರಣ ಎಂದಿದ್ದಾರೆ.

ಎಕನಾಮಿಕ್ ಟೈಮ್ಸ್‌ಗೆ ಪ್ರತಿಕ್ರಿಯಿಸಿರೋ ಶೇಕ್ ಹಸೀನಾ, ನಾನು ಸೇಂಟ್ ಮಾರ್ಟಿನ್ ದ್ವೀಪವನ್ನು ಬಿಟ್ಟುಕೊಟ್ಟಿದ್ದರೆ ಮತ್ತು ಬಂಗಾಳಕೊಲ್ಲಿಯ ಮೇಲೆ ಅಮೆರಿಕದ ಹಿಡಿತಕ್ಕೆ ಅವಕಾಶ ನೀಡಿದ್ದರೇ ನಾನು ಅಧಿಕಾರದಲ್ಲಿ ಉಳಿಯಬಹುದಿತ್ತು ಎಂದಿದ್ದಾರೆ. ಜೊತೆಗೆ . ನಾನು ದೇಶದಲ್ಲಿಯೇ ಉಳಿದಿದ್ದರೇ ಮತ್ತಷ್ಟು ಹಿಂಸಾಚಾರ ನಡೆಯುತ್ತಿತ್ತು. ಆದ್ದರಿಂದ ರಾಜೀನಾಮೆ ನೀಡಿದೆ ಎಂದು ಶೇಖ್ ಹಸೀನಾ ದೇಶದ ಜನರ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ.



# ನಾನು ಶೀಘ್ರದಲ್ಲೇ ಹಿಂತಿರುಗುತ್ತೇನೆ: ಮಾಜಿ ಪ್ರಧಾನಿ ಶೇಖ್ ಹಸೀನಾ

**ಬಾಂಗ್ಲಾದೇಶ:** ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಪ್ರಸ್ತುತ ಭಾರತದಲ್ಲಿದ್ದಾರೆ. ಸರ್ಕಾರಿ ಉದ್ಯೋಗಗಳಲ್ಲಿನ ಕೋಟಾ ವಿರುದ್ಧ ವಾರಗಳ ಹಿಂಸಾತ್ಮಕ ಸಾಮೂಹಿಕ ಪ್ರತಿಭಟನೆಗಳ ನಂತರ ಅವರು ಆಗಸ್ಟ್ 5 ರಂದು ತಮ್ಮ ಹುದ್ದೆಗೆ ರಾಜೀನಾಮೆ ನೀಡಿ ಬಾಂಗ್ಲಾದೇಶದಿಂದ ಪಲಾಯನ ಮಾಡಿದ್ದರು.

ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ 'ಶೀಘ್ರದಲ್ಲೇ ಹಿಂತಿರುಗಲಿದ್ದೇನೆ' ಎಂದು ಭಾನುವಾರ (ಆಗಸ್ಟ್ 11) ಪ್ರಕಟವಾದ ಸುದ್ದಿ ವರದಿಯ ಪ್ರಕಾರ ಹೇಳಿದ್ದಾರೆ. ಮಾಜಿ ಪ್ರಧಾನಿಯವರು ರಾಜೀನಾಮೆ ನೀಡುವ ಮೊದಲು ಬಾಂಗ್ಲಾದೇಶದ ಪ್ರಸ್ತುತ ಪರಿಸ್ಥಿತಿಯಲ್ಲಿ ಯುನೈಟೆಡ್ ಸ್ಟೇಟ್ಸ್ ಭಾಗಿಯಾಗಿತ್ತು ಎಂದು ಆರೋಪಿಸಿದ್ದಾರೆ. ''ಅನೇಕ ನಾಯಕರು ಕೊಲ್ಲಲ್ಪಟ್ಟಿದ್ದಾರೆ, ಕಾರ್ಮಿಕರಿಗೆ ಕಿರುಕುಳ ನೀಡುತ್ತಿದ್ದಾರೆ ಮತ್ತು ಅವರ ಮನೆಗಳನ್ನು ವಿಧ್ವಂಸಕತೆ ಮತ್ತು ಬೆಂಕಿ ಹಚ್ಚಲಾಗಿದೆ ಎಂಬ ಸುದ್ದಿಯನ್ನು ಸ್ವೀಕರಿಸಿದಾಗ ನನ್ನ ಹೃದಯವು ಅಳುತ್ತದೆ. ಸರ್ವಶಕ್ತನಾದ ಅಲ್ಲಾಹನ ಕೃಪೆಯೊಂದಿಗೆ, ನಾನು ಶೀಘ್ರದಲ್ಲೇ ಹಿಂತಿರುಗುತ್ತೇನೆ. ಅವಾಮಿ ಲೀಗ್ ಮತ್ತೆ ಮತ್ತೆ ನಿಂತಿದೆ. ನಾನು ನನ್ನ ತಂದೆ ಮತ್ತು ಕುಟುಂಬವು ತಮ್ಮ ಪ್ರಾಣವನ್ನು ಅರ್ಪಿಸಿದ ದೇಶಕ್ಕಾಗಿ ಬಾಂಗ್ಲಾದೇಶದ ಭವಿಷ್ಯಕ್ಕಾಗಿ ಶಾಶ್ವತವಾಗಿ ಪ್ರಾರ್ಥಿಸುತ್ತೇನೆ ಎಂದು ಎಕನಾಮಿಕ್ ಟೈಮ್ಸ್ ಉಲ್ಲೇಖಿಸಿದಂತೆ ಹಸೀನಾ ತನ್ನ ಸಂದೇಶದಲ್ಲಿ ಹೇಳಿದ್ದಾರೆ.ನಾನು ಶವಗಳ ಮೆರವಣಿಗೆಯನ್ನು ನೋಡಬೇಕಾಗಿಲ್ಲ ಎಂದು ನಾನು ರಾಜೀನಾಮೆ ನೀಡಿದ್ದೇನೆ. ಅವರು ವಿದ್ಯಾರ್ಥಿಗಳ ಮೃತ ದೇಹಗಳ ಮೇಲೆ ಅಧಿಕಾರಕ್ಕೆ ಬರಲು ಬಯಸಿದ್ದರು, ಆದರೆ ನಾನು ಅದಕ್ಕೆ ಅವಕಾಶ ನೀಡಲಿಲ್ಲ, ನಾನು ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೇನೆ. ಸೇಂಟ್ ಮಾರ್ಟಿನ್ ದ್ವೀಪದ ಸಾರ್ವಭೌಮತ್ವವನ್ನು ಬಿಟ್ಟುಕೊಟ್ಟಿದ್ದರೆ ಮತ್ತು ಬಂಗಾಳಕೊಲ್ಲಿಯ ಮೇಲೆ ಅಮೆರಿಕದ ಹಿಡಿತಕ್ಕೆ ಅವಕಾಶ ನೀಡಿದ್ದರೆ ನಾನು ಅಧಿಕಾರದಲ್ಲಿ ಉಳಿಯಬಹುದಿತ್ತು. ನನ್ನ ನೆಲದ ಜನರಲ್ಲಿ ನಾನು ಬೇಡಿಕೊಳ್ಳುತ್ತೇನೆ, 'ದಯವಿಟ್ಟು ಮೂಲಭೂತವಾದಿಗಳಿಂದ ಕುಶಲತೆಯಿಂದ ವರ್ತಿಸಬೇಡಿ' ಎಂದು ಅವರು ಹೇಳಿದರು.

ಪುಟ 8
ಸೋಮವಾರ 12.8.2024
ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಶಿವಣ್ಣ ನಟನೆಯ 'ಭೈರತಿ ರಣಗಲ್' ಟೈಟಲ್ ಸಾಂಗ್ ರಿಲೀಸ್



ಗೀತಾ ಪಿಕ್ಚರ್ಸ್ ಲಾಂಛನದಲ್ಲಿ ಗೀತಾ ಶಿವರಾಜಕುಮಾರ್ ಅವರು ನಿರ್ಮಿಸಿರುವ, ನರ್ತನ್ ನಿರ್ದೇಶನದಲ್ಲಿ ಕರುನಾಡ ಚಕ್ರವರ್ತಿ ಶಿವರಾಜಕುಮಾರ್ ನಾಯಕರಾಗಿ ನಟಿಸಿರುವ ಬಹು ನಿರೀಕ್ಷಿತ ''ಭೈರತಿ ರಣಗಲ್'' ಚಿತ್ರದ ಶೀರ್ಷಿಕೆ ಗೀತೆ ಬಿಡುಗಡೆಯಾಗಿದೆ.

ಕಿನ್ನಾಳ್ ರಾಜ್ ಅವರು ಬರೆದಿರುವ ''ಇತಿಹಾಸವೇ ನಿಬ್ಬೆರಗಿಸುವ ಎತ್ತಿ ಹಿಡಿಯುವ ಮೈಲಿಗಲ್ಲು'' ಎಂಬ ಭೈರತಿ ರಣಗಲ್ ಸಿನಿಮಾದ ಶೀರ್ಷಿಕೆ ಗೀತೆಗೆ ಅಭಿಮಾನಿಗಳು ಫಿದಾ ಆಗಿದ್ದಾರೆ. ಖ್ಯಾತ ಸಂಗೀತ ನಿರ್ದೇಶಕ ರವಿ ಬಸ್ರೂರು ಸಂಗೀತ ನೀಡಿದ್ದಾರೆ. ಸಂತೋಷ್ ವೆಂಕಿ ಹಾಡಿದ್ದಾರೆ. ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿರುವ ಈ ಹಾಡಿಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ.

ನರ್ತನ್ ಹಾಗೂ ಶಿವಣ್ಣ ಅವರ ಕಾಂಬಿನೇಶನ್ ನಲ್ಲಿ ಬಂದಿದ್ದ ''ಮಫ್ತಿ'' ಚಿತ್ರದ ಪ್ರೀಕ್ವೆಲ್ ಆಗಿರುವ ''ಭೈರತಿ ರಣಗಲ್'' ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ಈಗಾಗಲೇ ಬಿಡುಗಡೆಯಾಗಿರುವ ಟೀಸರ್ ಹಾಗೂ ಹಾಡಿನ ಮೂಲಕ ಜನಪ್ರಿಯವಾಗಿರುವ ಈ ಚಿತ್ರದ ಬಿಡುಗಡೆಗೆ ಅಭಿಮಾನಿಗಳು ಕಾತುರದಿಂದ ಕಾಯುತ್ತಿದ್ದಾರೆ. ಬಹು ನಿರೀಕ್ಷಿತ ಈ ಚಿತ್ರ ಸೆಪ್ಟೆಂಬರ್ ನಲ್ಲಿ ತೆರೆಗೆ ಬರಲಿದೆ.

ಶಿವರಾಜಕುಮಾರ್ ಅವರಿಗೆ ನಾಯಕಿಯಾಗಿ ರುಕ್ಮಿಣಿ ವಸಂತ್ ಅಭಿನಯಿಸಿದ್ದಾರೆ. ನವೀನ್ ಕುಮಾರ್ ಛಾಯಾಗ್ರಹಣ, ಆಕಾಶ್ ಹಿರೇಮಠ ಸಂಕಲನ, ಗುಣ ಕಲಾ ನಿರ್ದೇಶನ ಹಾಗೂ ದಿಲೀಪ್ ಸುಬ್ರಹ್ಮಣ್ಯ, ಚೇತನ್ ಡಿಸೋಜ ಸಾಹಸ ನಿರ್ದೇಶನ ''ಭೈರತಿ ರಣಗಲ್'' ಚಿತ್ರಕ್ಕಿದೆ.



# ತರುಣ್-ಸೋನಲ್ ಮದುವೆಯಲ್ಲಿ ತಾರಾ ಕಲರವ

ಮತ್ತೊಂದು ಸ್ಟಾರ್ ಜೋಡಿಗೆ ಸಾಕ್ಷಿಯಾಗಿತ್ತು ಸ್ಯಾಂಡಲ್‌ವುಡ್. ತರುಣ್ ಮತ್ತು ಸೋನಲ್ ಆಪ್ತರು ಹಾಗೂ ಬಹುತೇಕ ಸ್ಟಾರ್ ನಟರು ಈ ಮದುವೆಗೆ ಬಂದು ನೂತನ ದಂಪತಿಗೆ ಶುಭ ಹಾರೈಸಿದರು. ಜೊತೆಗೆ ಪರಭಾಷಾ ಕೆಲ ನಟ ನಟಿಯರು ಕೂಡ ಆಗಮಿಸಿದ್ದರು. ತಾರಾ ಕಲರವವೇ ಅಲ್ಲಿ ನೆರದಿತ್ತು.

ನಟರಾದ ಶಿವರಾಜ್ ಕುಮಾರ್, ಗಣೇಶ್, ಶರಣ್, ಜಗಪತಿ ಬಾಬು, ನೆನಪಿರಲಿ ಪ್ರೇಮ್, ಅವಿನಾಶ, ಗಾಯಕ ವಿಜಯ ಪ್ರಕಾಶ್, ನಟಿಯರಾದ ತಾರಾ , ಗಿರಿಜಾ ಲೋಕೇಶ್, ಶ್ರುತಿ, ಮೇಘನಾ, ಮೇಘಾ ಶೆಟ್ಟಿ, ರಚಿತಾ ರಾಮ್, ಸುಧಾರಾಣಿ, ನಿಶ್ವಿಕಾ ನಾಯ್ಡು, ಪದ್ಮರಾಜ್ ರಾವ್ ಸಂಗೀತ ನಿರ್ದೇಶಕರಾದ ಹಂಸಲೇಖ, ಹರಿಕೃಷ್ಣ, ಸಾಧು ಕೋಕಿಲಾ ಸೇರಿದಂತೆ ಸಾಕಷ್ಟು ತಾರಾಯರು ಈ ಮದುವೆಗೆ ಸಾಕ್ಷಿಯಾಗಿದ್ದರು.

ಗುರು ಹಿರಿಯರ ಸಮ್ಮುಖದಲ್ಲಿ ಇಂದು ನಟಿ ಸೋನಲ್ ಮತ್ತು ನಿರ್ದೇಶಕ ತರುಣ್ ಸುಧೀರ್ ಸಪ್ತಪದಿ ತುಳಿದಿದ್ದಾರೆ. ಈ ಮದುವೆಗೆ ಅನೇಕ ಗಣ್ಯರು ಸಾಕ್ಷಿಯಾಗಿದ್ದರು. ನಟ ನಟಿಯರು, ತಂತ್ರಜ್ಞರು ಮತ್ತು ಪರ ಭಾಷಾ ನಟರೂ ಆಗಮಿಸಿದ್ದರು. ಜೊತೆಗೆ ರಾಜಕಾರಣಗಳು ಕೂಡ ಮದುವೆಗೆ ಸಾಕ್ಷಿಯಾಗಿದ್ದು ವಿಶೇಷ. ಹಾಗಾಗಿ ಸಹಜವಾಗಿಯೇ ಹೊಸ ದಂಪತಿಗೆ ಸಂಭ್ರಮವಾಗಿದೆ.

ಮದುವೆ ಕುರಿತಂತೆ ನಟಿ ಸೋನಲ್ ಮಾತನಾಡುತ್ತಾ, 'ಹೊಸ ಜೀವನ ಶುರು ಮಾಡ್ತಿದ್ದೀವಿ ತುಂಬಾ ಖುಷಿ ಇದೆ. ದರ್ಶನ್ ಸರ್ ನಮ್ ಜೀವನದಲ್ಲಿ ಇಂಪಾರ್ಟೆಂಟ್ ರೋಲ್ ಪ್ಲೇ ಮಾಡಿದ್ದಾರೆ. ಅವರನ್ನು ಯಾವತ್ತೂ ಮರೆಯಲ್ಲ. ನನ್ನ ಹುಟ್ಟು ಹಬ್ಬದ ದಿನದಂದೇ ನಾನು ಹೊಸ ಜೀವನಕ್ಕೆ ಕಾಲಿಡ್ತಾ ಇರೋದು ಅತ್ಯಂತ ಸಂಭ್ರಮ ತಂದಿದೆ' ಅಂದಿದ್ದಾರೆ.





ನಿರ್ದೇಶಕ ತರುಣ್ ಸುಧೀರ್ ಮದುವೆ ಆಗೋಕೆ ಕಾರಣವೇ ನಟ ದರ್ಶನ್. ಅಂದುಕೊಂಡಂತೆ ಆಗಿದ್ದರೆ ದರ್ಶನ್ ಮುಂದೆ ನಿಂತು ಈ ಜೋಡಿಯ ಮದುವೆ ಮಾಡಬೇಕಿತ್ತು. ಇವರ ಮದುವೆ ನಿಶ್ಚಿಯ ಮಾಡಿ ಪರಪ್ಪನ ಅಗ್ರಹಾರ ಜೈಲು ಸೇರಿಕೊಂಡರು ದರ್ಶನ್. ಈ ಮದುವೆಗೆ ದರ್ಶನ್ ಬರ್ತಾರೆ ಅನ್ನೋ ಮಾತು ಸುಳ್ಳಾಯಿತು ಹಾಗಾಗಿ ಅವರ ಅನುಪಸ್ಥಿತಿ ಬೇಸರ ತರಿಸಿದೆ ಎಂದಿದ್ದಾರೆ ತರುಣ್ ಸುಧೀರ್.

ಮದುವೆಯ ಈ ಸಂಭ್ರಮದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ತರುಣ್, 'ಹೊಸ ಜೀವನ ಹೊಸ ಹುರುಪಿದೆ. ಇಷ್ಟು ದಿನ ಕಾದಿದ್ದಕ್ಕೂ ಬೆಸ್ಟ್ ಕೊಟ್ಟಿದಾರೆ ದೇವ್ರು. ತುಂಬಾ ಜನ ಬಂದು ವಿಶ್ ಮಾಡಿದ್ರು, ಎಲ್ಲರೂ ತಮ್ಮನ ಥರ ಕುಟುಂಬದ ಥರ ಬಂದು ಹಾರೈಸಿದ್ರು, ಎಂದಿದ್ದಾರೆ. ದರ್ಶನ್ ಅನುಪಸ್ಥಿತಿ ಬಗ್ಗೆಯೂ ಮಾತನಾಡಿದ ತರುಣ್, 'ಲಗ್ನ ಪತ್ರಿಕೆ ಬರೆಸುವ ಮುಂಚೆ ಡೇಟ್ ಕನ್ಫರ್ಮ್ ಆಗಿತ್ತು. ಡೇಟ್ ಚೇಂಜ್ ಮಾಡ್ಬೇಡ ಮದ್ವೆ ಮಾಡ್ಕೊ ಅಂದ್ರು ದರ್ಶನ್. ಆಗಸ್ಟ್ 11 ಡೇಟ್ ಕೊಟ್ಟಿದ್ವಿ. ಅವರು ಹೇಳಿದಂತೆ ಮದುವೆ ಆಗ್ತಿದ್ದೇವೆ. ದರ್ಶನ್ ಅವ್ರ ಅನುಪಸ್ಥಿತಿ ಬೇಸರ ಅನ್ನಿಸ್ತಿದೆ' ಎಂದು ದರ್ಶನ್ ಬಗ್ಗೆ ಮಾತಾಡ್ತಾ ಭಾವುಕರಾದ ತರುಣ್ ಸುಧೀರ್.

ನಿರ್ದೇಶಕ ತರುಣ್ ಸುಧೀರ್ ಮತ್ತು ನಟಿ ಸೋನಲ್ ಮದುವೆ ಬೆಂಗಳೂರಿನ ಪೂರ್ಣಿಮಾ ಪ್ಯಾಲೇಸ್‌ನಲ್ಲಿ ನಡೆಯಿತು. ಚಿತ್ರರಂಗದ ಅನೇಕ ಗಣ್ಯರ ಮತ್ತು ಕುಟುಂಬದ ಸಮ್ಮುಖದಲ್ಲಿ ಈ ಜೋಡಿ ಹೊಸ ಜೀವನಕ್ಕೆ ಕಾಲಿಟಿತು. ತಾಳಿ ಕಟ್ಟೋ ವೇಳೆ ನಟಿ ಸೋನಲ್ ಭಾವುಕರಾಗಿದ್ದರು.

# ಓ ಏ ಲಡ್ಕಿ' ಆಲ್ಬಮ್ ಸಾಂಗ್ ರಿಲೀಸ್ ಮಾಡಿದ ನಟಿ ರಾಗಿಣಿ

ಇತ್ತೀಚಿನ ದಿನಗಳಲ್ಲಿ ಆಲ್ಬಂ ಸಾಂಗ್ ಹೆಚ್ಚು ಜನಪ್ರಿಯವಾಗುತ್ತಿದೆ. ಅಧೀರ ಸಂತು ಅವರು ಬಾಲಿವುಡ್ ಸ್ಟೈಲ್ ನಲ್ಲಿ ಕನ್ನಡ ಆಲ್ಬಂ ಸಾಂಗ್ ಮಾಡಿದ್ದಾರೆ. ಅದರ ಹೆಸರು ಕೂಡ ವಿಭಿನ್ನವಾಗಿದೆ. ತುಂಬಾ ಸ್ಟೈಲಿಶ್ ಆಗಿ ಮೂಡಿಬಂದಿರುವ 'ಓ ಏ ಲಡ್ಕಿ' ಎಂಬ ಕ್ಯಾಚಿ ಟೈಟಲ್ ಹೊಂದಿರೋ ಈ ಹಾಡನ್ನು ನಟಿ ರಾಗಿಣಿ ದ್ವಿವೇದಿ ಅವರು ಬಿಡುಗಡೆ ಮಾಡಿದರು. ವಿಶೇಷವಾಗಿ ಈ ಹಾಡಲ್ಲಿ ಉಗ್ರಂ ರವಿ ಖಳನಾಯಕನಾಗಿ ನಟಿಸಿದ್ದಾರೆ. ಎನ್ನಾರೈ ಯುವತಿಯಾಗಿ ಅಮೃತ, ಡಿಲವರಿ ಬಾಯ್ ಆಗಿ ಸಮೀರ್ ನಗರದ್ ಅಭಿನಯಿಸಿದ್ದಾರೆ. ಈ ಹಾಡಿನ ಜೊತೆಗೆ ಇದರ ಲಿರಿಕಲ್ ವಿಡಿಯೋ ಹಾಗೂ ರೀಮಿಕ್ಸ್ ವರ್ಷನ್ ಪ್ರದರ್ಶಿಸಲಾಯಿತು. ನಿರ್ದೇಶಕ ಅಧೀರ ಸಂತು ಅವರೇ ಈ ಹಾಡಿನ ಸಾಹಿತ್ಯ ರಚಿಸಿ, ತಾವೇ ನಂತರ ಹಾಡಿದ್ದಾರೆ. ಆಕಾಶ್ ಆಡಿಯೋ ಮೂಲಕ 'ಓ ಏ ಲಡ್ಕಿ' ಹಾಡು ಬಿಡುಗಡೆಯಾಗಿದೆ.

ಈ ಹಾಡಲ್ಲಿ ಸಾಮಾನ್ಯ ಡೆಲಿವರಿ ಬಾಯ್ ಒಬ್ಬ ತನ್ನ ನೃತ್ಯ ಪ್ರತಿಭೆಯ ಮೂಲಕ ಎನ್.ಆರ್.ಐ. ಹುಡುಗಿಯನ್ನು ಹೇಗೆ ಪಟಾಯಿಸಿದ ಎಂಬುದನ್ನು ಹೇಳಲಾಗಿದೆ. ಆ ಡೆಲಿವರಿ ಬಾಯ್ ಒಮ್ಮೆ ಖಳನಾಯಕನಿಗೆ ಡೆಲಿವರಿ ಕೊಡಲು ಬಂದು, ವಾಪಸ್ ಹೋಗುವಾಗ ಖಳನಾಯಕನ ಕಾರಿನಲ್ಲಿ ಕುಳಿತ ಓರ್ವ ಸುಂದರ ಯುವತಿಯನ್ನ ನೋಡುತ್ತಾ ಮೈಮರೆಯುತ್ತಾನೆ. ಅದನ್ನ ಕಂಡ ಖಳನಾಯಕ ಆತನನ್ನ ಗದರಿ ಅವನ ಬಗ್ಗೆ ಕೀಳಾಗಿ ಮಾತಾಡುತ್ತಾನೆ. ಇದನ್ನೇ ಸವಾಲಾಗಿ ಸ್ವೀಕರಿಸಿದ ನಾಯಕ, 5 ನಿಮಿಷದಲ್ಲಿ ಆ ಯುವತಿ ತನ್ನತ್ತ ಓಡಿ ಬರೋಹಾಗೆ ಮಾಡ್ತಿನಿ ಅಂತ ಸವಾಲ್ ಹಾಕಿ, ತನ್ನ ಆಪದ್ಬಾಂಧವನಿಗೆ (ನಿರ್ದೇಶಕ) ಕರೆ ಮಾಡಿ ಸಹಾಯ ಕೋರುತ್ತಾನೆ. ರಾಕ್‌ಸ್ಟಾರ್ ಆಗಿಬಂದ ಡೆಲಿವರಿ ಬಾಯ್, ಕನ್ನಡ ನೆಲ, ಭಾಷೆಯ ತಾಕತ್ತನ್ನ ಹಾಡಿನ ಮೂಲಕ ಹೇಳಿ ಆ ಯುವತಿಯ ಮನಸನ್ನು ಗೆಲ್ಲುತ್ತಾನೆ. ಎಂಎಸ್. ತ್ಯಾಗರಾಜ್ ಈ ಹಾಡಿಗೆ ಮ್ಯೂಸಿಕ್ ಮಾಡಿದ್ದು, ಎಸ್. ಹಾಲೇಶ್ ಇದನ್ನು ಸೆರೆ ಹಿಡಿದಿದ್ದಾರೆ.



ಈ ವಿಶೇಷ ಹಾಡಿನ ಕುರಿತಂತೆ ಮಾತನಾಡಿದ ನಿರ್ಮಾಪಕ, ನಿರ್ದೇಶಕ ಅಧೀರ ಸಂತು, ನಾನು ಇಂಡಸ್ಟ್ರಿಗೆ ಹೊಸಬನೇನಲ್ಲ, ಉಪ್ಪಿ ಅವರ ಐವತ್ತನೇ ಚಿತ್ರವನ್ನು ನಾನೇ ಮಾಡಬೇಕಿತ್ತು. ಅವರು ಕಥೆ ಕೇಳಿ ಒಪ್ಪಿ ಡೇಟ್ಸ್ ಕೂಡ ಕೊಟ್ಟಿದ್ದರು. ಕಾರಣಾಂತರಗಳಿಂದ ಆ ಸಿನಿಮಾ ಡ್ರಾಪ್ ಆಯ್ತು. ಸ್ನೇಹಿತರ ಸಹಕಾರದಿಂದ ಈ ಸಾಂಗ್ ನಿರ್ದೇಶನ ಮಾಡಿದ್ದೇನೆ. ನಟಿ ರಾಗಿಣಿ ಅವರನ್ನೇ ಇನ್ ಸ್ಟೈರ್ ಆಗಿ ತೆಗೆದುಕೊಂಡು ಮಾಡಿದ ಹಾಡಿದು. ಅವರು ಬ್ಯುಸಿ ಇದ್ದದ್ದರಿಂದ ಬೇರೆಯವರ ಕೈಲಿ ಮಾಡಿಸಬೇಕಾಯ್ತು. ಮುಂದೆ ಅವರನ್ನು ಇಟ್ಟುಕೊಂಡು ಇಂಟರ್ ನ್ಯಾಷನಲ್ ಲೆವೆಲ್ ಸಾಂಗ್ ಮಾಡುವ ಯೋಜನೆಯಿದೆ ಎಂದು ಹೇಳಿದರು.

ನಟಿ ರಾಗಿಣಿ ಮಾತನಾಡುತ್ತ, ಸಂತು ನನಗೆ ಬಹಳ ದಿನಗಳಿಂದ ಪರಿಚಯ. ಹಾಡು ತುಂಬಾ ಚೆನ್ನಾಗಿ ಬಂದಿದೆ. ಸಂತು ಅವರ ವಿಜನ್ ತೆರೆಯ ಮೇಲೆ ಕಾಣುತ್ತಿದೆ. ಒಳ್ಳೊಳ್ಳೆ ಲೊಕೇಶನ್ ಗಳಲ್ಲಿ ಹಾಡನ್ನು ಶೂಟ್ ಮಾಡಿದ್ದಾರೆ. ನನಗೂ ಅವರ ಜೊತೆ ಕೆಲಸ ಮಾಡಬೇಕೆಂದು ತುಂಬಾ ಆಸಕ್ತಿಯಿದೆ ಎಂದು ಹೇಳಿದರು. ನಂತರ ಉಗ್ರಂ ರವಿ ಮಾತನಾಡಿ ವಿಲನ್ ಆಗಿದ್ದ ನಾನು ಮೊದಲಬಾರಿಗೆ ಇಂಥ ಹಾಡಲ್ಲಿ ಕಾಣಿಸಿಕೊಂಡಿದ್ದೇನೆ. ಇದರ ಕಾನ್ಸೆಪ್ಟ್ ತುಂಬಾ ಚೆನ್ನಾಗಿದೆ. ಸಂತುಗೆ ಮುಂದೆ ಒಳ್ಳೇ ಫ್ಯೂಚರ್ ಇದೆ ಎಂದು ಹೇಳಿದರು. ಮತ್ತೊಬ್ಬ ಅತಿಥಿಯಾಗಿ ಸುನಿಲ್ ಕಂಬಾರ್ ವೇದಿಕೆಯಲ್ಲಿದ್ದರು. ನಾಯಕ ಸಮೀರ್, ನಾಯಕಿ ಅಮೃತ ಕೂಡ ತಮ್ಮ ಪರಿಚಯ ಮಾಡಿಕೊಂಡರು.

# ಕ್ಷಮಿಸಿ.. ಆದರೆ ನಾವು ನಿಯಮ ಪಾಲಿಸಲೇಬೇಕು

## ಫೋಗಟ್ ಅನರ್ಹತೆ ಬಗ್ಗೆ ಅಂತಾರಾಷ್ಟ್ರೀಯ ಕುಸ್ತಿ ಫೆಡರೇಷನ್ ಪ್ರತಿಕ್ರಿಯೆ



2024ರ ಪ್ಯಾರಿಸ್ ಒಲಿಂಪಿಕ್ ನಿಂದ ಭಾರತದ ಕುಸ್ತಿಪಟು ವಿನೇಶ್ ಫೋಗಟ್ ಅನರ್ಹತೆಗೆ ಸ್ವತಃ ಅಂತಾರಾಷ್ಟ್ರೀಯ ಕುಸ್ತಿ ಫೆಡರೇಷನ್ ಅಧ್ಯಕ್ಷರು ಕ್ಷಮೆಯಾಚಿಸಿದ್ದಾರೆ. ಆದರೆ, ನಾವು ನಿಯಮ ಪಾಲಿಸಲೇಬೇಕು ಎಂದು ತಮ್ಮ ನಿಲುವಿಗೆ ಸ್ಪಷ್ಟನೆ ನೀಡಿದ್ದಾರೆ.

ಕೋರ್ಟ್ ಆಫ್ ಆರ್ಬಿಟ್ರೇಷನ್ ಆಫ್ ಸ್ಪೋರ್ಟ್ ನಲ್ಲಿ ಕುಸ್ತಿಪಟು ವಿನೇಶ್ ಫೋಗಟ್ ಅವರ ವಿಚಾರಣೆಯ ಫಲಿತಾಂಶಕ್ಕಾಗಿ ಭಾರತೀಯರು ಕಾಯುತ್ತಿದ್ದಾರೆ. ಇದೇ ಹೊತ್ತಿನಲ್ಲಿ, ಯುನೈಟೆಡ್ ವರ್ಲ್ಡ್ ವ್ರೆಸ್ಲಿಂಗ್ ಅಧ್ಯಕ್ಷ ನೆನಾದ್ ಲಾಲೋವಿಕ್, ಕುಸ್ತಿಪಟು ತೂಕದ ವಿವಾದಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡಿದ್ದಾರೆ.



ಏನಾಯಿತು ಎಂಬುದರ ಬಗ್ಗೆ ನನಗೆ ತುಂಬಾ ವಿಷಾದವಿದೆ. ಆದರೆ ಕ್ರೀಡಾಪಟುಗಳು ಕ್ರೀಡಾಪಟುಗಳೇ. ತೂಕದ ವಿಚಾರಕ್ಕೆ ಏನೆಲ್ಲಾ ಆಯಿತು ಎಂಬುದು ಎಲ್ಲರಿಗೂ ಗೊತ್ತಿದೆ. ನಮ್ಮ ನಿಯಮಗಳನ್ನು ಅನುಸರಿಸುವುದನ್ನು ಬಿಟ್ಟು ನಮಗೆ ಬೇರೆ ಆಯ್ಕೆಗಳಿಲ್ಲ ಎಂದು ಲಾಲೋವಿಕ್ ಸ್ಪಷ್ಟಪಡಿಸಿದ್ದಾರೆ.

ಕ್ರೀಡಾಪಟುಗಳ ಆರೋಗ್ಯದ ಕಾಳಜಿಯಿಂದಾಗಿ ನಾವು ಆ ನಿಯಮವನ್ನು ಪರಿಚಯಿಸಿದ್ದೇವೆ. ಕ್ರೀಡಾಪಟುಗಳು ಸ್ಪರ್ಧಿಸಲು ತೂಕದ ನಿಯಮಗಳಿಗೆ ಬದ್ಧರಾಗಿದ್ದಾರೆ. ಬಹುಶಃ ನಿಯಮಗಳಲ್ಲಿ ಸ್ವಲ್ಪ ಹೊಂದಾಣಿಕೆಗಳನ್ನು ಮಾಡಬಹುದು. ಆದರೆ ನಾವು ನಿಯಮಗಳನ್ನು ಬದಲಾಯಿಸಲು ಸಾಧ್ಯವಿಲ್ಲ ತಿಳಿಸಿದ್ದಾರೆ.

50 ಕೆಜಿ ಮಹಿಳೆಯರ ಫ್ರೀಸ್ಟೈಲ್ ಕುಸ್ತಿಯಲ್ಲಿ ಚಿನ್ನ, ಬೆಳ್ಳಿ ಮತ್ತು ಕಂಚಿನ ಪದಕಗಳನ್ನು ಈಗಾಗಲೇ ಹಸ್ತಾಂತರಿಸಲಾಗಿದೆ. ತೂಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಈಗಾಗಲೇ ಫೈನಲ್‌ಗೆ ಬಂದಿದ್ದರಿಂದ ಜಂಟಿ-ಬೆಳ್ಳಿಯನ್ನು ನೀಡುವಂತೆ ವಿನೇಶ್ ಮನವಿ ಮಾಡಿದ್ದಾರೆ. ಅದನ್ನು ಸಿಎಎಸ್ ವಿಚಾರಣೆ ಮಾಡುತ್ತಿದೆ. ತೀರ್ಪು ಇನ್ನಷ್ಟೇ ಬರಬೇಕಿದೆ.

# ಸರ್ಕಾರಿ ಕೆಲಸ ತಿರಸ್ಕರಿಸಿದ ಒಲಿಂಪಿಕ್ಸ್ ಶೂಟಿಂಗ್‌ನಲ್ಲಿ ಕಂಚು ಗೆದ್ದ ಸರಬ್ಜೋತ್ ಸಿಂಗ್

10ಮೀ ಏರ್ ಪಿಸ್ತೂಲ್ ಮಿಶ್ರ ತಂಡ ವಿಭಾಗದಲ್ಲಿ ಮನು ಭಾಕರ್ ಜೊತೆಗೂಡಿ ಕಂಚು ಗೆದ್ದಿದ್ದ ಸರಬ್ಜೋತ್ ಸಿಂಗ್, ತಮ್ಮ ಕೈಗೆ ಬಂದ ಸರ್ಕಾರಿ ಕೆಲಸದ ಆಫರ್ ಅನ್ನು ನಿರಾಕರಿಸಿದ್ದಾರೆ.

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಈ ಜೋಡಿ ಕಂಚು ಗೆದ್ದಿತ್ತು. ಪದಕ ಗೆದ್ದು ಭಾರತಕ್ಕೆ ವಾಪಸ್ ಆದ ಸರಬ್ಜೋತ್ ಸಿಂಗ್‌ಗೆ ಹರಿಯಾಣ ಸರ್ಕಾರ ಕೆಲಸ ನೀಡಿತು. ಆದರೆ ಕ್ರೀಡಾಪಟು ಸರ್ಕಾರಿ ಕೆಲಸವನ್ನು ತಿರಸ್ಕರಿಸಿದ್ದಾರೆ. ಅದಕ್ಕೆ ಕಾರಣವನ್ನೂ ಬಹಿರಂಗಪಡಿಸಿದ್ದಾರೆ.

ಸರ್ಕಾರಿ ಉದ್ಯೋಗ ಪಡೆದುಕೊಳ್ಳಲು ಇದು ಸರಿಯಾದ ಸಮಯವಲ್ಲ. ಶೂಟಿಂಗ್‌ನಲ್ಲಿ ಇನ್ನೂ ನಾನು ಗುರಿ ಸಾಧಿಸಿಲ್ಲ. ಇಂತಹ ಸಮಯದಲ್ಲಿ ಶೂಟಿಂಗ್ ನನ್ನ ಪ್ರಮುಖ ಆದ್ಯತೆ ಎಂದು ಸಿಂಗ್ ತಿಳಿಸಿದ್ದಾರೆ.

ಕೆಲಸ ಚೆನ್ನಾಗಿದೆ. ಆದರೆ ನಾನು ಈಗ ಅದನ್ನು ತೆಗೆದುಕೊಳ್ಳುವುದಿಲ್ಲ. ನಾನು ಮೊದಲು ನನ್ನ ಶೂಟಿಂಗ್ ಮೇಲೆ ಗಮನ ಕೇಂದ್ರೀಕರಿಸಲು ಬಯಸುತ್ತೇನೆ. ನನ್ನ ಕುಟುಂಬದವರೂ ನನಗೆ ಯೋಗ್ಯವಾದ ಕೆಲಸ ಕೊಡಿ ಎಂದು ಕೇಳುತ್ತಿದ್ದಾರೆ.



ಆದರೆ ನಾನು ಶೂಟಿಂಗ್ ಮುಂದುವರಿಸಲು ಬಯಸುತ್ತೇನೆ. ನಾನು ತೆಗೆದುಕೊಂಡ ನಿರ್ಧಾರಗಳಿಗೆ ವಿರುದ್ಧವಾಗಿ ಹೋಗಲು ನಾನು ಬಯಸುವುದಿಲ್ಲ, ಆದ್ದರಿಂದ ನಾನು ಈಗ ಕೆಲಸ ಮಾಡಲು ಸಾಧ್ಯವಿಲ್ಲ ಎಂದು ಸರಬ್ಜೋತ್ ಸಿಂಗ್ ಸ್ಪಷ್ಟಪಡಿಸಿದ್ದಾರೆ.

ನನ್ನ ಮುಖ್ಯ ಗುರಿಯನ್ನು ನಾನು ಇನ್ನೂ ಸಾಧಿಸಿಲ್ಲ. ನಾನು ನನ್ನ ಮುಖ್ಯ ಗುರಿಯನ್ನು 2028 ರಲ್ಲಿ ಪೂರ್ಣಗೊಳಿಸುತ್ತೇನೆ. ನಾನು 2028 ರಲ್ಲಿ ಚಿನ್ನಕ್ಕಾಗಿ ಶೂಟ್ ಮಾಡಲು ಬಯಸುತ್ತೇನೆ ಎಂದು ತಿಳಿಸಿದ್ದಾರೆ.

# ಬ್ರ್ಯಾಂಡ್ ಬೆಂಗಳೂರು ಬ್ಯಾಂಡ್ ಬೆಂಗಳೂರು ಆಗದಿರಲಿ

**ಬೆಂಗಳೂರು:** ರಾಜ್ಯ ಸರ್ಕಾರ ಬ್ರ್ಯಾಂಡ್ ಬೆಂಗಳೂರು ಮಾಡುವುದಾಗಿ ಹೇಳುತ್ತಿದೆ. ಆದರೆ, ರಾತ್ರಿ ಒಂದು ಗಂಟೆಯವರೆಗೆ ಬ್ಯಾಂಡ್ ಬಾರಿಸಲು ಅವಕಾಶ ಕಲ್ಪಿಸಿದ್ದಾರೆ. ಹೀಗಾಗಿ ಇದು ಬ್ರ್ಯಾಂಡ್ ಬೆಂಗಳೂರು ಆಗುತ್ತದೊ, ಬ್ಯಾಂಡ್ ಬೆಂಗಳೂರು ಆಗುತ್ತದೊ ಗೊತ್ತಿಲ್ಲ. ಬೆಂಗಳೂರನ್ನು ಸ್ವಚ್ಛ ಬೆಂಗಳೂರನ್ನಾಗಿ ಮಾಡಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಸೋಮಕ್ಷತ್ರಿಯ ಗಾಣಿಗ ಸಮುದಾಯದ ಶ್ರೀ ವೇಣುಗೋಪಾಲಕೃಷ್ಣ ಸಮುದಾಯ ಭವನ ಉದ್ಘಾಟಿಸಿ ಮಾತನಾಡಿದ ಅವರು, ಗಾಣಿಗ ಸಮಾಜ ತನ್ನದೇ ಆದ ಇತಿಹಾಸ ಪರಂಪರೆ ಹೊಂದಿದೆ. ಚಿಂತನೆಯಲ್ಲಿ ಬಹಳ ಶ್ರೇಷ್ಠವಾಗಿದೆ. ವಿಜಯನಗರ ಕಾಲದಿಂದಲೂ ತನ್ನ ಶ್ರೇಷ್ಠತೆಯನ್ನು ಉಳಿಸಿಕೊಂಡು ಬಂದಿದೆ. ಯಾರಿಗೆ ಸ್ವಾಭಿಮಾನದ ಬದುಕು ಬದುಕಲು ಸಾಧ್ಯವಿಲ್ಲವೋ ಅವರಿಗೆ ಬದುಕು ಕಟ್ಟುವ ಕೆಲಸ ಮಾಡುವುದು ಮುಖ್ಯ. ಬಡತನದಿಂದ ಬಂದು ಬಡವರ ಪರವಾಗಿ ಕೆಲಸ ಮಾಡುವ ವ್ಯಕ್ತಿ ಪ್ರಧಾನಿ ನರೇಂದ್ರ ಮೋದಿಯವರು. ಅವರು ಗಾಣಿಗ ವೃತ್ತಿ ಮಾಡುತ್ತ ಬೆಳೆದವರು. ಅವರನ್ನು ನೋಡಿದಾಗ ಈ ಸಮಾಜದ ಶಕ್ತಿ ಎಷ್ಟಿದೆ ಅಂತಾ ಗೊತ್ತಾಗುತ್ತದೆ ಎಂದರು.



ಒಂದು ಕಾಲ ಇತ್ತು. ಭೂಮಿ ಇದ್ದವರು ಜಗತ್ತು ಆಳುತ್ತಿದ್ದರು. ನಂತರ ಹಣ ಇದ್ದವರು ಜಗತ್ತು ಆಳುತ್ತಿದ್ದರು. ಈಗ 21 ನೇ ಶತಮಾನ, ಇದು ಜ್ಞಾನದ ಯುಗ. ಜ್ಞಾನ ಎಲ್ಲಿದೆಯೋ ಅವರು ಜಗತ್ತನ್ನು ಆಳುತ್ತಾರೆ. ಅನೇಕ ವಿದೇಶಿಗರು ಭಾರತಕ್ಕೆ ಬಂದರೆ ಮೊದಲು ಬೆಂಗಳೂರಿಗೆ ಬರುತ್ತಾರೆ. ಅವರು ಬಂದು ವಿಧಾನಸೌಧಕ್ಕೆ ಬರುವುದಿಲ್ಲ. ಇನ್ಫೋಸಿಸ್ ಹಾಗೂ ವಿಪ್ರೋ ಕಡೆಗೆ ಹೋಗುತ್ತಾರೆ ಎಂದು ತಿಳಿಸಿದರು.

ಗಾಣಿಗ ಸಮಾಜ ಉತ್ತಮ ಐಕ್ಯ ಇರುವ ಸಮಾಜ. ಬುದ್ದಿವಂತರ ಸಮಾಜ. ಕಾರ್ಪೋರೇಷನ್ ಬ್ಯಾಂಕ್ ಅಧ್ಯಕ್ಷರಾಗಿದ್ದ ಅಣ್ಣಿಗೇರಿಯವರು ದೊಡ್ಡ ಬ್ಯಾಂಕ್ ನಡೆಸಿದರು. ಈ ಸಮಾಜದ ಮಕ್ಕಳಲ್ಲಿ ಪ್ರತಿಭೆ ಇದೆ. ಈ ಕಟ್ಟಡ ಕಟ್ಟಿರುವುದು ಒಳ್ಳೆಯದು. ಇದರಿಂದ ಬರುವ ಆದಾಯ ನಿಮ್ಮ ಮಕ್ಕಳ ಬವಿಷ್ಯಕ್ಕೆ ಬಳಸಿಕೊಳ್ಳಿ. ಎಸ್.ಎಂ.ಕೃಷ್ಣ ಅವರು ಜಮೀನು ಕೊಟ್ಟಿದ್ದಕ್ಕೆ ಈ ಕಟ್ಟಡ ಕಟ್ಟಲು ಸಾಧ್ಯವಾಗಿದೆ. ಅವರಿಗೆ ಕೃತಜ್ಞತೆ ಸಲ್ಲಿಸುತ್ತೇನೆಂದರು.

ರಾಜರಾಜೇಶ್ವರಿ ನಗರ ಕ್ಷೇತ್ರದ ಶಾಸಕ ಮುನಿರತ್ನ ಅವರು ಜನೋಪಯೋಗಿ ಶಾಸಕರಾಗಿದ್ದಾರೆ. ಅವರು ಕೇಳಿದ ಕೆಲಸಗಳಿಗೆಲ್ಲ ಹಣ ಕೊಟ್ಟಿದ್ದೇನೆ. ಈ ಭಾಗದಲ್ಲಿ ರಸ್ತೆ ಮಾಡಲು ಮಾಲೀಕರು ಜಮೀನು ನೀಡಲು ನಿರಾಕರಿಸಿದಾಗ ಮುನಿರತ್ನ ಅವರು ತಮ್ಮ ಬಾಂಡ್ ಪೇಪರ್‌ನಲ್ಲಿ ಸರ್ಕಾರದಿಂದ ಪರಿಹಾರ ಕೊಡಿಸುವುದಾಗಿ ಬರೆದು ಕೊಟ್ಟರು. ಮುನಿರತ್ನ ಅವರು ಕೋವಿಡ್ ಸಂದರ್ಭದಲ್ಲಿ ಜನರಿಗೆ ಮಾಡಿರುವ ಕೆಲಸದಿಂದ ಎಲ್ಲರಿಗೂ ಮಾದರಿಯಾಗಿದ್ದಾರೆ. ಮುನಿರತ್ನ ಅವರು ಕ್ಷೇತ್ರವನ್ನು ಸ್ವಚ್ಛವಾಗಿ ಇಟ್ಟುಕೊಂಡಿದ್ದಾರೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಶಾಸಕ ಮುನಿರತ್ನ, ಮಾಜಿ ಸಭಾಪತಿ ವಿ.ಆರ್. ಸುದರ್ಶನ, ಬಿಜೆಪಿ ಯುವ ಮುಖಂಡ ಭರತ ಬೊಮ್ಮಾಯಿ, ಚನ್ನಮ್ಮ ಬಸವರಾಜ ಬೊಮ್ಮಾಯಿ, ಮಂಜುನಾಥ ಉಡುಪಿ ಸೇರಿದಂತೆ ಗಾಣಿಗ ಸಮುದಾಯದ ಮುಖಂಡರು ಹಾಜರಿದ್ದರು.

## ರಾಜ್ಯ ಬಿಜೆಪಿಯಲ್ಲಿ ಮತ್ತೆ ಜೋರಾದ ಭಿನ್ನಮತ

# 'ದೋಸ್ತಿ' ಪಾದಯಾತ್ರೆಗೆ ಬಿಜೆಪಿ ರೆಬೆಲ್ಸ್ ಠಕ್ಕರ್?

**ಬೆಳಗಾವಿ:** ರಾಜ್ಯ ಬಿಜೆಪಿಯಲ್ಲಿ ಮತ್ತೊಮ್ಮೆ ಭಿನ್ನಮತ ಜೋರಾಗಿದೆ. ಮೈಸೂರು ಪಾದಯಾತ್ರೆ ಸಮಾರೋಪದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಮುಂದಾಳತ್ವ ವಹಿಸಿ ಯಶಸ್ವಿಯಾಗಿದ್ದರು. ಆದರೆ, ಇದು ಬಿಜೆಪಿ ರೆಬೆಲ್ ನಾಯಕರ ಕಣ್ಣು ಕೆಂಪಾಗಿಸಿದೆ.

ಬಿಜೆಪಿ ಬಂಡಾಯ ನಾಯಕರು ಬೆಳಗಾವಿಯಲ್ಲಿ ಜಾಂಬೋಟಿ ರಸ್ತೆಯ ಖಾಸಗಿ ರೆಸಾರ್ಟ್‌ನಲ್ಲಿ ಸಭೆ ಸೇರಿದ್ದರು. ರಮೇಶ್ ಜಾರಕಿಹೊಳಿ, ಬಸನಗೌಡ ಪಾಟೀಲ್ ಯತ್ನಾಳ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಅರವಿಂದ ಲಿಂಬಾವಳಿ, ಜಿ.ಎಂ. ಸಿದ್ದೇಶ್ವರ, ಪ್ರತಾಪ್ ಸಿಂಹ, ಅಣ್ಣಾಸಾಹೇಬ್ ಜೊಲ್ಲೆ, ಕುಮಾರ ಬಂಗಾರಪ್ಪ, ಬಿಎಸ್‌ವೈ ಆಪ್ತ ಎನ್.ಆರ್. ಸಂತೋಷ್ ಸೇರಿದಂತೆ 10ಕ್ಕೂ ಹೆಚ್ಚು ನಾಯಕರು ಭಾಗಿಯಾಗಿದ್ದರು.

ವಾಲ್ಮೀಕಿ ನಿಗಮ ಹಗರಣ ಖಂಡಿಸಿ ಕೂಡಲಸಂಗಮದಿಂದ ಬಳ್ಳಾರಿಯವರೆಗೂ ಪಾದಯಾತ್ರೆ ನಡೆಸುವ ಕುರಿತು ಚರ್ಚೆ ನಡೆಸಲಾಗಿದೆ. ಸೆಪ್ಟೆಂಬರ್ 17ರಂದು ಅಥವಾ ದೀಪಾವಳಿ ಬಳಿಕ ಕೂಡಲಸಂಗಮದಿಂದ ಬಳ್ಳಾರಿವರೆಗೆ ಪಾದಯಾತ್ರೆ ನಡೆಸಲು ಮುಹೂರ್ತ ಫಿಕ್ಸ್ ಮಾಡಲಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ.



ಜೊತೆಗೆ, ಸಭೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧ ನಾಯಕರೆಲ್ಲರೂ ಒಕ್ಕೊರಲಾಗಿ ಆಕ್ರೋಶ ಹೊರಹಾಕಿದ್ದಾರೆ ಎಂದು ತಿಳಿದು ಬಂದಿದೆ. ಸಭೆ ಬಗ್ಗೆ ಪ್ರತಿಕ್ರಿಯಿಸಿರುವ ಅರವಿಂದ ಲಿಂಬಾವಳಿ, ಇದು ಭಿನ್ನಮತ ನಾಯಕರ ಸಭೆ ಅಲ್ಲ. ವಾಲ್ಮೀಕಿ ನಿಗಮ ಹಗರಣ, ಎಸ್‌ಸಿ/ಎಸ್‌ಟಿ ಅನುದಾನ ದುರ್ಬಳಕೆ ವಿರುದ್ಧ ಹೋರಾಟ ಬಗ್ಗೆ ಚರ್ಚೆ ನಡೆದಿದ್ದು, ಮತ್ತೊಂದು ಸುತ್ತಿನ ಸಭೆ ಮಾಡಿ ನಿರ್ಧಾರ ಮಾಡ್ತೇವೆ ಎಂದಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com